ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 36 ಸಂಚಿಕೆ- 36 | PAGE-8 ಪುಟ-8 | ಗುರುವಾರ 13.03.2025 | RS.2/- ಬೆಲೆ 2/-

## ನಾನೇ ಸಿಎಂ ಸಿದ್ದರಾಮಯ್ಯ ಖಡಕ್ ಮಾತು



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮಾ.12: ನಾನೇ ಸಿಎಂ ಆಗಿರುತ್ತೇನೆ ಅಂತ ಸಿದ್ದರಾಮಯ್ಯ ಅವರು ಖಡಕ್ಕಾದ ಮಾತುಗಳಲ್ಲಿ ಪುನರುಚ್ಚರಿಸಿದ ಘಟನೆ ವಿಧಾನಸಭೆಯಲ್ಲಿ ನಡೆಯಿತು. ವಿಧಾನಸಭೆಯಲ್ಲಿಂದು ಗ್ಯಾರಂಟಿ ಜಾರಿ ಸಮಿತಿಗಳ ಸಂಬಂಧ ಸ್ಪಷ್ಟನೆ ಕೊಡುವಾಗ ಸಿಎಂ ಈ ಮಾತು ಹೇಳಿದರು.

ನಾವು ಮುಂದಿನ ಬಾರಿಯೂ ಗೆದ್ದು ಬರುತ್ತೇವೆ. ಬಿಜೆಪಿಯವರು ಗೆಲ್ಲಲ್ಲ. ನಾವೇ ನೂರಕ್ಕೆ ನೂರು ಮತ್ತೆ ಗೆದ್ದು ಬರುತ್ತೇವೆ ಎಂದು ಸಿಎಂ ವಿಶ್ವಾಸ ವ್ಯಕ್ತಪಡಿಸಿದರು. ಈ ವೇಳೆ ಆರ್.ಅಶೋಕ್, ನೀವು ಮೊದಲ ಸಲ ಸಿಎಂ ಆಗಿದ್ದಾಗ ಏ.. ಅಶೋಕ ಬರೆದುಕೊಳ್ಳಪ್ಪ, ನಾನೇ ಪರ್ಮನೆಂಟು ಅಂದಿದ್ರಿ. ಆದರೆ ಹಾಗಂದವರು ಕಾಣೆ-ಯಾಗಿ ಹೋದ್ರಿ, ಕಾಣದಂತೆ ಮಾಯವಾದನೋ ನಮ್ಮ ಶಿವಾ.. ಅಂತ. ಈಗ ಮತ್ತೆ ನಾನೇ ಬರ್ತೀನಿ ಅಂತಿದ್ದೀರಿ. ಹಾಗೆ ಹೇಳಿದ ಯಾರೂ ಸಿಎಂ ಸ್ಥಾನದಲ್ಲಿ ಉಳೀಲಿಲ್ಲ ಸರ್ ಎಂದು ಕಾಲೆಳೆದರು. ಸಿದ್ದರಾಮಯ್ಯ ಐದೂ ವರ್ಷ ಪೂರೈಸಲಿ ಅಂತಲೇ ನಾವು ಬಯಸ್ತೇವೆ. ಐದು ವರ್ಷ ಇವರ ಸರ್ಕಾರ ಇದ್ದರೆ, ಅದೇ ಪುಣ್ಯ ಅಂತ ಅಶೋಕ್ ಟಾಂಗ್ ಕೊಟ್ರು. ಆಗ, ಈ ಐದು ವರ್ಷ ಅಲ್ಲರೀ, ಮತ್ತೆ ಮುಂದಿನ ಐದು ವರ್ಷವೂ ನಾವೇ ಬರ್ತೇವೆ ಅಂತ ಸಿದ್ದರಾಮಯ್ಯ ಟಕ್ಕರ್ ಕೊಟ್ರು. ಸಿಎಂ ಆಗಿ ನೀವೇ ಇರ್ತೀರಾ? ಅಂತ ಈ ವೇಳೆ ಬಿಜೆಪಿಯ ಸುನೀಲ್ ಕುಮಾರ್ ಕೇಳಿದ ಪ್ರಶ್ನೆಗೆ, ಹೌದು ನಾನೇ ಇರ್ತೀನಿ ಅಂತ ಸಿದ್ದರಾಮಯ್ಯ ಕೌಂಟರ್ ಕೊಟ್ರು. ಇದು ವಿಧಾನಸಭೆಯಲ್ಲಿ ನಡೆದ ಆಸಕ್ತಿಕರ ಪ್ರಸಂಗವಾದರೂ ಸಿದ್ದರಾಮಯ್ಯ ಇನ್ಯಾರಿಗೋ ಸಂದೇಶ ಕೊಟ್ಟಂತಿತ್ತು.

## ಗ್ಯಾರಂಟಿ ಅನುಷ್ಠಾನ ಸಮಿತಿ ರದ್ದುಗೊಳಿಸಲು ರಾಜ್ಯಪಾಲರಿಗೆ ಪ್ರತಿಪಕ್ಷಗಳ ದೂರು

ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮಾ.12:ಕಾಂಗ್ರೆಸ್ ಕಾರ್ಯಕರ್ತರು ಮತ್ತು ನಾಯಕರು ಮುಖ್ಯಸ್ಥರಾಗಿರುವ ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅನುಷ್ಠಾನ ಸಮಿತಿ ಅಸಂವಿಧಾನಿಕವಾಗಿದ್ದು, ಅವುಗಳನ್ನು ರದ್ದುಗೊಳಿಸಬೇಕು ಎಂದು ಪ್ರತಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಶಾಸಕರು ಬುಧವಾರ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ದೂರು ಸಲ್ಲಿಸಿದರು. ಕಾಂಗ್ರೆಸ್ ಪಕ್ಷದ ಕಾರ್ಯಕರ್ತರನ್ನು ಒಳಗೊಂಡಿರುವ ಈ ಸಮಿತಿಗಳನ್ನು ಸಂಪೂರ್ಣವಾಗಿ ರಾಜಕೀಯ ಆಧಾರದ ಮೇಲೆ ರಚನೆ "ಅಸಂವಿಧಾನಿಕ" ಮಾತ್ರವಲ್ಲದೇ, ರಾಜ್ಯದ ಬೊಕ್ಕಸಕ್ಕೆ ಅನಗತ್ಯ ಹೊರೆಯಾಗಿದೆ ಎಂದು ಹೇಳಿದರು.

ಈ ವಿಚಾರವಾಗಿ ವಿಧಾನಸೌಧದ ಹೊರಗೆ ಪ್ರತಿಭಟನೆ ನಡೆಸಿದ ಬಿಜೆಪಿ, ಜೆಡಿಎಸ್ ಶಾಸಕರು ಎರಡನೇ ದಿನವೂ ವಿಧಾನಸೌಧದ ಕಲಾಪಕ್ಕೆ ಅಡ್ಡಿಪಡಿಸಿದರು. ನಂತರ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಜೆಡಿಎಸ್ ನಾಯಕ ಸಿ.ಬಿ.ಸುರೇಶ್ ಬಾಬು ಮತ್ತಿತರರ ನೇತೃತ್ವದಲ್ಲಿ ರಾಜಭವನಕ್ಕೆ ತೆರಳಿ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿದರು.

ಗ್ಯಾರಂಟಿ ಅನುಷ್ಠಾನ ಸಮಿತಿಗಳನ್ನು ಕೂಡಲೇ ವಿಸರ್ಜಿಸಬೇಕು ಎಂದು ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು. ಸಾರ್ವಜನಿಕ ಹಣದ ದುರ್ಬಳಕೆ ತಡೆಯಲು ರಾಜಕೀಯ ಪ್ರೇರಿತ ಸಮಿತಿಗಳನ್ನು ರದ್ದುಪಡಿಸಬೇಕು ಎಂದು ಮನವಿ ಮಾಡಿದರು.

ಅಲ್ಲದೆ, ಈ ಸಮಿತಿಗಳಿಗೆ ಮೀಸಲಿಟ್ಟ ಹಣವನ್ನು ಅಗತ್ಯ ಸಾರ್ವಜನಿಕ ಸೇವೆಗಳು ಮತ್ತು ಕಲ್ಯಾಣ ಯೋಜನೆಗಳಿಗೆ ವರ್ಗಾಯಿಸಲು ಮತ್ತು ಸ್ಥಳೀಯ ಸರ್ಕಾರಿ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಜನಪ್ರತಿನಿಧಿಗಳ ಪಾತ್ರವನ್ನು ಮರುಸ್ಥಾಪಿಸಲು ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಒತ್ತಾಯಿಸಿದ್ದಾರೆ. ಈ ಸಮಿತಿಗಳನ್ನು ಕೇವಲ ರಾಜಕೀಯ ನೆಲೆಯಲ್ಲಿ ರಚಿಸಿರುವುದು ಅಸಾಂವಿಧಾನಿಕ ಮಾತ್ರವಲ್ಲದೆ ರಾಜ್ಯದ ಬೊಕ್ಕಸಕ್ಕೆ ಅನಗತ್ಯ ಹೊರೆಯಾಗುತ್ತಿದೆ. ಈ ಸಮಿತಿಗಳು ಸಾರ್ವಜನಿಕರ ಸೇವೆಗೆ ಬದಲಾಗಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಗೆ ಆರ್ಥಿಕವಾಗಿ ಲಾಭ ಮಾಡಿಕೊಡಲು ಬಳಕೆಯಾಗುತ್ತಿವೆ ಎಂದು ಆರೋಪಿಸಿದ್ದಾರೆ.

ಸಮಿತಿ ಸದಸ್ಯರು ಹೆಚ್ಚಿನ ಗೌರವಧನವನ್ನು ಪಡೆಯುತ್ತಿದ್ದರೆ ಆಶಾ ಕಾರ್ಯಕರ್ತೆಯರು, ಮಧ್ಯಾಹ್ನದ ಊಟದ ಸಿಬ್ಬಂದಿ, ಅರೆಕಾಲಿಕ ಉಪನ್ಯಾಸಕರು ಮತ್ತು ಗುತ್ತಿಗೆ ನೌಕರರು ಕಡಿಮೆ ವೇತನಕ್ಕಾಗಿ ತಿಂಗಳುಗಳಿಂದ ಪ್ರತಿಭಟನೆ ನಡೆಸುತ್ತಿದ್ದಾರೆ. ರಾಜಕೀಯವಾಗಿ ರಚಿಸಿದ ಸಮಿತಿಗಳಿಗೆ ಉದಾರವಾಗಿ ಹಣ ನೀಡುವ ಸರ್ಕಾರ, ಅತ್ಯವಶ್ಯಕ ಸರ್ಕಾರಿ ಕೆಲಸಗಾರರ ಬೇಡಿಕೆಗಳನ್ನು ನಿರ್ಲಕ್ಷಿಸಿರುವುದು ತೀವ್ರ ಅನ್ಯಾಯವಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಗ್ಯಾರಂಟಿ ಅನುಷ್ಠಾನ ಸಮಿತಿಗೆ ಕಾಂಗ್ರೆಸ್ ಕಾರ್ಯಕರ್ತರ ನೇಮಕ: ಎರಡನೇ ದಿನವೂ ವಿಧಾನಸಭೆಯಲ್ಲಿ ವಿಪಕ್ಷಗಳ ಗದ್ದಲ

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯೇಂದ್ರ, ಈ ಸಮಿತಿಗಳು ಸಂವಿಧಾನ

(2ನೇ ಪುಟ ನೋಡಿ)

## ದಂಡಿ ಯಾತ್ರೆಯಲ್ಲಿ ಪಾಲ್ಗೊಂಡವರಿಗೆ ಪ್ರಧಾನಿ ಮೋದಿ ನಮನ



ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ, ಮಾ. 12: ದಂಡಿ ಯಾತ್ರೆಯಲ್ಲಿ ಪಾಲ್ಗೊಂಡವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ. 1930ರ ಮಾ.12ರಂದು ಉಪ್ಪಿನ ಮೇಲಿನ ಬ್ರಿಟಿಷ್ ತೆರಿಗೆಯನ್ನು ಪ್ರತಿಭಟಿಸಲು ಗಾಂಧಿ ಅವರು ಸಬರಮತಿ ಆಶ್ರಮದಿಂದ ದಂಡಿಗೆ ಮೆರವಣಿಗೆಯನ್ನು ಪ್ರಾರಂಭಿಸಿದ್ದರು.

ಇಂದು, ಭಾರತದ ಸ್ವಾತಂತ್ರ್ಯ ಹೋರಾಟದ ನಿರ್ಣಾಯಕ ಅಧ್ಯಾಯವಾದ ಐತಿಹಾಸಿಕ ದಂಡಿ ಮೆರವಣಿಗೆಯಲ್ಲಿ ಭಾಗವಹಿಸಿದ ಎಲ್ಲರಿಗೂ ನಾವು ಗೌರವ ಸಲ್ಲಿಸುತ್ತೆ?ವೆ. ಮಹಾತ್ಮ ಗಾಂಧಿಯವರ ನೇತೃತ್ವದಲ್ಲಿ ಈ ಮಾರ್ಚ್ ಸ್ವಾವಲಂಬನೆ ಮತ್ತು ಸ್ವಾತಂತ್ರ್ಯಕ್ಕಾಗಿ ರಾಷ್ಟ್ರವ್ಯಾಪಿ ಆಂದೋಲನವನ್ನು ಹುಟ್ಟುಹಾಕಿತು ಎಂದು ಮೋದಿ ಹೇಳಿದ್ದಾರೆ.

ದಂಡಿ ಯಾತ್ರೆಯಲ್ಲಿ ಭಾಗವಹಿಸಿದ ಎಲ್ಲರ ಧೈರ್ಯ, ತ್ಯಾಗ ಮತ್ತು ಸತ್ಯ ಮತ್ತು ಅಹಿಂಸೆಗೆ ಅಚಲ ಬದ್ಧತೆ ತಲೆಮಾರುಗಳಿಗೆ ಸ್ಫೂರ್ತಿ ನೀಡುತ್ತದೆ ಎಂದು ಅವರು ಹೇಳಿದರು. ಈ ಮೆರವಣಿಗೆಯು ಭಾರಿ ಜನಪ್ರಿಯ ಬೆಂಬಲವನ್ನು ಗಳಿಸಿತು ಮತ್ತು ಭಾರತದ ಸ್ವಾತಂತ್ರ್ಯ ಚಳವಳಿಯ ಪ್ರಮುಖ ತಿರುವು ಎಂದು ಪರಿಗಣಿಸಲಾಗಿದೆ ಎಂದು ತಿಳಿಸಿದ್ದಾರೆ.

## ಜಗದ್ಗುರು ರೇಣುಕಾಚಾರ್ಯರ ತತ್ವಗಳನ್ನು ಎಲ್ಲರೂ ಪಾಲಿಸೋಣ: ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ
ಬೀದರ:ಮಾ.12: ಇಡೀ ಮಾನವ ಕುಲಕ್ಕೆ ಒಳಿತು ಮಾಡಿರುವ ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವಗಳನ್ನು ನಮ್ಮೆಲ್ಲರ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ.ಶೈಲೇಂದ್ರ ಕೆ.ಬೆಲ್ದಾಳೆ ಹೇಳಿದರು.

ಅವರು ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಪೂಜ್ಯಶ್ರೀ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಮ್ಮ ದೇಶವು ಸಾಧು-ಸಂತರ, ಮಹಾತ್ಮರ, ಮಹಾನ್ ಜ್ಞಾನಿಗಳ, ದಾರ್ಶನಿಕರ, ಬಸವಾದಿ ಶರಣರ ದೇಶವಾಗಿದೆ. ಅನೇಕ ಮಹಾತ್ಮರ ಸಿದ್ಧಾಂತಗಳು, ತತ್ವ ಬೋಧನೆಗಳನ್ನು ಒಳಗೊಂಡ ದೇಶ ನಮ್ಮದಾಗಿದೆ. ಅಂತಹ ಮಹಾತ್ಮರಲ್ಲಿ ಮಹಾತ್ಮರಾದ, ಮಹಾನ್ ಜ್ಞಾನಿಗಳಲ್ಲಿ ಜ್ಞಾನಿಗಳಾದ ಶ್ರೀ ಜಗದ್ಗುರು ರೇಣುಕಾಚಾರ್ಯರು ಮಾನವ ಕುಲಕ್ಕೆ ಸಂದೇಶಗಳು ಎಲ್ಲಾ ಕಾಲಕ್ಕೂ ಅಜರಾಮರವಾಗಿವೆ. ಸಮಾಜವನ್ನು ಒಂದುಗೂಡಿಸಿ ಸಹಬಾಳ್ವೆಗೆ ಅನುವು ಮಾಡಿಕೊಟ್ಟಿದ್ದಾರೆ ಹಾಗೂ ಸಮಾಜದಲ್ಲಿ ಸಮಾನತೆ, ಶಾಂತಿ ಮತ್ತು ಉತ್ತಮವಾದ ಜೀವನ ನಡೆಸಲು ಇವರ ಬೋಧನೆ ಸಹಾಯಕವಾಗಿವೆ. ನಾವು ಕೂಡ ಸಮಾಜದಲ್ಲಿ

(2ನೇ ಪುಟ ನೋಡಿ)

## 4 ಸಾರಿಗೆ ನಿಗಮ ನಷ್ಟದಲ್ಲಿ, ಶಕ್ತಿ ಯೋಜನೆಗೆ ಸರ್ಕಾರ 2,000 ಕೋಟಿ ಹಣ ಬಾಕಿ ನೀಡಬೇಕು: ರಾಮಲಿಂಗಾ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮಾ.12: ಸಾರಿಗೆ ಇಲಾಖೆಯ 4 ನಿಗಮಗಳು ನಷ್ಟದಲ್ಲಿವೆ. ಶಕ್ತಿ ಯೋಜನೆಗೆ ಸರ್ಕಾರ 2 ಸಾವಿರ ಕೋಟಿ ಹಣ ಬಾಕಿ ನೀಡಬೇಕು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದರು.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಸಾರಿಗೆ ಇಲಾಖೆ ನಿಗಮಗಳ ನಷ್ಟದ ಬಗ್ಗೆ ಪ್ರಶ್ನೆ ಕೇಳಿದರು. ಇದಕ್ಕೆ ಸಚಿವ ರಾಮಲಿಂಗಾರೆಡ್ಡಿ ಉತ್ತರ ನೀಡಿದರು. ಕಳೆದ 5 ವರ್ಷಗಳಿಂದಲೂ 4 ಸಾರಿಗೆ

(2ನೇ ಪುಟ ನೋಡಿ)

## ಆರೋಗ್ಯ ಇಲಾಖೆಯಲ್ಲಿ ಖಾಲಿ ಹುದ್ದೆ ಭರ್ತಿಗೆ ಕ್ರಮ : ಸಚಿವ ದಿನೇಶ ಗುಂಡೂರಾವ ಭರವಸೆ



ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ: ಕಲ್ಯಾಣ ಕರ್ನಾಟಕ ಭಾಗದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ 4914 ಹುದ್ದೆಗಳ ಭರ್ತಿಗೆ ಸರಕಾರ ಅಗತ್ಯ ಕ್ರಮಕೈಗೊಳ್ಳುವುದಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ ತಿಳಿಸಿದ್ದಾರೆ.

ವಿಧಾನಮಂಡಲ ಅಧಿವೇಶನದಲ್ಲಿ ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ್ ಅವರ ಚುಕ್ಕೆಗುರುತಿಲ್ಲದ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ

(2ನೇ ಪುಟ ನೋಡಿ)

## ತಂದೆ-ತಾಯಿ, ಹಿರಿಯ ನಾಗರೀಕರ ಆರೈಕೆ ಮಾಡದಿದ್ದರೆ ಅವರ ಆಸ್ತಿಯಲ್ಲಿ ಪಾಲಿಲ್ಲ: ಕೃಷ್ಣ ಬೈರೇಗೌಡ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು, ಮಾ.12: ತಂದೆ-ತಾಯಿ ಹಾಗೂ ಹಿರಿಯರನ್ನು ಆರೈಕೆ ಮಾಡದಿದ್ದರೆ, ತನ್ನ ಮಕ್ಕಳಿಗೆ ಅಥವಾ ಸಂಬಂಧಿಕರಿಗೆ ಅವರು ನೀಡಿದ ವಿಲ್-ಧಾನಪತ್ರವನ್ನು ರದ್ದು ಮಾಡುವ ಅವಕಾಶವನ್ನು ಕೇಂದ್ರ ಸರ್ಕಾರದ ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ 2007 ನೀಡಿದೆ ಎಂದು ಸಚಿವ ಕೃಷ್ಣ ಬೈ-ರೇಗೌಡ ಅವರು ಮಾಹಿತಿ ನೀಡಿದರು.

ಇಂದು ವಿಧಾನ ಪರಿಷತನಲ್ಲಿ ಸದಸ್ಯೆ ಬಲ್ಕೀಸ್ ಬಾನು ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಇತ್ತೀಚಿನ ದಿನಗಳಲ್ಲಿ ಮಕ್ಕಳು ತಮ್ಮ ತಂದೆ-ತಾಯಿಯನ್ನೇ ಆರೈಕೆ ಮಾಡದಂತಹ ಹಲವರು ಪ್ರಕರಣಗಳು ಬೆಳಕಿಗೆ ಬರುತ್ತಿವೆ. ಒಂದು ವೇಳೆ ಮಕ್ಕಳು ಅಥವಾ ಸಂಬಂಧಿಕರು ತಮ್ಮನ್ನು ಆರೈಕೆ ಮಾಡದಿದ್ದರೆ ಅವರ ಹೆಸರಿಗೆ ಮಾಡಿರುವ ವಿಲ್ ಅಥವಾ ದಾನಪತ್ರವನ್ನು ರದ್ದು ಮಾಡುವ ಅಧಿಕಾರ ಹಿರಿಯ ನಾಗರೀಕರಿಗೆ ಇದೆ ಎಂದು ಮಾಹಿತಿ ನೀಡಿದರು.

ಕೇಂದ್ರ ಸರ್ಕಾರ 2007 ರಲ್ಲೇ ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆಯನ್ನು ಜಾರಿಗೆ ತಂದಿದೆ. ಆದರೆ, ಈ ಬಗ್ಗೆ ಹಲವರಿಗೆ ಮಾಹಿತಿಯೇ ಇಲ್ಲ. ಈ ಮಾಹಿತಿಯನ್ನು ಪರಿಣಾಮಕಾರಿಯಾಗಿ ಎಲ್ಲರಿಗೂ ತಲುಪಿಸಬೇಕು ಎಂಬ ಉದ್ದೇಶದಿಂದಲೇ ಪರಿಷತನಲ್ಲಿ ಈ ಕಾಯ್ದೆಯ ಬಗ್ಗೆ ಉಲ್ಲೇಖಿಸುತ್ತಿದ್ದೇನೆ. ಈ ಕಾಯ್ದೆಯ ಪ್ರಕಾರ ಮಕ್ಕಳು ಅಥವಾ ಸಂಬಂಧಿಕರು

(2ನೇ ಪುಟ ನೋಡಿ)

## ಚಾಲ್ತಿಯಲ್ಲಿರಲಿ ಆಧಾರ ಕಾರ್ಡ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ
ಬೀದರ:ಮಾ.12: ಜಿಲ್ಲೆಯ ಎಲ್ಲಾ ನಾಗರಿಕರು ಮೌಲ್ಯಯುತವಾಗಿರುವ ಆಧಾರ್ ಗುರುತಿನ ಚೀಟಿ ಹೊಂದುವುದು ಅವಶ್ಯ. ಹೊಸ ನೋಂದಣಿ, ಮರುನೋಂದಣಿಗಾಗಿ ಬಯೋಮೆಟ್ರಿಕ್ ನೀಡುವ ಮೂಲಕ ಆಧಾರ್ ಗುರುತಿನ ಚೀಟಿ ಚಾಲ್ತಿಯಲ್ಲಿರುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಕರೆ ನೀಡಿದರು.

ಅವರು ಸೋಮವಾರ ಬೀದರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಆಧಾರ್ ಮಾನಿಟರಿಂಗ್ ಕಮೀಟಿಯ ಸಭೆಯಲ್ಲಿ ಮಾತನಾಡಿದರು.

2 ಲಕ್ಷ ನವೀಕರಣ ಬಾಕಿ: ಜಿಲ್ಲೆಯಲ್ಲಿ 5 ವರ್ಷ ಮೇಲ್ಪಟ್ಟ 1,23,830 ಮಕ್ಕಳು, 15 ವರ್ಷ ಮೇಲ್ಪಟ್ಟ 79,033 ಸೇರಿದಂತೆ 2,02,863 ಜನರು ಆಧಾರ್ ನವೀಕರಣ ಬಾಕಿಯಿದೆ. ಶಾಲಾ ವಿದ್ಯಾರ್ಥಿಗಳಿದ್ದಲ್ಲಿ ಕ್ಲಸ್ಟರ್ ಮಟ್ಟದಲ್ಲಿ ಆಧಾರ್ ಕ್ಯಾಂಪ್ ನಿಯೋಜಿಸಿ ಬಯೋಮೆಟ್ರಿಕ್ ಮಾಡಿಸಬೇಕು ಹಾಗೂ ಮೊಬೈಲ ನಂ ಅಪಡೇಟ್ ಬಾಕಿಯಿರುವ 1,30,923 ಆ ನಿವಾಸಿಗಳು ಅಂಚೆ ಕಛೇರಿ ಹತ್ತಿರದ ಪೋಸ್ಟ ಮಾಸ್ಟರಗೆ ಭೇಟಿ ಮಾಡಿ ಮೊಬೈಲ್ ಅಪಡೇಟ್ ಮಾಡಿಕೊಳ್ಳಬೇಕು ಅಂಚೆ ಕಛೇರಿ ಅಧೀಕ್ಷರಿಗೆ ಸೂಚಿಸಲಾಗಿದೆ.

ಜಿಲ್ಲೆಯಲ್ಲಿ 19,46,492 ಲಕ್ಷ ಜನರಿಂದ ನೋಂದಣಿ ದೇಶದ ನಾಗರೀಕರಿಗೆ ಸರ್ಕಾರ ವಿಶಿಷ್ಟ ಗುರುತಿನ ಚೀಟಿ ವಿತರಿಸುತ್ತಿದ್ದು, ಅಗತ್ಯ ದಾಖಲೆ ನೀಡಿ ನೋಂದಾಯಿಸಿಕೊಂಡು ಕಡ್ಡಾಯವಾಗಿ ಆಧಾರ್ ಕಾರ್ಡ್ ಮಾಡಿಸಿಕೊಳ್ಳಬೇಕು. ಜಿಲ್ಲೆಯಲ್ಲಿ ಈವರೆಗೆ 19,46,492 ಲಕ್ಷ ಜನರು ಆಧಾರ್ ನೋಂದಣಿ ಮಾಡಿಸಿದ್ದಾರೆ. ಅವರಲ್ಲಿ 5 ವರ್ಷದೊಳಗಿನ 85,037 ಸಾವಿರ ಮಕ್ಕಳು, 5 ರಿಂದ 18 ವರ್ಷದ 4,39,333 ಲಕ್ಷ ಜನರು, 18 ವರ್ಷ ಮೇಲ್ಪಟ್ಟ 14,22,122 ಲಕ್ಷ ಸಾರ್ವಜನಿಕರು ಆಧಾರ್ ಕಾರ್ಡ್ ಪಡೆದಿದ್ದಾರೆ. ರಾಜ್ಯ ಆಧಾರ್ ನೋಂದಣಿ ಪ್ರಾಧಿಕಾರ ಜಿಲ್ಲೆಯ ನಾಡಕಛೇರಿಯ ಜನಸ್ನೇಹಿ ಕೇಂದ್ರಗಳ ಕಛೇರಿಯಲ್ಲಿ ಆಯ್ದ ಬ್ಯಾಂಕ್, ಅಂಚೆ ಕಚೇರಿಗಳಲ್ಲಿ ನೋಂದಣಿ ಕೇಂದ್ರ ತೆರೆದಿದೆ. ಕಚೇರಿ ಸಮಯದಲ್ಲಿ ಆಧಾರ್ ಸೇವೆ ಪಡೆದುಕೊಳ್ಳಬೇಕು. ಇಲ್ಲದಿದ್ದಲಿ ಆಧಾರ್ ನಿಷ್ಕ್ರಿಯಗೊಂಡು ವಿವಿಧ ಸೌಲಭ್ಯ ಅಥವಾ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಅವರ ಆಸ್ತಿಯಲ್ಲಿ ಪಾಲಿಲ್ಲ: ಕೃಷ್ಣ ಬೈರೇಗೌಡ

ಹಿರಿಯ ನಾಗರೀಕರನ್ನು ಆರೈಕೆ ಮಾಡಬೇಕು. ಔಷಧಿ ಸೇರಿದಂತೆ ಅವರ ಮಾಸಿಕ ಖರ್ಚಿಗೆ ಹಣ ನೀಡಬೇಕು. ಒಂದು ವೇಳೆ ಹಣ ನೀಡದಿದ್ದರೆ ಅಥವಾ ಆರೈಕೆ ಮಾಡಲು ನಿರ್ಲಕ್ಷಿಸಿದರೆ ಹಿರಿಯ ನಾಗರೀಕರು ಸೆಕ್ಷನ್ 09ರ ಅಡಿಯಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಬಳಿ ದೂರು ಸಲ್ಲಿಸಬಹುದು ಎಂದು ತಿಳಿಸಿದರು.

ಹಿರಿಯ ನಾಗರೀಕರ ದೂರು ಸಾಬೀತಾದರೆ, ತಂದೆ ತಾಯಿಯಿಂದ ಆಸ್ತಿ ಪಡೆದು ಅವರ ಆರೈಕೆ ಮಾಡದಿದ್ದರೆ, ಸೆಕ್ಷನ್ 23ರಂತೆ ಪೋಷಕರು ತಮ್ಮ ಮಕ್ಕಳ ಅಥವಾ ಸಂಬಂಧಿಕರ ಹೆಸರಿನಲ್ಲಿ ಬರೆದಿರುವ ವಿಲ್ ಅಥವಾ ದಾನಪತ್ರವನ್ನು ರದ್ದುಗೊಳಿಸಿ ಮತ್ತೆ ಪೋಷಕರ ಹೆಸರಿಗೇ ಮರುಸ್ಥಾಪಿಸಲು ಕಾನೂನಿನಲ್ಲಿ ಅವಕಾಶ ಇದೆ. ಈ ಜವಾಬ್ದಾರಿಯನ್ನು ಉಪ ವಿಭಾಗಾಧಿಕಾರಿಗಳಿಗೆ ನೀಡಲಾಗಿದೆ. ಈಗಾಗಲೇ ಉಪ ವಿಭಾಗಾಧಿಕಾರಿಗಳ ಮುಂದೆ ಸಾವಿರಾರು ಪ್ರಕರಣಗಳಿವೆ. ಇದೇ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿ ತಿಂಗಳೂ ಉಪ ವಿಭಾಗಾಧಿಕಾರಿಗಳ ಜೊತೆ ಮಾಸಿಕ ಸಭೆ ನಡೆಸಲಾಗುತ್ತಿದೆ. ಅಲ್ಲದೆ, ಜಿಲ್ಲಾಧಿಕಾರಿಗಳಿಗೆ ಅಪೀಲು ಹೋಗಲೂ ಸಹ ಅರ್ಜಿದಾರರಿಗೆ ಅವಕಾಶ ನೀಡಲಾಗಿದೆ ಎಂದು ತಿಳಿಸಿದರು.

### ಆಧಾರ ಕಾರ್ಡ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಸೇವೆ ಪಡೆಯಲು ತೊಂದರೆಯಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

10 ವರ್ಷದ ಹಿಂದೆ ಆಧಾರ್ ನೋಂದಣಿ ಮಾಡಿಸಿದ ಎಲ್ಲರೂ ಗುರುತಿನ ಹಾಗೂ ವಿಳಾಸ ದಾಖಲೆ ನೀಡಿ ಅಧಾರ್ ಕೇಂದ್ರದಲ್ಲಿ ಮರು ಅಪ್ಲೋಡ್ ಮಾಡಿಸಬೇಕು. ಇದನ್ನು ಟಥಿಂಚಿಜ್ಞುಚಿಚಿಡಿ.ಣುಜಚು. ರಠಠ.ಏಟ ಅನ್‌ಲೈನ್ ಮೂಲಕವೂ ನೇರವಾಗಿ ನವೀಕರಿಸಲು ಅವಕಾಶವಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ, ಯುಐಡಿಐ ಮ್ಯಾನೇಜರ್, ಸಹಾಯಕ ಮ್ಯಾನೇಜರ್ ಡೇವಿಡ್ ಸೀಮನ್ಸೆ, ಡಿಡಿಪಿಐ ಬೀದರ, ಜಿಲ್ಲಾ ವಾರ್ತಾಧಿಕಾರಿ ಬೀದರ, ಅಂಚೆ ಕಛೇರಿಯ ವ್ಯವಸ್ಥಾಪಕರು, ಲೀಡ್ ಬ್ಯಾಂಕ ವ್ಯವಸ್ಥಾಪಕರು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಬೀದರ, ಜಿಲ್ಲಾ ಆಧಾರ ಸಮಾಲೋಚಕರು ಹಾಗೂ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

### ಎಲ್ಲರೂ ಪಾಲಿಸೋಣ: ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ

ಒಂದಾಗಿ ಬದುಕಬೇಕು ಮತ್ತು ಭಾರತವನ್ನು ವಿಶ್ವಗುರುವನ್ನಾಗಿ ಮಾಡಬೇಕು ಎಂದು ಹೇಳಿದರು.ಬೇಮಳಖೇಡಾ ಗೋರ್ಟಾ ಹಿರೇಮಠದ ಸ್ವಾಮಿಗಳಾದ ಡಾ. ರಾಜಶೇಖರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಗುರು ಶಿಷ್ಯರ ನಡುವಿನ ಅವಿನಾಭಾವ ಸಂಬಂಧವೇ ವೀರಶೈವ ಲಿಂಗಾಯತ ಧರ್ಮದ ಪರಂಪರೆಯಾಗಿದೆ. ಸರ್ವರ ಕಲ್ಯಾಣಕ್ಕಾಗಿಯೇ ಜನ್ಮತಾಳಿದ ಶ್ರೀ ಜಗದ್ಗುರು ರೇಣುಕಾಚಾರ್ಯರ ಕೊಡುಗೆ ಈ ಸಮಾಜಕ್ಕೆ ಅಪಾರವಾಗಿದೆ. ರೇಣುಕಾಚಾರ್ಯರು ತಮ್ಮ ಶಿಷ್ಯರಾದ ಅಗಸ್ತ್ಯ ಮಹರ್ಷಿಗಳಿಗೆ ತಮ್ಮ ಬೋಧನೆಗಳನ್ನು ಭೋಧಿಸಿದರೆಂದು ಸಿದ್ಧಾಂತ ಶಿಖಾಮಣಿ ಗ್ರಂಥದಲ್ಲಿ ಕಾಣಬಹುದು ಹಾಗೂ ಲಂಕೆಯಲ್ಲಿ 3 ಕೋಟಿ ಲಿಂಗಗಳನ್ನು ಸ್ಥಾಪಿಸಿರುವುದು ಈ ಗ್ರಂಥದಿಂದ ತಿಳಿದುಬಂದಿದೆ ಎಂದರು. ಹಾಗೂ ಕಲಬುರ್ಗಿ ಕೇಂದ್ರಿಯ ವಿಶ್ವವಿದ್ಯಾಲಯದಲ್ಲಿ ವೀರಶೈವ ಲಿಂಗಾಯತ ಅಧ್ಯಾಯನ ಕೇಂದ್ರ ಸ್ಥಾಪಿಸಬೇಕು ಮತ್ತು ಬೀದರ ನಗರದಲ್ಲಿ ರೇಣುಕಾಚಾರ್ಯರ ಸರ್ಕಲ್ ನಿರ್ಮಾಣಕ್ಕೆ ಜಾಗ ಮತ್ತು ಅನುಮತಿ ನೀಡಬೇಕೆಂದು ಅಪರ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಸ್ವಾಮಿಜಿಗಳು ಮನವಿ ಮಾಡಿದರು.ಕಾರ್ಯಕ್ರಮಕ್ಕೂ ಮುಂಚಿತವಾಗಿ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಶ್ರೀ ಜಗದ್ಗುರು ರೇಣುಕಾಚಾರ್ಯರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ನಂತರ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಜಗದ್ಗುರು ಶ್ರೀ ರೇಣುಕಾಚಾರ್ಯರ ಮೆರವಣಿಗೆಗೆ ಚಾಲನೆ ನೀಡಿದರು.ಈ ಕಾರ್ಯಕ್ರಮದಲ್ಲಿ ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಿಶೆಟ್ಟಿ, ಅಪರ ಜಿಲ್ಲಾಧಿಕಾರಿ ಶಿವುಕುಮಾರ ಶೀಲವಂತ, ನಿರಗುಡಿ ಹವಾ ಮಲ್ಲಿನಾಥ ಮಹಾರಾಜರು, ದಿಶಾ ಸಮಿತಿ ಸದಸ್ಯರಾದ ಶಿವಯ್ಯ ಸ್ವಾಮಿ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ಸಿದ್ರಾಮಯ್ಯ ಸ್ವಾಮಿ, ನಗರಸಭೆ ಸದಸ್ಯರಾದ ದಿಗಂಬರ ಮಡಿವಾಳ, ಸಿಧು ಫುಲಾರಿ, ವಿಶ್ವಲಿಂಗ ಸ್ವಾಮಿ, ವೈಜಿನಾಥ ಕಮಠಾಣೆ, ಶಿವಶರಣಪ್ಪ ವಾಲಿ, ರಾಮಕೃಷ್ಣ ಸಾಳೆ, ಈಶ್ವರ ಸಿಂಗ್ ಠಾಕೂರ್, ರವಿಂದ್ರ ಸ್ವಾಮಿ, ಮಹೇಶ್ವರ ಸ್ವಾಮಿ ಸೇರಿದಂತೆ ಸಮಾಜದ ಇತರೇ ಮುಖಂಡರು ಉಪಸ್ಥಿತರಿದ್ದರು.

### ರಾಜ್ಯಪಾಲರಿಗೆ ಪ್ರತಿಪಕ್ಷಗಳ ದೂರು

ಬಾಹಿರವಾಗಿದ್ದು, ಶಾಸಕರ ಅಧಿಕಾರ ಮೊಟಕುಗೊಳಿಸುವ ಯತ್ನವಾಗಿದೆ ಎಂಬುದನ್ನು ರಾಜ್ಯಪಾಲರ ಗಮನಕ್ಕೆ ತಂದಿದ್ದೇವೆ. ಈ ಸಮಿತಿಗಳಿಂದ ಕೆಲವೆಡೆ ಸಚಿವರು, ಶಾಸಕರ ಸವಲತ್ತುಗಳನ್ನು ಮೊಟಕುಗೊಳಿಸುತ್ತಿರುವುದರಿಂದ ಮುಂದಿನ ದಿನಗಳಲ್ಲಿ ವಿಶೇಷ ಹಕ್ಕು ಮಂಡನೆಗೆ ಮುಂದಾಗುತ್ತೇವೆ ಎಂದು ತಿಳಿಸಿದರು.

### 2,000 ಕೋಟಿ ಹಣ ಬಾಕಿ ನೀಡಬೇಕು: ರಾಮಲಿಂಗಾ ರೆಡ್ಡಿ

ನಿಗಮಗಳು ನಷ್ಟದಲ್ಲಿವೆ. 2019–20ರಿಂದ 2023–24ವರೆಗೆ ಕೆಎಸ್‌ಆರ್‌ಟಿಸಿ– 1500.34 ಕೋಟಿ ನಷ್ಟ. ಬಿಎಂಟಿಸಿ– 1544.62 ಕೋಟಿ. ಕಲ್ಯಾಣ ಕರ್ನಾಟಕ ಸಾರಿಗೆ– 777.64 ಕೋಟಿ.ವಾಯುವ ವಾಯುವ್ಯ ಕರ್ನಾಟಕ ನಿಗಮ– 1386.58 ಕೋಟಿ ನಷ್ಟದಲ್ಲಿವೆ ಎಂದು ಸಚಿವರು ಅಂಕಿಅಂಶಗಳನ್ನ ಕೊಟ್ಟರು.

ಸಾರಿಗೆ ನಿಗಮಗಳು ನಷ್ಟದಲ್ಲಿವೆ. ಸರ್ಕಾರ ಸಹಕಾರ ಕೊಡದೇ ಹೋದರೆ ಸಾರಿಗೆ ನಿಗಮಗಳಿಗೆ ಕಷ್ಟ ಆಗುತ್ತದೆ. ಇಡೀ ದೇಶದಲ್ಲಿ ಸಾರಿಗೆ ನಿಗಮಗಳು ನಷ್ಟದಲ್ಲಿವೆ. ನಷ್ಟವನ್ನು ತಡೆಯಲು ಬಸ್ ಟಿಕೆಟ್ ದರ ಜಾಸ್ತಿ ಮಾಡಲಾಗಿದೆ. ಸಿಎಂ ಅವರು 2 ಸಾವಿರ ಕೋಟಿ ಲೋನ್ ಕೊಡಿಸಿದ್ದಾರೆ. ಅದನ್ನ ಸರ್ಕಾರ ತೀರಿಸುತ್ತದೆ. ಮೋಟಾರ್ ಟ್ಯಾಕ್ಸ್ ವಿನಾಯ್ತಿ ಸಾರಿಗೆ ಇಲಾಖೆಗೆ ಸರ್ಕಾರ ಕೊಟ್ಟಿದೆ ಎಂದು ತಿಳಿಸಿದರು. 2 ಸಾವಿರ ಕೋಟಿ ಶಕ್ತಿ ಯೋಜನೆ ಹಣವನ್ನ ಸರ್ಕಾರ ಬಾಕಿ ಉಳಿಸಿಕೊಂಡಿದೆ. 9,978 ಕೋಟಿ ಶಕ್ತಿ ಹಣ ಸರ್ಕಾರ ಕೊಡಬೇಕು. ಇದರಲ್ಲಿ 2 ಸಾವಿರ ಕೋಟಿ ಹಣ ಸರ್ಕಾರ ಬಾಕಿ ಉಳಿಸಿಕೊಂಡಿದೆ ಎಂದು ತಿಳಿಸಿದರು.

### ಸಚಿವ ದಿನೇಶ ಗುಂಡೂರಾವ ಭರವಸೆ

ಅವರು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಗ್ರೂಪ್ (ಎ) 488,ಗ್ರೂಪ್ (ಬಿ) 41,ಗ್ರೂಪ್ (ಸಿ)2689, ಗ್ರೂಪ್ (ಡಿ)1696 ಹುದ್ದೆಗಳು ಖಾಲಿ ಇವೆ. ಈ ಪೈಕಿ 2022ರಲ್ಲಿ ವಿಶೇಷ ನೇಮಕಾತಿಯಡಿ 320 ಹುದ್ದೆಗಳ ಭರ್ತಿಗೆ ಸರಕಾರ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿತ್ತು.

ಈಗಾಗಲೇ ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿ ಪರಿಶೀಲನಾ ಕಾರ್ಯ ಪೂರ್ಣಗೊಂಡಿದೆ. 2024 ರಲ್ಲಿ ಖಾಲಿ ಇರುವ 120 ತಜ್ಞ ವೈದ್ಯರು ಮತ್ತ 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆ ಸಹಮತಿಸಿದೆ. ಅದರಂತೆ ಷರತ್ತುಗಳೊಂದಿಗೆ ಭರ್ತಿ ಮಾಡಿಕೊಳ್ಳಲು ಕಡತವೂ ಚಾಲ್ತಿಯಲ್ಲಿರುತ್ತದೆ ಎಂದು ಅವರು ತಿಳಿಸಿದ್ದಾರೆ. ಇನ್ನೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಗ್ರೂಪ್ (ಬಿ) ,ಗ್ರೂಪ್ (ಸಿ) ವೃಂದದ 877 ಅರೆ ವೈದ್ಯಕೀಯ ಹುದ್ದೆಗಳ ಭರ್ತಿ ಮಾಡುವ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ ಎಂದು ಸಚಿವ ದಿನೇಶ ಗುಂಡೂರಾವ ಅವರು ತಿಳಿಸಿದ್ದಾರೆ.

## ರೇಣುಕಾಚಾರ್ಯ ತತ್ವ, ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.12 : ರೇಣುಕಾಚಾರ್ಯರ ಜೀವನ ತತ್ವ, ಸಿದ್ಧಾಂತಗಳನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ರಾಯಚೂರು ಗ್ರೇಡ್–2 ತಹಶೀಲ್ದಾರ್ ಭೀಮರಾಯ್ಯ ಅವರು ಹೇಳಿದರು.

ಮಾ.12ರ ಬುಧವಾರ ದಂದು ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಗದ್ಗುರು ರೇಣುಕಾಚಾರ್ಯ ಜಯಂತಿ ಹಾಗೂ ಯುಗಮಾನೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಸಂದೇಶವನ್ನು ರೇಣುಕಾಚಾರ್ಯರು ಸಾರಿದ್ದಾರೆ. ಎಲ್ಲ ಧರ್ಮದವರು ಸಾಮರಸ್ಯದಿಂದ ಬದುಕಬೇಕು. ಭಾರತದ ಪುಣ್ಯಭೂಮಿಯಲ್ಲಿ ಹಲವಾರು ಧರ್ಮಗಳು ಜನ್ಮ ಪಡೆದು ಮಾನವರ ಐಹಿಕ ಉದ್ಧಾರಕ್ಕೆ ಮತ್ತು ಅಲೌಕಿಕ ಪ್ರಾಪ್ತಿಗೆ ತಮ್ಮದೇ ಆದ ಕೊಡುಗೆಯನ್ನು ನೀಡಿವೆ ಎಂದರು.

## ಲಿಂಗಧಾರಣೆಯಿಂದ ಸುಸಂಸ್ಕೃತರಾಗಿ : ಡಾ. ಮಹಾದೇವ ಮಹಾಸ್ವಾಮಿಗಳು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಮಾ.12:ವೀರಶೈವ ಲಿಂಗಾಯತರು ಸೇರಿದಂತೆ ಪ್ರತಿಯೊಬ್ಬರು ಲಿಂಗಧಾರಣೆ ಮಾಡುವುದರೊಂದಿಗೆ ಸಂಸ್ಕೃತರಾಗಿ ಜೀವನ ನಡೆಸಲು ಸಾಧ್ಯ ಆದ್ದರಿಂದ ಲಿಂಗಧಾರಣೆ ಮಾಡಿಕೊಂಡು ಆಚಾರವಂತರಾಗಿ ಎಂದು ಶ್ರೀ ಅನ್ನದಾನೇಶ್ವರ ಶಾಖಾಮಠದ ಪೂಜ್ಯರಾದ ಶ್ರೀ ಮಹಾದೇವ ಮಹಾಸ್ವಾಮಿಗಳು ಹೇಳಿದರು.

ಜಿಲ್ಲೆಯ ಕುಕನೂರು ತಾಲೂಕಿನ ವಿವಿಧತೆಗಳಲ್ಲಿ ಜಗದ್ಗುರು ಶ್ರೀರೇಣುಕಾಚಾರ್ಯರ ಜಯಂತಿಯನ್ನು ಆಚರಣೆ ಮಾಡಲಾಯಿತು. ಈವೇಳೆಯಲ್ಲಿ ತಾಲೂಕಿನ ಹರಿಶಂಕರ ಬಂಡಿ ಗ್ರಾಮದಲ್ಲಿ ಅನ್ನದಾನೇಶ್ವರ ಶಾಖಾಮಠ ಹಾಗೂ ಗ್ರಾಮಸ್ಥರ ಸಹಭಾಗಿತ್ವದಲ್ಲಿ ಜಗದ್ಗುರು ರೇಣುಕಾಚಾರ್ಯರ ಜಯಂತಿ ಪ್ರಯುಕ್ತ ಲಿಂಗಧಾರಣೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಈ ವೇಳೆ ಶ್ರೀಗಳು ಮಾತನಾಡುತ್ತಾ

ಮಾತಿಗಿಂತ ಕಾಯಲೇಸು ಎಂಬ ನಾನುಡಿಯನ್ನು ಪ್ರತಿಯೊಬ್ಬರು ಕೇಳಿರುತ್ತೀರಿ ಅದರಂತೆ ಬರಿ ಮಾತನಾಡುವುದು ಬಿಟ್ಟು ಕಾರ್ಯವನ್ನು ಅನುಷ್ಠಾನ ಗೊಳಿಸುವಲ್ಲಿ ಮುಂದಾದಾಗ ಧರ್ಮ ಉಳಿಯಲು ಸಾಧ್ಯ ಹಾಗೂ ವೀರಶೈವ ಲಿಂಗಾಯತರು ಲಿಂಗಧಾರಣೆ ಮಾಡಿಕೊಂಡು ಜೀವನ ನಡೆಸಿದಾಗ ಸುಸಂಸ್ಕೃತರಾಗಲು ಸಾಧ್ಯ ಎಂದು ಹೇಳಿದರು. ಈ ವೇಳೆಯಲ್ಲಿ 51ಕ್ಕೂ ಹೆಚ್ಚು ಜನ ಲಿಂಗಧಾರಣೆ ಮಾಡಿಕೊಂಡರು.

ಪಟ್ಟಣದ ತಹಸಿಲ್ದಾರರ ಕಾರ್ಯಾಲಯದಲ್ಲೂ ಸಹ ಜಯಂತಿ ಆಚರಣೆ ಮಾಡಲಾಗಿದ್ದು ಈ ವೇಳೆ ಗ್ರೇಡ್ 2 ತಹಸಿಲ್ದಾರರಾದ ಮುರಳಿದಾರರ ಕುಲಕರ್ಣಿ ಮಾತನಾಡಿ ಜಗದ್ಗುರುಗಳು ಲೋಕ ಕಲ್ಯಾಣಕ್ಕಾಗಿ ತಮ್ಮ ಜೀವನವನ್ನೇ ಸವಿಸಿದರು. ನಾವೆಲ್ಲರೂ ಅವರ ಹಾಕಿಕೊಟ್ಟ ಮಾರ್ಗದಲ್ಲಿ ಸಾಗಬೇಕು ಎಂದು ಹೇಳಿದರು.

ಪಟ್ಟಣದ ಶ್ರೀ ರೇಣುಕಾಚಾರ್ಯ ವೃತ್ತದಲ್ಲಿ ಜರುಗಿದ ಜಯಂತಿಯಲ್ಲಿ ರೇಣುಕಾಚಾರ್ಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರೊಂದಿಗೆ ಜಯಂತಿ ಆಚರಣೆ ಮಾಡಲಾಯಿತು.

ಪ್ರಮುಖರಾದ ಶಿವಕುಮಾರ ನಾಗಲಾಪೂರಮಠ, ಈಶಯ್ಯ ಶಿರೂರಮಠ, ವೀರಯ್ಯ ದೇವಗಣಮಠ, ಸಿದ್ದಯ್ಯ ಉಳ್ಳಾಗಡ್ಡಿಮಠ, ಮಹೇಶ ಕಲ್ಮಠ, ಕರಬಸಯ್ಯ ಬಿನ್ನಾಳ, ಅನಿಲ್ ಆಚಾರ್, ಕಳಕಪ್ಪ ಕಂಬಳಿ, ಸಿದ್ದಲಿಂಗಯ್ಯ ಬಂಡಿ, ಮಂಜುನಾಥ ನಾಡಗೌಡರ, ಮಂಜುನಾಥ ಗುನ್ನಳ್ಳಿ ಹಿರೇಮಠ ಹಾಗೂ ಇತರರಿದ್ದರು.

## ದ್ವಿತೀಯ ಪಿಯುಸಿ ಪರೀಕ್ಷೆ; 97 ವಿದ್ಯಾರ್ಥಿಗಳು ಗೈರು ಹಾಜರಿ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು ಮಾ.12: ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ 2025ರ ಮಾ.12ರ ಬುಧವಾರ ನಡೆದ ದ್ವಿತೀಯ ಪಿಯುಸಿ–01ರ ರಸಾಯನಶಾಸ್ತ್ರ ಹಾಗೂ ಬೇಸಿಕ್ ಮ್ಯಾಥ್ಸ್ ವಿಷಯದ ಪರೀಕ್ಷೆಯಲ್ಲಿ ಒಟ್ಟು 97ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.

ಜಿಲ್ಲೆಯ 49 ಕೇಂದ್ರಗಳಲ್ಲಿ ರಸಾಯನಶಾಸ್ತ್ರ ವಿಷಯದಲ್ಲಿ ಒಟ್ಟು 5309 ನೋಂದಣೆ–ಯಾಗಿದ್ದು, 5215 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಿಯಾಗಿದ್ದಾರೆ.

## ನಗರಸಭೆಯಲ್ಲಿ ಶ್ರೀರೇಣುಕಾಚಾರ್ಯ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ರಬಕವಿ–ಬನಹಟ್ಟಿ:ಮಾ.12: ತಾಲೂಕಿನರ–ಬನಗರಸಭೆಯ ಸಭಾಭನದಲ್ಲಿ ಸರ್ಕಾರದ ನಿರ್ದೇಶನದಂತೆ ಶ್ರೀ–ರೇಣುಕಾಚಾರ್ಯರ ಭಾವ ಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿ ಜಯಂತಿಯನ್ನು ಆಚರಣೆ ಮಾಡಿದರು.

ಬನಹಟ್ಟಿಯ ಶ್ರೀ,ಮಠದ ಶರಣಬಸವ ಶ್ರೀಗಳು ಹಾಗು ಚಿಮ್ಮಡದ ವಿರಕ್ತಮಠದ ಪ್ರಭು ಶ್ರೀಗಳು ನಗರಸಭೆಗೆ ಆಗಮಿಸಿ ಶ್ರೀ,ರೇಣುಕಾಚಾರ್ಯರ ಆಧ್ಯಾತ್ಮಿಕ ಚಿಂತಣೆಯನ್ನು ಹೇಳಿ ಭಾವ ಚಿತ್ರಕ್ಕೆ ಪುಷ್ಪಾರ್ಚಣೆ ಮಾಡಿದರು.

ಇದೇ ಸಂದರ್ಭದಲ್ಲಿ ಪೌರಾಯುಕ್ತ ಜಗದಿಶ ಇಟ್ಟಿ, ಸ್ಥಾಯಿಸಮಿತಿಯ ಅಧ್ಯಕ್ಷ ಅರುಣ ಬುದ್ನಿ, ವ್ಯವಸ್ಥಾಪಕ ಮುಕೇಶ ಬನಹಟ್ಟಿ, ದುಂಡಯ್ಯಲಿಂಗದ್, ಶಿವರುಧ್ರಯ್ಯ ಕಾಡದೇವರ, ಶಂಭುಲಿಂಗಯ್ಯ ಹಿರೇಮಠ, ಗಂಗಯ್ಯ ಬಂಗಿ, ದಯಾನಂದ ಬಾಗಲಕೋಟಮಠ, ಬಾಳಯ್ಯ ಪೂಜಾರಿ, ಬಸವರಾಜ ಅಮ್ಮಣಗಿಮಠ, ಗಂಗಯ್ಯ ಹಿರೇಮಠ. ಸೇರಿದಂತೆ ಅನೇಕರು ಇದ್ದರು.

## ನರೇಗಾ ಕಾರ್ಮಿಕರೊಂದಿಗೆ ಮಹಿಳಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.12: ತಾಲೂಕಿನ ಹಲಬರ್ಗಾ ಗ್ರಾಮ ಪಂಚಾಯತಿ ವ್ಯಾಪ್ತಿಯ ತೇಗಂಪುರ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಕೆಲಸ ಮಾಡುತ್ತಿರುವ ಕೂಲಿ ಕಾರ್ಮಿಕ ಮಹಿಳೆಯರೊಂದಿಗೆ ಬುಧವಾರ ವಿಶ್ವ ಮಹಿಳಾ ದಿನಾಚರಣೆ ಆಚರಿಸಲಾಯಿತು.

ತಾಲೂಕು ಪಂಚಾಯತಿ ಸಹಾಯಕ ನಿರ್ದೇಶಕ ಚಂದ್ರಶೇಖರ ಬನ್ನಾಳೆ ಅವರು ಕೇಕ್ ಕತ್ತರಿಸಿ ಕೂಲಿ ಕಾರ್ಮಿಕರಿಗೆ ಸಿಹಿ ವಿವರಿಸಿದರು.

ನಂತರ ಮಾತನಾಡಿದ ಅವರು, ಕುಟುಂಬ ಮತ್ತು ದೇಶದ ಪ್ರಗತಿಯಲ್ಲಿ ಮಹಿಳೆಯರ ಕೊಡುಗೆ ಅನನ್ಯವಾಗಿದೆ. ನಮ್ಮ ದೇಶದ ಸಂವಿಧಾನದಲ್ಲಿ ಮಹಿಳೆಯರಿಗಾಗಿ ಅನೇಕ ಹಕ್ಕುಗಳನ್ನು ಕೊಡಲಾಗಿದೆ. ಲಿಂಗ ತಾರತಮ್ಯವಿಲ್ಲದೆ ಎಲ್ಲರಿಗೂ ಸಮಾನವಾದ ಅವಕಾಶವನ್ನು ನೀಡಲಾಗಿದೆ ಎಂದರು.

ಇನ್ನೂ ಕೆಲವು ಕಡೆ ಬಾಲ್ಯ ವಿವಾಹ ಪದ್ದತಿ ಜಾರಿಯಲ್ಲಿದೆ. ಇದನ್ನು ತಡೆಗಟ್ಟಬೇಕಾದರೆ ತಾಯಂದಿರು ತಮ್ಮ ಮಕ್ಕಳ ಭವಿಷ್ಯವನ್ನು ಗಮನದಲ್ಲಿ ಇಟ್ಟುಕೊಳ್ಳಬೇಕು. ಹಾಗೆಯೇ ಬಾಲ್ಯವಿವಾಹ ಮಾಡಲು ಮನೆಯಲ್ಲಿ ಸಿದ್ದರಾದರೆ ಅದನ್ನು ತಾಯಂದಿರು ಪ್ರತಿಭಟಿಸಬೇಕು ಎಂದು ತಿಳಿಸಿದರು.

ಗ್ರಾಮ ಪಂಚಾಯತಿ ಅಧ್ಯಕ್ಷೆ ಪದ್ಮಿನಿಬಾಯಿ ಶಿವಪಾಲ್ ಸಿಂಗ್ ಠಾಕೂರ ಅಧ್ಯಕ್ಷೆ ವಹಿಸಿದ್ದರು. ಇದೇ ವೇಳೆ ನೂರು ದಿನ ಪೂರೈಸಿದ ಕಾರ್ಮಿಕರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಪ್ರಮುಖರಾದ ಚಂದ್ರಕಾಂತ ಫುಲೆ, ಶಿವಕುಮಾರ್ ಪಾಟೀಲ್ ತೇಗಂಪುರ, ಪಿಂಟು ಠಾಕೂರ್, ರಮೇಶ ಬೆಲ್ದಾರ, ಕಾರ್ಯದರ್ಶಿ ಅನಿತಾ ಕೆಪ್ಪೆ, ಮಾಯಾವತಿ ಟೀಳೆಕರ್, ಜ್ಯೋತಿ, ಸವಿತಾ ಕುಪ್ಪೆ ಶಶಿಕಲಾ, ಬಂಡೆಮ್ಮ ಮೇಟಾರೆ ಸೇರಿದಂತೆ ಹಲವರು ಇದ್ದರು.

## ಮೊಟ್ಟಮೊದಲು ವೀರಶೈವ ಲಿಂಗಾಯತ ಧರ್ಮವನ್ನು ರಚಿಸಿ ಮಾನವ ಧರ್ಮಕ್ಕೆ ಜೈ ಎಂದ ಶ್ರೀರೇಣುಕಾಚಾರ್ಯರು ; ಶರಣಬಸವ ಶ್ರೀಗಳು




ಮಲ್ಲಮ್ಮ ನುಡಿ ವಾರ್ತೆ

ರಬಕವಿ–ಬನಹಟ್ಟಿ:ಮಾ.12: ಶ್ರೀರೇಣುಕಾಚಾರ್ಯರು ಪಾಲ್ಗುಣಮಾಸದತ್ರಯೋದಶಿಯಂದು ಅಂದರೆ ಇಂದಿನ ದಿನ ಲಿಂಗದಿಂದ ಉದ್ಭವಿಸಿದ ಅವರು ವೀರಶೈವ ಧರ್ಮ ಸ್ಥಾಪಿಸಿ ಮಹಾತ್ಮರಾದವರು ಎಂದು ಬನಹಟ್ಟಿಯ ಶ್ರೀಮಠದ ಶರಣಬಸವ ಶಿವಾಚಾರ್ಯ ಶ್ರೀಗಳು ಹೇಳಿದರು.

ರಬಕವಿ–ಬನಹಟ್ಟಿತಹಶೀಲ್ದಾರ ಕಛೇರಿಯಲ್ಲಿ ತಹಶಿಲ್ದಾರ ಗಿರಿಶ ಸ್ವಾಧಿ ನೈತೃತ್ವದಲ್ಲಿ ಶ್ರೀ,ರೇಣುಕಾಚಾರ್ಯರ ಜಯಂತಿಯನ್ನು ಆಚರಿಸುವ ಸಂದರ್ಭದಲ್ಲಿ ಮಾತನಾಡಿದ ಇವರು ಕಲಿಯುಗದಲ್ಲಿ ಆಂಧ್ರ ಪ್ರದೇಶದ ಕೊಳಲುಪಾಕಿ ಎಂಬ ಪ್ರದೇಶದಲ್ಲಿ ಉದ್ಭವಿಸಿ ಅವತರಿಸಿಕೊಂಡು ವೀರಶೈವ ಧರ್ಮವನ್ನು ಸ್ಥಾಪಿಸಿ ಪ್ರಸಾರ ಮಾಡಿ, ಮಾನವ ಕುಲ ಉದ್ದರಿಸುವಲ್ಲಿ ಜಗತಿನಾದ್ಯಂತ ಸಾರಿರುವ ಬಗ್ಗೆ ಇಗೂ ಕೂಡಾ ಉಲ್ಲೆಖದ ಆಧಾರಗಳು ಸಿಗುತ್ತವೆ. ರಾಜ್ಯಾದ್ಯಂತ ಸರ್ಕಾದಿಂದ ಪ್ರತಿ ಕಛೇರಿಗಳಲ್ಲಿ ಇವತ್ತಿನ ದಿನ ಅವರ ಜಯಂತಿಯನ್ನು ಅದಿಕೃತವಾಗಿ ಆಚರಣೆ ಮಾಡಲಾಗುತ್ತಿದೆ ಎಂದರು.

ರೇಣುಕಾಚಾರ್ಯರು ವೀರಶೈವ ಧರ್ಮದ ಪ್ರಸಾರ ಅಲ್ಲದೆ ಮಾನವಕುಲ ಜಾಗ್ರತಿಗಾಗಿ ಪಯಣಿಸುವ ದಾರಿಯ ನದಿಯ ತೀರದಲ್ಲಿ, ಜಾತವೇದ ಮುನಿಗಳ ಕಂಡು ಧರ್ಮ ಭೊಧನೆ ಮಾಡಿ ಅದೇ ಸ್ಥಳದಲ್ಲಿ ಶ್ರೀವೀರಭಧ್ರರ ಪೀಠವನ್ನು ಸ್ಥಾಪಿಸಿ ವೀಶ್ವದ ತುಂಬಾ ಪರಚಾರ–ಕ್ಕೆ ಸಂಚರಿಸಿ ಭೋದನೆಗಾಗಿ ಸಿದ್ದಾಂತ ಶಿಖಾಮಣಿ ಬರೆದು ಶಿವನ ಪಂಚ ಮುಖಗಳಾಗಿ ಅವತರಿಸಿಕೊಂಡು ರಂಭಾಪುರಿ, ಕಾಶಿ, ಕೇಧಾರ, ಉಜ್ಜೈನಿ, ಶ್ರೀಶೈಲ ಈ ಪಂಚಪೀಠಗಳನ್ನು ಸ್ಥಾಪಣೆಯಲ್ಲಿ ಹಸಿರು, ಕೆಂಪು, ನೀಲಿ, ಹಳದಿ, ಬಿಳಿಯದು ಐದು ಬಣ್ಣಗಳನ್ನು ಗುರುತಿಸಿ ಆಯಾ ಪೀಠಗಳನ್ನು ನೀಡಿ ಮಾನವ ಕುಲದ ಶಾಂತಿ ಸಂ–ಕೇತಿಸಿ ಮಾನವ ಧರ್ಮಕ್ಕೆ ಜಯವಾಗಲಿ ಎಂದು ಸಾರಿದ ಮಾಹಾತ್ಮರು ಎಂದು ಹೇಳಿದರು.

ಚಿಮ್ಮಡದ ವಿರಕ್ತ ಮಠದ ಪ್ರಭು ಶ್ರೀಗಳು ಮಾತನಾಡಿ ಶ್ರೀ,ರೇಣುಕಾಚಾರ್ಯರು ಹಾಕಿ ಕೊಟ್ಟ ದಾರಿಯಲ್ಲಿ ವೀರಶೈವ ಧರ್ಮವನ್ನು ರಕ್ಷೇಣೆ ಮಾಡಿ ಅವರ ಚಿಂತನೆಗಳನ್ನು ಪ್ರತಿಯೋಬ್ಬರು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಇದೇಸಂಧರ್ಭದಲ್ಲಿಜಂಗಮ ಸಮುದಾಯದ ಬನಹಟ್ಟಿ ಅಧ್ಯಕ್ಷ ದುಂಡಯ್ಯಲಿಂಗದ್, ರಬಕವಿಯ ಅಧ್ಯಕ್ಷ ವಕೀಲರಾದ ಜಿ.ಎಸ್.ಅಮ್ಮಣಗಿಮಠ. ಹಿರಿಯರಾದ ಶೀವಾನಂದ ಬಾಗಲಕೋಟಮಠ, ಶಂಕ್ರಯ್ಯ ಕಾಡದೇವರ, ಶಂಭುಲಿಂಗಯ್ಯ ಹಿರೇಮಠ, ಶಿವರುಧ್ರಯ್ಯ ಕಾಡದೇವರ, ರಾಜೇಂದ್ರ ಹಿರೇಮಠ, ಶಿವಾನಂದ ಹಿರೇಮಠ, ದುಂಡಯ್ಯ ಕಾಡದೇವರ, ವಿರುಪಾಕ್ಷಯ್ಯ ಮಠದ, ಕಲ್ಲಯ್ಯ ಹಿರೇಮಠ, ಈರಯ್ಯ ವಿಭೂತಿಮಠ, ಸಂ–ಜಯ ಅಮ್ಮಣಗಿ, ವೀರಭಧ್ರ ಶಾಸ್ತ್ರಿಹಿರೇಮಠ, ಮಾಹಾತೇಶ ಕುರ್ಣಿ, ನಾಗಯ್ಯ ಭಕ್ಕೈಗೊಳ, ಆಸಂಗಿಯ ಗ್ರಾಮದ ರಾಜು ಮಠದ. ಸೇರಿದಂತೆ ಅಣೆಕರು ಇದ್ದರು.

## ಕಲಿಕಾ ಹಬ್ಬ ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಸಹಾಯ ಸರ್ದಾರ್ ಅಲಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಮಕ್ಕಳಲ್ಲಿ ಹುದಗಿರುವ ಪ್ರತಿಭೆಯನ್ನು ಗುರುತಿಸಲು ಕಲಿಕಾ ಹಬ್ಬ ಸಹಾಯವಾಗಿದೆ ಎಂದು ಸಮಗ್ರಶಿಕ್ಷಣ ಹುಮನಾಬಾದ ಕ್ಷೇತ್ರದ ವಿಶೇಷ ಶಿಕ್ಷಕ ಸರ್ದಾರ ಅಲಿ ತಾಲೂಕಿನ ಬೆಮಳಖೇಡ ಗ್ರಾಮದ ಸರ್ಕಾರಿ ಪ್ರೌಢ ಶಾಲೆ ಆವರಣದಲ್ಲಿ ಹಮ್ಮಿಕೊಂಡಿದ್ದ ಕಲಿಕಾ ಹಬ್ಬ ಉದ್ಘಾಟಿಸಿ ಮಾತನಾಡುತ್ತಾ ತಿಳಿಸಿದರು. ವಿದ್ಯಾರ್ಥಿಗಳು ಪಠ್ಯಪುಸ್ತಕ ಅಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದು ಅತ್ಯವಶಕವಾಗಿದೆ ಕಲಿಕಾ ಹಬ್ಬ ವಿದ್ಯಾರ್ಥಿಗಳು ವಿದ್ಯಾರ್ಥಿಗಳ ಜ್ಞಾನಾರ್ಜನೆಗೆ ಸಹಾಯವಾಗಿದೆ ಎಂದರು. ಸರ್ಕಾರಿ ಪ್ರೌಢ ಶಾಲೆ ಮುಖ್ಯ ಗುರುಗಳಾದ ಪ್ರಕಾಶ ನಾಯಕ ಮಾತನಾಡಿ, ವಿದ್ಯಾರ್ಥಿಗಳು ನೋಡಿ ಕಲಿ, ಮಾಡಿ ಕಲಿ ಎಂಬ ಯುಕ್ತಿಗೆ ಈ ಒಂದು ಕಲಿಕಾ ಹಬ್ಬ ಸಹಯವಾಗಿದೆ ಎಂದರು. ಪರಿಸರವಾದಿ ಶೈಲೇಂದ್ರ ಕಾವಡಿ ಮಾತನಾಡಿ, ಕಲಿಕಾ ಹಬ್ಬ ವಿದ್ಯಾರ್ಥಿಗಳಿಗೆ ವರದಾನವಾಗಿದೆ ಇದರ ಸದುಪಯೋಗ ಪಡೆದುಕೊಳ್ಳಲು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಈ ಕಲಿಕಾ ಹಬ್ಬದಲ್ಲಿ. ಉಡಮನಳ್ಳಿ, ಕಾರಪಾಕಪಳ್ಳಿ, ಕಾರಪಾಕಪಳ್ಳಿ ತಾಂಡಾ ವಿಠಲಪುರ್, ಬೆಮಳಖೇಡಾ ವಿದ್ಯಾರ್ಥಿಗಳು ಭಾಗವಹಿಸಿದರು. ಮುಖ್ಯಗುರುಗಳಾದ ವೀರಪ್ಪ, ಅರ್ಚನಾ, ಸಾವಕಯ್ಯಾ, ಸಾವಿತ್ರಿಬಾಯಿ, ಮಮತಾದೇವಿ, ಸುನೀಲ, ಧನರಾಜ, ಪ್ರೇಮ ಜೀ ಫೌಂಡೇಶನ್ ಸಿಬ್ಬಂದಿಗಳು ಉಪಸ್ಥಿತರಿದ್ದರು. ಸಿಆರ್‌ಪಿ ರಾಜಣ್ಣ ಬೊಂಬಳಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೊನೆಯಲ್ಲಿ ಶರಣಪ್ಪ ಕಣಜಿ ನಿರೋಪಿಸಿ ವಂದಿಸಿದರು.

## ಸೌಹಾರ್ದತೆಯೇ ಸಮಾಜದ ಸೌಂದರ್ಯ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 12 ಸೌಹಾರ್ದತೆಯಿಂದ ಕೂಡಿದ ಸಮಾಜ ಭಾವೈಕ್ಯತೆಯ ಸೌಂದರ್ಯದಿಂದ ತುಂಬಿರುತ್ತದೆ, ಮತ್ತು ಅಂತಹ ಸಮಾಜದಲ್ಲಿ ಯಾವಾಗಲೂ ಸ್ನೇಹದ ಮಾಧುರ್ಯ ಜಿನುಗುತ್ತಿರುತ್ತದೆ ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಗ್ರಾಮದ ಶ್ರೀ ಹಜರತ್ ದಾವಲ್ ಮಲಿಕ್ ಸಾಹೇಬರ ದರ್ಗಾದಲ್ಲಿ ಗ್ರಾಮದ ಮುಸ್ಲಿಂ ಬಾಂಧವರಿಂದ ಏರ್ಪಡಿಸಿದ ಗುರುವಂದನೆ ಹಾಗೂ 781ನೇ ತುಲಾಭಾರ ಸೇವೆ ಸಮಾರಂಭದ ಪಾವನ ಸನ್ನಿಧಾನವಹಿಸಿ ಮಾತನಾಡಿದ ಶ್ರೀಗಳು, ಸದ್ಭಾವ, ಸದ್ವಿಚಾರ, ಸನ್ನಡತೆ ಮನುಷ್ಯನನ್ನು ಧರ್ಮವಂತನಾಗಿ ಮಾರ್ಪಡಿಸುವಲ್ಲಿ ಗಣನೀಯ ಪಾತ್ರ ವಹಿಸುತ್ತವೆ.

ಯಾವುದೇ ಧರ್ಮ ವಾಗಿರಲಿ ಅದರ ಮೂಲ ಧ್ಯೇಯ ಆತ್ಮಕಲ್ಯಾಣ ಹಾಗೂ ಲೋಕಕಲ್ಯಾಣವೇ ಆಗಿದೆ.

ಧರ್ಮಾಚರಣೆಗಳು ವಿಭಿನ್ನವಾದರೂ ಆಂತರ್ಯದ ತಿರುಳು ಒಂದೇ ಎನ್ನುವುದನ್ನು ಎಲ್ಲರೂ ಮನಗಾಣಬೇಕು.

ವಿಭಿನ್ನಧರ್ಮೀಯರೆಲ್ಲರೂ ಒಂದಾಗಿ ಬಾಳುವ ವಿಶಿಷ್ಟ ಪುಣ್ಯ ಭೂಮಿ ನಮ್ಮ ಭಾರತ.

ಭಾರತೀಯರೆಂದರೆ ಬೆಳಕಿನೆಡೆಗೆ ಚಲಿಸುವ ಪಥಿಕರು.

ಚಿತ್ತಶುದ್ಧಿಯಿಂದ ವೈಯಕ್ತಿಕ ಒಳಿತು ಸಾಧಿಸುವುದರೊಂದಿಗೆ, ರಾಷ್ಟ್ರದ ಉನ್ನತಿಗೆ ಪೂರಕ ವಾತಾವರಣ ನಿರ್ಮಿಸಲು ಅನುಕೂಲವಾಗುತ್ತದೆ.

ಭಾವ ನೈರ್ಮಲ್ಯದಿಂದ ಧರ್ಮದ ನಿಜ ಸ್ವರೂಪ ಅರಿತು, ಎಲ್ಲರೊಂದಿಗೆ ಬೆರೆತು ಬಾಳುವ ಕಲಾತ್ಮಕ ಜೀವನ ಶೈಲಿ ನಮ್ಮದಾಗುತ್ತದೆ.

ಪವಿತ್ರ ರಂಜಾನ ಮಾಹೆಯಲ್ಲಿ ಹಾರಕೂಡ ಗ್ರಾಮದ ಮುಸ್ಲಿಂ ಬಾಂಧವರು ಶ್ರೀ ಹಜರತ್ ದಾವಲ್ ಮಲಿಕ್ ಸಾಹೇಬರ ದರ್ಗಾದಲ್ಲಿ ಆಯೋಜಿಸಿದ ಗುರುವಂದನೆ "ಸಬ್ಕಾ ಮಾಲಿಕ ಏಕ ಹೈ" ಎನ್ನುವ ಅದ್ಭುತ ಸಂದೇಶ ಸಾರುವುದರೊಂದಿಗೆ ಹೊರ ಜಗತ್ತಿಗೆ ಭಾವೈಕ್ಯತೆಯ ನಿಜರೂಪ ತಿಳಿಸಿಕೊಟ್ಟಿರುವುದು ಶ್ಲಾಘನೀಯವಾಗಿದೆ.

ಈ ನೆಲದ ಸಮನ್ವಯತೆಯ ತತ್ವ ಎತ್ತಿ ಹಿಡಿದ ತಮಗೆಲ್ಲರಿಗೂ ಹಾರಕೂಡ ಧೀಶ ಹಾಗೂ ಶ್ರೀ ಹಜರತ್ ದಾವಲ್ ಮಲಿಕ್ ಸಾಹೇಬರು ಮಂಗಳವನ್ನುಂಟು ಮಾಡಲಿ ಎಂದು ಶುಭ ಹಾರೈಸಿದರು.

ಮಾಜಿ ಎಂಎಲ್ಸಿ ವಿಜಯ ಸಿಂಗ್ ಮಾತನಾಡಿದರು. ಚನ್ನಪ್ಪ ಹೋಳಕರ್ ಪ್ರಸ್ತಾವಿಕ ಮಾತನಾಡಿದರು.

ಈ ಸಂದರ್ಭದಲ್ಲಿ ಮಾಜಿ ಎಪಿಎಂಸಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ, ಮಲ್ಲಿನಾಥ ಹಿರೇಮಠ ಹಾರಕೂಡ, ಖಾಜಾಸಾಬ ಮುಲ್ಲಾ, ಹಾರಕೂಡ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶೋಭಾತಿ ಮೂಲಗೆ, ಪಿಡಿಓ ಜ್ಯೋತಿ ಕೋಡಿಮಠ, ಡಿ.ಕೆ. ದಾವೂದ್, ರವೀಂದ್ರ ಭುರಾಳೆ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರಾದ ಆನಂದ ಪಾಟೀಲ, ಎಸ್. ಡಿ. ಎಂ. ಸಿ. ಅಧ್ಯಕ್ಷ ಮಹಾದೇವ ಪೂಜಾರಿ, ಗ್ರಾಮ ಪಂಚಾಯಿತಿ ಸದಸ್ಯರಾದ ಬಾಲಾಜಿ ಬಿರಾದಾರ, ಸಿದ್ರಾಮ ಹೆಗಡೆ, ಗನಿಸಾಬ್ ಪಿಂಜಾರ, ಅಕ್ಬರ್ ಪಠಾಣ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಮೊದಲು ಹಾರಕೂಡ ಶ್ರೀಮಠದಿಂದ ಹಜರತ್ ದಾವಲ್ ಮಲಿಕ್ ಸಾಹೇಬರ ದರ್ಗಾದವರಿಗೆ ಅಲಂಕೃತ ಸಾರೋಟಿನಲ್ಲಿ ಹಾರಕೂಡ ಪರಮ ಪೂಜ್ಯರ ಅದ್ದೂರಿ ಮೆರವಣಿಗೆ ಜರುಗಿತು.

### ಗೋಮಾತೆಯನ್ನು ಸಮೃದ್ಧಿ ಮತ್ತು ಪರಿಶುದ್ಧತೆಯ

## ಸಂಕೇತವಾಗಿ ಪೂಜಿಸುತ್ತೇವೆ: ಆನಂದರಾಜ ಪ್ರಭುಗಳು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಗೋಶಾಲೆಯ ಸ್ಥಾಪನೆಯು ನಮ್ಮ ವಿದ್ಯಾರ್ಥಿಗಳಲ್ಲಿ ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಆಳವಾಗಿ ಬೇರೂರಿರುವ ಪೋಷಣೆ ಮತ್ತು ನಿಸ್ವಾರ್ಥತೆ–ಯ ಸಾಕಾರವಾದವನ್ನು ಮತ್ತು ಗೋಮಾತೆಯ ಬಗ್ಗೆ ಆಳವಾದ ಸೇವೆ, ಕರುಣೆ ಮತ್ತು ಗೌರವವನ್ನು ಮೂಡಿಸುವ ಗುರಿಯನ್ನು ಹೊಂದಿದೆ. ನಮ್ಮ ಶ್ರೀಮಂತ ಪರಂಪರೆಯಲ್ಲಿ, ಹಸುವನ್ನು ಸಮೃದ್ಧಿ ಮತ್ತು ಪರಿಶುದ್ಧತೆಯ ಸಂಕೇತವಾಗಿ ಪೂಜಿಸುವದಲ್ಲದೆ, ಎಲ್ಲಾ ಜೀವಿಗಳ ಬಗ್ಗೆ ನಮ್ಮ ಗೌರವವನ್ನು ಪ್ರತಿನಿಧಿಸುತ್ತದೆ. ಈ ಉಪಕ್ರಮದ ಮೂಲಕ ನಮ್ಮ ವಿದ್ಯಾರ್ಥಿಗಳು ಈ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಪ್ರೇರಿಪಿಸಲು ನಾವು ಆಶಿಸುತ್ತೇವೆ. ವಿದ್ಯಾರ್ಥಿಗಳ ಹೃದಯದಲ್ಲಿ ಸಹಾನುಭೂತಿ, ದಯೆ ಮತ್ತು ಜವಾಬ್ದಾರಿಯನ್ನು ಬೆಳೆಸುತ್ತದೆ. ಎಂದು ಆನಂದರಾಜ ಪ್ರಭುಗಳು ಹುಮನಾಬಾದ ತಾಲೂಕಿನ ದಿ ಮಾಣಿಕ ಪಬ್ಲೀಕ್ ಶಾಲೆಯ ಆವರಣದಲ್ಲಿ "ಅಶೋಕ–ಆನಂದ ಗೋಶಾಲೆ"ಯನ್ನು ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಿ.ಜೆ.ಮೋದಿ ಫೌಂಡೆಷನ್ ವತಿಯಿಂದ ಶ್ರೀ ಮನೋಜ ಜೆ ಶಾ ಹಾಗೂ ಶ್ರೀಮತಿ ಶಿಲ್ಪಾ ಎಂ ಶಾ, ಶ್ರೀ ಉದಯ ಕಪಾಸಿ, ಮತ್ತು ಶ್ರೀಮತಿ ಕಿರಣ ಕಪಾಸಿ ಉಪಸ್ಥಿತರಿದ್ದರು. ಸಂಸ್ಥೆಯ ಕಾರ್ಯದರ್ಶಿಗಳಾದ ಚಾರು ದತ್ತಪ್ರಭು, ಪ್ರಾಚಾರ್ಯರಾದ ಮೃಗಾಂಕ ಪಾಂಡೆ, ಉಪ ಪ್ರಾಚಾರ್ಯರಾದ ವಿಲಾಸ ನಾಯಕ, ಶ್ರೀಮತಿ ಮಮತಾಪ್ರಭು, ಶ್ರೀಮತಿ ಅರುಂಧತಿ ಭಾಗವತ್, ಶ್ರೀಮತಿ ಮೀನಾಕ್ಷಿ ಮೇಡಂ, ಶ್ರೀ ಮಾಣಿಕಪ್ರಭು ವೇದ ಪಾಠ ಶಾಲೆ, ಹಾಗೂ ಶ್ರೀ ಮಾಣಿಕಪ್ರಭು ಅಂಧ ಮಕ್ಕಳ ವಸತಿ ಶಾಲೆ, ಮತ್ತು ದಿ ಮಾಣಿಕ ಪಬ್ಲೀಕ್ ಶಾಲೆಯ ಸಮಸ್ಥ ಸಿಬ್ಬಂಧಿ ವರ್ಗದವರು, ವಿದ್ಯಾರ್ಥಿಗಳು ಹಾಜರಿದ್ದರು.



ಬಸವಕಲ್ಯಾಣ:–ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀ ಚನ್ನಬಸವೇಶ್ವರ ಸಂಸ್ಥಾನ ಹಿರೇಮಠದ ದಾಸೋಹ ಮನೆಯಲ್ಲಿ ಶ್ರೀ ರೇಣುಕಚಾರ್ಯ ಜಯಂತಿ ನಿಮಿತ್ಯ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಜಗದ್ಗುರು ರೇಣುಕಚಾರ್ಯರ ಮೂರ್ತಿಗೆ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ, ಐ.ಜಿ ಮಠಪತಿ, ಪಂಡಿತ ಪೂಜಾರಿ, ಪರಮೇಶ್ವರ ಹೊಳಕುಂದೆ, ಅಲ್ಲಮ ಪ್ರಭು ಹಿರೇಮಠ, ಪಂಡಿತ ಡಾವರೆ, ವಿಠಲ ಹೂಗಾರ, ಶಿವಾನಂದ ಪೂಜಾರಿ ಮುಂತಾದವರು ಉಪಸ್ಥಿತರಿದ್ದರು.

## ಪುರಸಭೆಯಲ್ಲಿ ಶ್ರೀ ರೇಣುಕಾಚಾರ್ಯರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಇಲಿಯ ಪುರಸಭೆ ಕಾರ್ಯಾಲಯದಲ್ಲಿ ಬುಧವಾರ ಶ್ರೀ ರೇಣುಕಾಚಾರ್ಯರ ಭಾವಚಿತ್ರಕ್ಕೆ ಶ್ರೀ ಷ. ಬ್ರ. ಮರುಳಾರಾಧ್ಯ ಶಿವಾಚಾರ್ಯರ ಅಮೃತ ಹಸ್ತದಿಂದ ಪೂಜೆ ಸಲ್ಲಿಸುವ ಮೂಲಕ ರೇಣುಕಾಚಾರ್ಯರ ಜಯಂತಿ ಆಚರಣೆ ಮಾಡಲಾಯಿತು. ಪುರಸಭೆಯ ಅಧ್ಯಕ್ಷೆ ರೋಜಮ್ಮ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದಿನ್ ಬಾಬಾ, ಪ್ರಮುಖರಾದ ಸಚಿನ ಮಠಪತಿ, ನಿಲೇಶ ಮಳ್ಳಿ, ಕಂಠಯ್ಯ ಸ್ವಾಮಿ, ಸಿದ್ದು ಸ್ವಾಮಿ, ಅಮರ ಸ್ವಾಮಿ, ಶರಣು ಕಲಮಠ, ಯಲಾಲಿಂಗ ಮಠಪತಿ, ಗುರುಪಾದಯ್ಯಾ ಮುತ್ತಂಗಿ, ಗುರುಪಾದಯ್ಯಾ ಮಾಡರ್ಗಿ, ಪುರಸಭೆಯ ಸಿಬ್ಬಂದಿಗಳಾದ ರವಿಕುಮಾರ ಸ್ವಾಮಿ, ಚಿದಾನಂದ ಪತ್ರಿ, ಆನಂದ, ಕವಿತಾ ಸರೋಜನಿ, ರಾಜಕುಮಾರ, ಸಂತೋಷಕುಮಾರ, ಸಚಿನ, ಅಶ್ವಿನಿ, ಮಂಜುಳಾ, ಇಲಾಹಿ, ಬಕ್ಕಪ್ಪಾ, ಭೀಮಶಾ, ರಾಜು ತೇಲಂಗ್ ಇದ್ದರು.

### ಸಾಮರಸ್ಯ, ಸಹಬಾಳ್ವೆ, ಸೌಹಾರ್ದತೆಯ ಬದುಕನ್ನು ಬೋಧಿಸಿದ

## ಜಗದ್ಗುರು ಶ್ರೀ ರೇಣುಕಾಚಾರ್ಯರು:ಮಠಪತಿ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಪಂಚಾಚಾರ–ಅಷ್ಟಾವರಣ–ಷಟ್‌ಸ್ಥಲಗಳ ಮೂಲಕ ವೀರ ಶೈವ ಧರ್ಮ ಮಹತ್ವಗಳಿಸಿದೆ.ಜಪ–ಧ್ಯಾನ–ಪೂಜೆ ಸೇರಿದಂತೆ ರೇಣುಕಾಚಾರ್ಯರು ಬೋಧಿಸಿದ ದಶ ಧರ್ಮ ಸೂತ್ರಗಳನ್ನು ಅನುಸರಿಸಿದಲ್ಲಿ ಬದುಕು ಸಾರ್ಥಕವಾಗುತ್ತದೆ ಎಂದು ರೇವಣಸಿದ್ಧಯ್ಯ ಮಠಪತಿರವರು ಪಟ್ಟಣದ ಪಂಚಾಯತ್‌ರಾಜ್ ಇಂಜಿನಿಯರ್ ಉಪವಿಭಾಗ ಹಾಗೂ ಗ್ರಾಮೀಣ ಕುಡಿಯುವ ನೀರು ಉಪವಿಭಾಗ ಆವರಣದಲ್ಲಿ ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿಯ ಅಂಗವಾಗಿ ರೇಣುಕಾಚಾರ್ಯರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಮಾತನಾಡುತ್ತಾ ನುಡಿದರು. ಜಗದ್ಗುರು ಶ್ರೀ ರೇಣುಕಾಚಾರ್ಯ ಅವರು ಸಿದ್ಧಾಂತ ಶಿಖಾಮಣಿಯಂತಹ ಮಹಾನ್ ಗ್ರಂಥವನ್ನು ಕೊಡುಗೆಯಾಗಿ ನೀಡಿದ್ದಾರೆ.

ಸಾಮರಸ್ಯ, ಸಹಬಾಳ್ವೆ, ಸೌಹಾರ್ದತೆಯ ಬದುಕನ್ನು ಅವರು ಬೋಧಿಸಿದ್ದಾರೆ. ಕರ್ನಾಟಕ ಸೇರಿದಂತೆ ದಕ್ಷಿಣ ಭಾರತದಾದ್ಯಂತ ಅವರು ಲಕ್ಷಾಂತರ ಭಕ್ತ ಸಮೂಹವನ್ನು ಹೊಂದಿದ್ದಾರೆ ಎಂದರು. ಮಹಾತ್ಮರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸದೃಢ ಸಮಾಜ ನಿರ್ಮಾಣದಲ್ಲಿ ನಮ್ಮನ್ನು ನಾವು ತೊಡಗಿಸಿಕೊಳ್ಳಬೇಕೆಂದು ಕರೆ ನೀಡಿದರು. ಜಗದ್ಗುರು ರೇಣುಕಾಚಾರ್ಯರು ಕೇವಲ ವೀರಶೈವ ಸಮಾಜಕ್ಕೆ ಅಥವಾ ಒಂದು ಜಾತಿ ಧರ್ಮಕ್ಕೆ ಸಿಮೀತವಾಗದೇ ಸಮಗ್ರ ಮನುಕುಲಕ್ಕೆ ಹಾಗೂ ಮನು ಕುಲದ ಆಚಾರ, ವಿಚಾರ, ಸಂಸ್ಕೃತಿಗೆ ಸಂಬಂಧಿಸಿದವರು. ಇವರು ಆಂಧ್ರದೇಶದ ಕೊಲ್ಲಿಪಾಕ್‌ನಲ್ಲಿ ಜನ್ಮ ತಾಳಿ ಚಿಕ್ಕಮಗಳೂರಿನ ಬಾಳೆಹೊನ್ನೂರುಗೆ ಆಗಮಿಸಿ ರಂಭಾಪುರಿ ಪೀಠವನ್ನು ಸ್ಥಾಪಿಸಿ ಧರ್ಮ ಪ್ರಚಾರ ಮಾಡಿ ಭಾರತದ ಐದು ಕಡೆ ಪಂಚಪೀಠಗಳನ್ನು ಸ್ಥಾಪನೆ ಮಾಡಿದ್ದಾರೆ ಎಂದರು. ಮನುಷ್ಯತ್ವವನ್ನು ಮಾನವನನ್ನಾಗಿ, ಮಾನವನಿಂದ ಮಹಾದೇವನನ್ನಾಗಿಸುವ ಕ್ರಿಯ ರೇಣುಕಾಚಾರ್ಯದವರದ್ದಾಗಿತ್ತು. ದೀನದಲಿತರಿಗೆ, ಬಡವರಿಗೆ 18 ಮಠಗಳನ್ನು ಸ್ಥಾಪಿಸಿ ಧರ್ಮಕಾಂತಿಯನ್ನು ಸಮಾಜದಲ್ಲಿ ಬಿತ್ತರಿಸಿದರು. ವೃತ್ತಿಯನ್ನು ಗೌರವಿಸಬೇಕು. ಚೈತನ್ಯ ಸ್ವರೂಪ, ಪ್ರಾಮಾಣಿಕತೆಯಿಂದ ಕೆಲಸವನ್ನು ಮಾಡಬೇಕು. ಪ್ರಮಾಣಿಕ ದುಡಿದು ತಿನ್ನಬೇಕು ಹಸಿದವರಿಗೂ ಅನ್ನ ನೀಡಬೇಕು ಎನ್ನುವುದು ಅವರ ಆಶಯವಾಗಿತ್ತು ಎಂದರು. ಈ ಸಂದರ್ಭದಲ್ಲಿ ವಿಜಯಕುಮಾರ ಜಮಾದಾರ್, ಸಿದ್ದು ಕಲ್ಲೂರ್, ಮಾಣಿಕ್ ನಾಗನಯ್ಯ್, ಅಲೀಮ್ ಜಮಾದಾರ್, ಬಸವರಾಜ್ ನೆಲಕುಡ್, ಶಂಕರ್ ಉಪಸ್ಥಿತರಿದ್ದರು.

## ಬೀದರ್ ವಿಶ್ವವಿದ್ಯಾಲಯಕ್ಕೆ ಯುವಕರಿಗೆ ಆದ್ಯತೆ ನೀಡಿದ್ದು ಹರ್ಷ: ಕಾವಡಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಮುಸ್ತರಿ ಗ್ರಾಮದ ಕಾಂಗ್ರೆಸ್ ಪಕ್ಷದ ಹಿರಿಯ ಮಹಿಳಾ ನಾಯಕಿ ಶೋಭಾ ಆರ್. ಪಾಟೀಲ್ ರವರ ಸುಪುತ್ರಿ ವೈಷ್ಣವಿ ಆರ್. ಪಾಟೀಲ್ ಬೀದರ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯೆಯಾಗಿ ಸರ್ಕಾರ ನೇಮಕ ಮಾಡಿ ಆದೇಶ ಹೊರಡಿಸಿದೆ. ಇವರಿಗೆ ಸೆನೆಟ್ ಸದಸ್ಯರಾಗಿ ನಾಮಕರಣ ಮಾಡಿದಕ್ಕಾಗಿ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಮಂಗಳವಾರ ಮುಸ್ತರಿ ಗ್ರಾಮದಲ್ಲಿರುವ ಅವರ ಗೃಹದಲ್ಲಿ ಸಸಿ ನೀಡಿ ಸನ್ಮಾನಿಸಿ ಮಾತನಾಡಿದ ಅವರು, ಚಿಕ್ಕ ವಯಸ್ಸಿನಲ್ಲಿಯೇ ಬೀದರ್ ವಿಶ್ವವಿದ್ಯಾಲಯಕ್ಕೆ ಸೆನೆಟ್ ಸದಸ್ಯೆಯಾಗಿ ನಾಮಕರಣ ಮಾಡಿದಕ್ಕೆ ಹರ್ಷ ವ್ಯಕ್ತಪಡಿಸಿದ್ದಾರೆ. ಪದವೀಧರರಾಗಿರುವ ವೈಷ್ಣವಿ ಆರ್.ಪಾಟೀಲ್ ಅವರು ನೂತನ ಬೀದರ್ ವಿಶ್ವವಿದ್ಯಾಲಯಕ್ಕೆ ಹೊಸ ಹೊಸ ಕೋರ್ಸಗಳು ಆರಂಭಿಸಲು ಶ್ರಮಿಸಬೇಕೆಂದು ಸಲಹೆ ನೀಡಿದರು. ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ವೈಷ್ಣವಿ ಪಾಟೀಲ್ ಅವರನ್ನು ನೇಮಕ ಮಾಡಿಸಿದಕ್ಕೆ ಧನ್ಯವಾದಗಳು ಸಲ್ಲಿಸಿದರು. ಪರಿಸರವಾದಿ ಶೈಲೇಂದ್ರ ಕಾವಡಿ ಮಾತನಾಡಿ, ಮಾಜಿ ಸಚಿವರಾದ ರಾಜಶೇಖರ ಪಾಟೀಲ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಈ ಬೀದರ್ ವಿಶ್ವವಿದ್ಯಾಲಯಕ್ಕೆ ಯುವಕರಿಗೆ ಆದ್ಯತೆ ನೀಡಿ ನಾಮಕರಣ ಮಾಡಿದಕ್ಕೆ ಧನ್ಯವಾದಗಳು ಸಲ್ಲಿಸಿದರು. ನೂತನವಾಗಿ ನೇಮಕಗೊಂಡ ಸೆನೆಟ್ ಸದಸ್ಯರು ಸರ್ಕಾರದ ಮೇಲೆ ಒತ್ತಡ ತಂದು ಹೊಸ ವಿಶ್ವವಿದ್ಯಾಲಯಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಶ್ರಮಿಸಬೇಕೆಂದು ಸಲಹೆ ನೀಡಿದರು.

ಪತ್ರಕರ್ತ ರಾಜಕುಮಾರ ಆರ್. ಹಪಡದ ಮಾತನಾಡಿ, ಚಿಟಗುಪ್ಪ ತಾಲೂಕಿನ ಮುಸ್ತರಿ ಗ್ರಾಮದ ಯುವತಿಗೆ ಬೀದರ್ ವಿಶ್ವವಿದ್ಯಾಲಯಕ್ಕೆ ನೇಮಕ ಮಾಡಿರುವುದು ತುಂಬಾ ಸಂತೋಷವಾಗಿದೆ. ಚಿಕ್ಕ ವಯಸ್ಸಿನಲ್ಲೇ ಶಿಕ್ಷಣ ಕ್ಷೇತ್ರದಲ್ಲಿ ಸೇವೆಸಲ್ಲಿಸುವ ಅವಕಾಶ ದೊರಕಿದೆ ಇದರ ಸದುಪಯೋಗಪಡೆದುಕೊಳ್ಳಲು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯದ ಮಹಿಳಾ ಆಯೋಗದ ಮಾಜಿ ನಿರ್ದೇಶಕಿ ಶೋಭಾ ಆರ್. ಪಾಟೀಲ್, ಹಣಮಂತ ಹಳ್ಳಿ, ರಾಜಶೇಖರ ಪಾಟೀಲ್ ಮುಸ್ತರಿ ಉಪಸ್ಥಿತರಿದ್ದರು.

### ಬೀದರ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟ ಕಛೇರಿಯಲ್ಲಿ

## ಆದಿ ಗುರು ರೇಣುಕಾಚಾರ್ಯ ಜಯಂತಿ.




ಮಲ್ಲಮ್ಮ ನುಡಿ ವಾರ್ತೆ

ಬೀದರ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟ ಕಛೇರಿಯಲ್ಲಿ ಆದಿ ಗುರು ಶ್ರೀ ರೇಣುಕಾಚಾರ್ಯರ ಜಯಂತಿಯನ್ನು ಭಾವ ಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚರಿಸಲಾಯಿತ್ತು. ಪೂಜಾ ಕಾರ್ಯವನ್ನು ಒಕ್ಕೂಟ ಅಧ್ಯಕ್ಷರಾದ ಗುರುನಾಥ ಜ್ಯಾಂತಿಕರ್ ನೆರವೆರಿಸಿದರು. ಪೂಜಾ ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ್, ಬಾಬು ವಾಲಿ, ಬಾಬುರಾವ ಕಾರಬಾರಿ, ನಾಗಶಟ್ಟಿ ಪಾಟೀಲ್ ಸುಂಕನಾಳ, ವಿಜಯಕುಮಾರ ಗಾಜರೆ, ರಾಜಕುಮಾರ ನೆಮತಾಬಾದ, ವೀರುದಿಗವಾಲ್, ವೀರಶಟ್ಟಿ ಕಾಮಣ್ಣಾ, ಅಮೃತ ಹೊಸಮನಿ, ರಾಹುಲ್ ಇತರರು ಉಪಸ್ಥಿತರಿದ್ದರು.

## ಪ.ಜಾ,ಪ.ಪಂ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಿಂದ ನಗರದಲ್ಲಿನ ಬಡಾವಣೆಗೆ ಭೇಟಿ, ಸಮಸ್ಯೆಗಳ ಆಲಿಕೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ । ಮಾ :12 : ನಿಮ್ಮ ಸಮಸ್ಯೆಗಳಿಗೆ ಹಂತ, ಹಂತವಾಗಿ ಪರಿಹಾರ ನೀಡಲಾಗುವವುದು. ಸರ್ಕಾರ ಅನುದಾನ ಸೇರಿದಂತೆಯೇ ವಿವಿಧ ಯೋಜನೆಗಳು ಜಾರಿ ಮಾಡಿದೆ. ಅವುಗನ್ನು ಪಡೆದು ಆರ್ಥಿಕವಾಗಿ ಮುಂದೆ ಬನ್ನಿ, ಯಾವುದೇ ಕಾರಣಕ್ಕೂ ನಿಮ್ಮ ಮಕ್ಕಳನ್ನು ಶಿಕ್ಷಣದಿಂದ ವಂಚಿತರಾಗಿ ಮಾಡಬೇಡಿ ಎಂದು ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಲೆಮಾರಿ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷೆ ಪಲ್ಲವಿ ಜಿ. ಹೇಳಿದರು.



ಭಾನುವಾರ ಇಲ್ಲಿನ ವಾರ್ಡ ನಂ. 5ರ ಬೋಳಿವಾಡದ ಮೇದಾರ ಬಡಾವಣೆಗೆ ಭೇಟಿ ನೀಡಿದ ವೇಳೆ ಅಲ್ಲಿ ಸೇರಿದ್ದ ಮೇದಾರ ಸಮುದಾಯದ ಜನರನ್ನು ಉದ್ದೇಶಿಸಿ, ಶಾಲೆಯಲ್ಲಿ ಶಿಕ್ಷಕರು ಪಾಠ ಮಾಡಿದಂತೆಯೇ ಪಲ್ಲವಿ ಅವರು ಸುರ್ಧಿಘ ಮಾತುಗಳಿಂದ ಅನೇಕ ವಿಷಯಗಳು ತಿಳಿಸಿದರು.

ಅಕ್ಕಪಕ್ಕದ ಬಡಾವಣೆಗಳು ನೋಡಿ , ಅಲ್ಲಿ ಎಷ್ಟು ಸ್ವಚ್ಚತೆ ಇದೆ. ಮೂಲಭೂತ ಸೌಲಭ್ಯಗಳು ಇವೆ. ಅವರ ಮಕ್ಕಳು ಶಾಲೆ ತೊರೆದಿಲ್ಲ, ಆದ–ರೇ ನೀವು ಯಾವುದೇ ಸೌಲಭ್ಯಗಳಿಲ್ಲದೆ ಅದು ಹೇಗೆ ಜೀವನನಢಸುತ್ತಿದ್ದಿರಿ? ಮಕ್ಕಳನ್ನು ಶಾಲೆ ಬಿಡಿಸಿ ನಿಮ್ಮ ಕುಲಕಸುಬಿ ಹಚ್ಚಿದ್ದಿರಿ. ಏಕೆ ಹೀಗೆ ಮಾಡಿದ್ದಿರಿ. ಈ ಸಂಬಂಧ ಇಲಾಖೆಗೆ ಹೋಗಿ ಅಲ್ಲಿ ಅಧಿಕಾರಿಗಳಿಗೆ ಭೇಟಿ ನೀಡಿದರೇ ನಿಮ್ಮ ಸೌಲಭ್ಯಗಳು ಮನೆ ಬಾಗಿಲಿಗೆ ಮುಟ್ಟಿಸುತ್ತಾರೆ. ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ ಇಂದು ನಮ್ಮ ಜೊತೆ ನಿಮ್ಮಬಳಿಗೆ ಬಂದಿದ್ದಾರೆ. ಅವರಿಗೂ ಮೂಲಭೂತ ಸೌಲಭ್ಯಗಳ ಬಗ್ಗೆ ಹೇಳಿ ಮಾಡಿಕೊಡುತ್ತಾರೆ. ಅವರು ನಾನು ಅಭಿವೃದ್ಧಿ ವಿಷಯದಲ್ಲಿ ತಾರತಮ್ಯ ಮಾಡುವುದಿಲ್ಲ ಎಂದು ಮಾರ್ಮಿಕವಾಗಿ ಹೇಳಿದರು.

ನೀವು ನೀವೇ ಕಚ್ಚಾಡ ಬೇಡಿ, ಇದು ಮೊದಲೇ ಇಕ್ಕಟಾದ ಓಣಿ, ಇಲ್ಲಿ ಚರಂಡಿ ವ್ಯವಸ್ಥೆ ಇಲ್ಲ, ಮನೆ ಮುಂದೆ ಹರಿಯುವ ಕಲುಷಿತ ನೀರಿನ ಮುಂದೆ ಕುಳಿತು ಬುಟ್ಟಿ ಇತರೆ ವಸ್ತುಗಳು ತಯಾರಿಸುತ್ತಿದ್ದಿರಿ, ಇದರಿಂದ ನಿಮ್ಮ ಆರೋಗ್ಯದ ಮೇಲೆ ಪರಿಣಾಮ ಬೀರುವುದಿಲ್ಲವೇ? ಎಂದು ಕೇಳಿದ ಪಲ್ಲವಿ, ಅಲ್ಲಿಯೇ ಕುಳಿತಿದ್ದ ಸಂಜನಾ ಎಂಬ ಹುಡುಗಿ ಮಾತಾಡಿಸಿ, ಶಾಲೆ ಏಕೆ ಬಿಟ್ಟಿದ್ದಿ, ಯಾರು ಬಿಡಿಸಿದರು, ನಾಳೆಯಿಂದಲೇ ಶಾಲೆಗೆ ಹೋಗಬೇಕು, ಏನು ತಾಯಿ ಮಗಳಿಗೆ ಶಾಲೆ ಕಳುಹಿಸುತ್ತಿಯೋ ಇಲ್ಲವೋ ಎಂದು ಕೇಳಿದಾಗ ಅಯಿತು ಕಳುಹಿಸಿತ್ತಿನಿ ಎಂದು ಬತಾಯಿ ಹೇಳಿದರೂ ಸಮಾಧಾನವಾಗದ ಅವರು ಕೈಮೇಲೆ ಕೈ ಹಾಕಿಸಿಕೊಂಡು ಭರವಸೆ ಪಡೆದು ಮಾನವಿತೆಯೇ ಮೆರೆದರು.

ಈ ಮೇದಾರ ಬಡಾವಣೆಗೆ ಏನೇನು ಸೌಲಭ್ಯಗಳು ಬೇಕು ಅದೆಲ್ಲ ಮಡಿಕೊಡುವಂತೆಯೇ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದರು.

ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಚನ್ನಬಸಪ್ಪ ಸೇರಿದಂತೆಯೇ ಇತರರಿದ್ದರು. ಸಮಾಜದ ಮೂರು ಪ್ರಮುಖ ಬೇಡಿಕೆಗಳ ಮನವಿ ಸಲ್ಲಿಸಿದರು.

ರುದ್ರಭೂಮಿಗೆ ಜಾಗ ನೀಡಬೇಕು, ಸಮುದಾಯ ಭವನ ನಿರ್ಮಾಣವಾಗಬೇಕು ಮತ್ತು ಬಂಬು ಬಜಾರದ ವ್ಯವಸ್ಥೆ ಆಗಬೇಕೆಂದು ಸಮಾಜದ ಪ್ರಮುಖರು ಒತ್ತಾಯಿಸಿದರು.

## ಶಾಂತೀಶ್ವರಿ ಸಮೂಹದಿಂದ ಪ್ರಸಾದ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮಾ.12:ಜಗದ್ಗುರು ರೇಣುಕಾಚಾರ್ಯರಜಯಂತಿ ಯುಗಮಾನೋತ್ಸವಪ್ರಯುಕ್ತ ಶಾಂತೀಶ್ವರಿಸಂಸ್ಥೆಗಳಸಮೂಹದಿಂದ ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿಸಾರ್ವಜನಿಕರಿಗೆ ಪ್ರಸಾದ ರೂಪದಲ್ಲಿ ಉಪ್ಪಿಟ್ಟು, ಶಿರಾ, ಮಜ್ಜಿಗೆ ಹಾಗೂ ಬಾಳೆಹಣ್ಣು ವಿತರಿಸಲಾಯಿತು. ಸಾಮಾಜಿಕ ಉಪ ಅರಣ್ಯ ಸಂರಕ್ಷಣಾಧಿಕಾರಿ ಎ.ಬಿ.ಪಾಟೀಲ ಪ್ರಸಾದ ವಿತರಣೆಗೆ ಚಾಲನೆ ನೀಡಿದರು. ನೌಬಾ???ನ ಜ್ಞಾನಶಿವಯೋಗಾಶ್ರಮದ ಡಾ. ರಾಜಶೇಖರ ಶಿವಾಚಾರ್ಯ, ಶಾಂತೀಶ್ವರಿ

ಸಮೂಹದ ಮುಖ್ಯಸ್ಥರೂ ಆದ ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ, ಜಯಂತಿ ಯುಗಮಾನೋತ್ಸವ ಆಚರಣೆ ಸ್ವಾಗತ ಸಮಿತಿಯ ಕಾರ್ಯಾಧ್ಯಕ್ಷ ಸಿದ್ರಾಮಯ್ಯ ಸ್ವಾಮಿ, ಮುಖಂಡರಾದ ರವೀಂದ್ರಸ್ವಾಮಿ, ಓಂಪ್ರಕಾಶ್ ರೊಟ್ಟೆ, ವರದಯ್ಯ ಸ್ವಾಮಿ, ಪ್ರವೀಣ್ ಸ್ವಾಮಿ, ನಾಗರಾಜ ಮಠ, ಮಹೇಶ್ ಪಾಟೀಲ, ವಿಘ್ನೇಶ್ ಸ್ವಾಮಿ, ಮಹಾರುದ್ರ ಡಾಕುಳಗಿ, ರಾಕೇಶ್ ಮಠಪತಿ, ನಾಗಯ್ಯಸ್ವಾಮಿ, ರೇಣಸಿದ್ದಯ್ಯ ಮಠಪತಿ, ಶಿವಶಂಕರ ಬೆಳಮಗಿ ಮತ್ತಿತರರು ಇದ್ದರು.

## ಪಂಚಾಚಾರ್ಯ ಪುಣ್ಯಾಶ್ರಮದಲ್ಲಿ ರೇಣುಕಾಚಾರ್ಯರ ಜಯಂತಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 12 : ನಗರದ ಹೊರ ವಲಯದಲ್ಲಿರುವ ಬೀದರ್-ಭಾಲ್ಕಿರಸ್ತೆಯಲ್ಲಿರುವ ಜಗದ್ಗುರು ಪಂಚಾಚಾರ್ಯ ಪುಣ್ಯಾಶ್ರಮದಲ್ಲಿ ಬುಧವಾರ ಜಗದ್ಗುರುರೇಣುಕಾಚಾರ್ಯರ ಜಯಂತಿ ಅದ್ದೂರಿ ಹಾಗೂ ಅರ್ಥಪುಣರ್ಣವಾಗಿಜರುಗಿತು.

ಮೊದಲು ಆಕಾಶ ಸ್ವಾಮಿ ಜಗದ್ಗುರುರೇಣುಕಾಚಾರ್ಯರ ಮೂರ್ತಿಗೆ ರುದ್ರಾಭಿಷಕ ನಡೆಸಿಕೊಟ್ಟರು. ಕಾರ್ತಿಕ ಸ್ವಾಮಿ ಜ್ಯಾಂತಿ ಕುಟುಂಬಸ್ಥರು ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಈ ಸಂದರ್ಭದಲ್ಲಿಅಪರಜಿಲ್ಲಾಧಿಕಾರಿ ಶಿವಕುಮಾರಶೀಲವಂತಅವರು ರೇಣುಕಾಷಾರ್ಯರಮೂರ್ತಿಗೆ ಮಾಲಾರ್ಪಣೆ ಮಾಡಿ, ಆರತಿ ಬೆಳಗಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಜಗದ್ಗುರುರೇಣುಕಾಚಾ???ರು 18 ಪಂಗಡಗಳಿಗೆ ಗುರುಪೂಜ್ಯರಾಗಿದ್ದವರು. ಅವರ ಮಂದಿರ ಇಷ್ಟು ಬೃಹತ್ತಾಗಿ ನಿರ್ಮಾಣ ಆಗಿರುವುದು ತುಂಬ ಸಂತೋಷ. ಇಂಥ ವಿಶಾಲ ವಾತಾವರಣದಲ್ಲಿ ನಿರ್ಮಾಣವಾದ ಈ ದೇವಸ್ಥಾನದಲ್ಲಿ ಇಂದು ಅವರ ಜಯಂತಿ ಕಾರ್ಯಕ್ರಮದಲ್ಲಿ



ಭಾಗವಹಿಸಿರುವುದು ನನ್ನ ಪೂರ್ವಜನ್ಮದ ಪುಣ್ಯ ಎಂದು ಭಾವಸುತ್ತೇನೆ. ಈ ಮಂದಿರದ ಜೀರ್ಣೋದ್ದಾರಕ್ಕೆ ನನ್ನಿಂದ ಕೈಲಾದಷ್ಟು ಸಹಕಾರ ಮಾಡುವುದಾಗಿ ಭರವಸೆ ನೀಡಿದರು.

ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜಜಾಬಶೆಟ್ಟಿಮಾತನಾಡಿ, ರೇಣುಕಾಚಾರ್ಯ ಮಂದಿರ ಜೀರ್ಣೋದ್ದಾರದಲ್ಲಿ ಹಲವರ ಪರಿಶ್ರಮ ಬಹಳಷ್ಟಿದೆ. ಇಲ್ಲಿಯ ಸಂಚಾಲಕರಾದವೇದಮೂರ್ತಿ ಷಣ್ಮುಖಯ್ಯ ಸ್ವಾಮಿ ಅವರು ನಿಸ್ವರ್ಥದಿಂದ ವಿಶೇಷ ಚೇತನರಾಗಿದ್ದರೂಧೃಢಸಂಕಲ್ಪ ಮಾಡಿ ರೇಣುಕಾಚಾರ್ಯರ ಭವ್ಯ ಮಂದಿರ ನಿರ್ಮಾಣ ಮಾಡಿದರು. ಇದರ ಜೊತೆಗೆ ಇಲ್ಲಿ ಗುರುಭವನನಿರ್ಮಾಣಆಗುತ್ತಿದೆ. ಶಕ್ತಿ ಇರುವಂಥ ನಾವೆಲ್ಲರು ಸೇರಿ ಉಳಿದ ಕೆಲಸಗಳನ್ನು ಪೂರ್ಣಗೊಳಿಸಬೇಕಾಗಿದೆ. ವೇದಮೂರ್ತಿ ಷಣ್ಮುಖಯ್ಯ ಸ್ವಾಮಿ ಅವರ ಕಾರ್ಯಕ್ಕೆ ನಾವೆಲ್ಲ ತನು, ಮನ ಹಾಗೂ ಧನದಿಂದ ಕೈಜೋಡಿಸಿ ಪೂರ್ಣಗೊಳಿಸಬೇಕೆಂದು ಕರೆ ನೀಡಿದರು.

ಬಿಜೆಪಿ ಸ್ಥಳಿಯ ಮುಖಂಡರಾದ ಈಶ್ವರಸಿಂಗ್ ಠಾಕೂರ್ ಮಾತನಾಡಿ, ಎರಡು ವರ್ಷಗಳ ಹಿಂದೆ ನಾನು ರೇಣುಕಾಚಾರ್ಯರ ಮಂದಿರದಲ್ಲಿ ರೇಣುಕ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿದಾಗ ಇಲ್ಲಿಯ ಗುರುಗಳಾದ ವೇದಮೂರ್ತಿ ಷಣ್ಮುಖಯ್ಯ ಸ್ವಾಮಿ ಅವರು ತಮ್ಮ ಬಾಯಿಂದ ಒಂದು ಆಗಲಾರದಭವಿಷ್ಯಉಚ್ಚರಿಸಿದರು. ಮುಂದೆ ಸತ್ಯವಾಯಿತು. ಅಂದೆ ಈ ಪುಣ್ಯಾಶ್ರಮದ ಗುರುಭವನನಿರ್ಮಾಣದಸಂಕಲ್ಪ ಮಾಡಿದ್ದೇನೆ. ಅದನ್ನು ಪೂರ್ಣ ಮಾಡಿಯೇ ತೀರುವುದಾಗಿ ಘೋಷಿಸಿದರು.

ಹಿರಿಯ ಪತ್ರಕರ್ತ ಶಿವಶರಣಪ್ಪವಾಲಿ ಮಾತನಾಡಿ, ನಿಸ್ವಾರ್ಥವಾಗಿ ಮಾಡುವ ಕಾಯಕ ಹಾಗೂ ಸೇವೆ ಅದು ವಿಶ್ವೇಶ್ವರನಿಗೆ ಸಲ್ಲುತ್ತದೆ. ಬಹಳಷ್ಟು ಜನರು ಬರೀ 800 ವರ್ಷಗಳ ಇತಿಹಾಸ ಬಗ್ಗೆ ಮಾತನಾಡುತ್ತಾರೆ. ಬಸವಣ್ಣನವರು 12ನೇ ಶತಮಾನದಲ್ಲಿ ಇಷ್ಟಲಿಂಗ ದೀಕ್ಷೆಗೆ ಮಹತ್ವ ನೀಡಿದರು. ಆದರೆ ಅದಕ್ಕಿಂತ ಪೂರ್ವದಲ್ಲಿ ರಾಮಾಯಣ ಹಾಗೂ ಮಹಾಭಾರತದಲ್ಲಿ ಮೊದಲು ಇಷ್ಟಲಿಂಗ ಧಾರಣೆ ಮಾಡಿದರು. ವೀರಭದ್ರನು ಹನುಮಂತನಿಗೆ ಲಿಂಗದೀಕ್ಷೆ ನೀಡಿರುವುದು ಇತಿಹಾಸ. ಇಲ್ಲಿ ನಿರ್ಮಾಣವಾಗುತ್ತಿರುವ ಗುರುಭವನ, ದಾಸೋಹ ಭವನ, ಸಮುದಾಯ ನಬವನ ಹಾಗೂ ಯಾತ್ರಿ ನಿವಾಸಗಳನ್ನು ಆದಷ್ಟು ಬೇಗ ಪೂರ್ಣ ಮಾಡಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿಪಂಚಾಚಾರ್ಯ ಪುಣ್ಯಾಶ್ರಮದ ಸಂಚಾಲಕರಾದ ವೇದಮೂರ್ತಿ ಷಣ್ಮುಖಯ್ಯ ಸ್ವಾಮಿ ಸಾನಿಧ್ಯ ವಹಿಸಿದ್ದರು. ವಿಶ್ವ ಹಿಂದು ಪರಿಷತ್ ಅಧ್ಯಕ್ಷ ರಾಮಕೃಷ್ಣ ಸಾಳೆ, ಸಮಾಜದ ಮುಖಂಡರಾದರವಿಂದ್ರಸ್ವಾಮಿ, ಕುಮಾರ ಸ್ವಾಮಿ ಹಿರೇಮಠ, ಅರುಣಾ ರವಿಂದ್ರ ಸ್ವಾಮಿ, ಅಕ್ಕಮಹಾದೇವಿ ಕಾಲೇಜಿನ ಪ್ರಾಚಾರ್ಯರಾದ ಶರಣಪ್ಪ, ನಿವೃತ್ತ ಉಪ ಪ್ರಾಚಾರ್ಯಾದ ಪ್ರಭುಶೆಟ್ಟಿ, ಬಸವಕುಮಾರ ಸ್ವಾಮಿ ಹಾಗೂ ಇತರರು ಕಾರ್ಯಕ್ರಮದಲ್ಲಿದ್ದರು.

ಆರಂಭದಲ್ಲಿ ಶ್ರೀ ರೇಣುಕಾಚಾರ್ಯ ಮಂದಿರ ಹಾಗೂ ಶ್ರೀ ಜಗದ್ಗುರು ಪಂಚಾಚಾರ್ಯ ಎಜ್ಯುಕೇಶನ್ ಮತ್ತು ಚಾರಿಟೇಬಲ್ ಟ್ರಸ್ಟ್ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಸರ್ವರನ್ನು ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಖಜಾಂಚಿ ಶ್ರೀಕಾಂತ ಸ್ವಾಮಿ ಸೋಲಪುರವಂದನೆಸಲ್ಲಿಸಿದರು.

## ಖಾತ್ರಿ ಯೋಜನೆಯಲ್ಲಿ ಅವ್ಯವಹಾರ:
# ಜಿ.ಪಂ. ಸಿಇಒಗೆ ದೂರು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 12 : ತಾಲ್ಲೂಕಿನಶ್ರೀಮಂಡಲ್‌ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಕಾಮಗಾರಿಗಳಲ್ಲಿ ಖೊಟ್ಟಿ ದಾಖಲೆ ಸೃಷ್ಟಿಸಿ ಅವ್ಯವಹಾರ ನಡೆಸಲಾಗುತ್ತಿದೆ ಎಂದು ಗ್ರಾಮ ಪಂಚಾಯಿತಿ ಸದಸ್ಯ ಉತ್ತಮ ಕಾಂಬಳೆ ಆರೋಪಿಸಿದ್ದಾರೆ.

ಈ ಕುರಿತು ಅವರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ದೂರು ಸಲ್ಲಿಸಿದ್ದಾರೆ.

ಪಂಚಾಯಿತಿ ವ್ಯಾಪ್ತಿಯಲ್ಲಿ ಯೋಜನೆಯ ಕಾಮಗಾರಿಗಳು ಚಾಲ್ತಿಯಲ್ಲಿವೆ. ಒಂದು ಕಾಮಗಾರಿಗೆ 10–12 ಕಾರ್ಮಿಕರನ್ನು ಮಾತ್ರ ಬಳಸಿಕೊಳ್ಳುತ್ತಿದ್ದು, ಎನ್‌.ಎಂ.ಆರ್‌.ನಲ್ಲಿ 35–40 ಕಾರ್ಮಿಕರನ್ನು ತೋರಿಸಿ ಸರ್ಕಾರದಹಣದುರುಪಯೋಗ ಪಡೆಸಿಕೊಳ್ಳಲಾಗುತ್ತಿದೆ ಎಂದು ಆಪಾದಿಸಿದ್ದಾರೆ.

ಪಂಚಾಯಿತಿಯಲ್ಲಿ 1,500 ಕಾರ್ಮಿಕರು ಜಾಬ್ ಕಾರ್ಡ್ ಹೊಂದಿದ್ದಾರೆ. ಆದರೆ, ಕೇವಲ 200 ಜನ ಕಾರ್ಮಿಕರು ಯೋಜನೆಯಡಿ ಕೆಲಸ ಮಾಡುತ್ತಿದ್ದಾರೆ. 2024–25ನೇ ಸಾಲಿನ 15ನೇ ಹಣಕಾಸು ನಿಧಿಯಲ್ಲೂ ಪಂಚಾಯಿತಿಯಲ್ಲಿ ಅವ್ಯವಹಾರ ನಡೆಸಲಾಗಿದೆ ಎಂದು ಆರೋಪಿಸಿದ್ದಾರೆ.

ಖಾತ್ರಿ ಯೋಜನೆಯಡಿ ಅವ್ಯವಹಾರ

ನಡೆಸಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

# ಮದ್ಯ ವ್ಯಸನಿಗಳು ಮಾದಕ ವಸ್ತುಗಳ
## ಪೆಡ್ಲರ್‌ಗಳಾಗುತ್ತಿದ್ದಾರೆ:ಅಬಕಾರಿ ಆಯುಕ್ತ ರವಿಶಂಕರ ಎ.

ಮಲ್ಲಮ್ಮ ನುಡಿ ವಾರ್ತೆ

ಬೀದರ: ಮಾ.12: ಮದ್ಯ ವ್ಯಸನಿಗಳು ಇಂದು ಮಾದಕ ವಸ್ತುಗಳ ಪೆಡ್ಲರ್‌ಗಳಾಗುತ್ತಿದ್ದಾರೆ ಎಂದು ಬೀದರನ ಅಬಕಾರಿ ಉಪ ಆಯುಕ್ತರಾದರವಿಶಂಕರ ಎ. ಕಳವಳ ವ್ಯಪ್ತಪಡಿಸಿದರು.

ಅವರು ಬುಧವಾರದಂದು ಕರ್ನಾಟಕ ರಾಜ್ಯ ಮದ್ಯಪಾನ ಸಂಯಮಮಂಡಳಿ ಬೆಂಗಳೂರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೀದರ ಹಾಗೂ ಸರ್ಕಾರಿ ಇಂಜಿನಿಯರಿಂಗ ಮಹಾವಿದ್ಯಾಲಯ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಬೀದರ ಸರ್ಕಾರಿ ಇಂಜಿನಿಯರಿಂಗ ಮಹಾವಿದ್ಯಾಲಯ ಆವರಣದಲ್ಲಿ ಹಮ್ಮಿಕೊಂಡಿದ್ದ ವಿಚಾರ ಸಂಕಿರಣ, ಉಪನ್ಯಾಸ ಹಾಗೂ ಬೀದಿನಾಟಕ, ಮದ್ಯಪಾನ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮ ಕುರಿತು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮದ್ಯ ಮತ್ತು ಮಾದಕ ವ್ಯಸನಗಳಿಂದ ಉಂಟಾಗುವ ಪರಿಣಾಮಗಳ ಕುರಿತು ಯುವ ಜನತೆಗೆ ತಿಳುವಳಿಕೆ ಮೂಡಿಸಬೇಕಾಗಿದೆ. ಮಹಾನಗರಗಳಲ್ಲಿ ಮೋಜು, ಮಸ್ತಿಗಾಗಿ ಸುಶಿಕ್ಷಿತ



ಯುವಕರೆ ಹೆಚ್ಚಾಗಿ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಕೆಟ್ಟ ವ್ಯವಸನಗಳಿಂದ ಇವತ್ತಿನ ಕುಟುಂಬಗಳು ಬೀದಿಗೆ ಬರಲು ಕಾರಣ. ಮದ್ಯಪಾನದಿಂದ ಇಂದಿನ ಯುವಕರು ವ್ಯಸನಗಳಿಗೆ ದಾಸರಾಗದೇ ಒಳ್ಳೆಯ ವಿದ್ಯಾರ್ಥಿಗಳಾಗಬೇಕಾಗಿದೆ. ಉತ್ತಮ ಸಮಾಜ ಹಾಗೂ ಸದೃಢ ರಾಷ್ಟ್ರ ನಿರ್ಮಾಣದಲ್ಲಿ ಯುವಕರು ಮಾನಸಿಕವಾಗಿ ಹಾಗೂ ದೈಹಿಕವಾಗಿ ಬಲಿಷ್ಠವಾಗಬೇಕಿದೆ. ಡ್ರಗ್ಸ್ ಪೆಡ್ಲರ್‌ಗಳು ವಿವಿಧ ಮಾದರಿಯಲ್ಲಿ ಗಾಂಜಾ, ಅಫೀಮು, ಹೆರಾಯಿನ್, ನಶೆ ಬರುವ ಇನ್ನಿತರ ವಸ್ತುಗಳು ವ್ಯಸನ ಪ್ರೀಯರಿಗೆ ದಾಸರಾಗಲು ಪೂರೈಸುತ್ತಿರುವುದು ದೇಶಕ್ಕೆ ದೊಡ್ಡ ಮಾರಕವಾಗಿದೆ ಎಂದರು.

ನ್ಯೂಟೌನ್ ಪೊಲೀಸ್ ಠಾಣೆ–ಯ ಪೊಲೀಸ್ ನಿರೀಕ್ಷಕರಾದ ವಿಜಯಕುಮಾರ ಬಾವಗೆ ಅವರು ಮಾತನಾಡಿ, ಡ್ರಗ್ಸ ಎಂಬ ಶಬ್ದ ಹಿಂದಿನ ಆದಿ ಕಾಲದಿಂದಲೂ ಬಂದಿದ್ದು ಆದರೆ ಅದನ್ನು ಉಪಯೋಗಿಸುವ ವಿಧಾನ ಸರಿ ಇಲ್ಲ, ಈಗಿನ ಯುವಕರು ದುಡಿಯುವ ವರ್ಗದ ಜನರು ಸೇರಿದಂತೆ ಶಿಕ್ಷಣವಂತರೆ ಹೆಚ್ಚು ವ್ಯಸನಿಗಳಾಗುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ಉನ್ನತ ಶಿಕ್ಷಣದ ವಿದ್ಯಾರ್ಥಿಗಳೆ ಮಾದಕ ವ್ಯಸನಗಳಾಗುತ್ತಿದ್ದಾರೆ. ಪೋಷಕರು ಮಕ್ಕಳ ಕಡೆ ಗಮನ ಹರಿಸಿದೇ ಇರುವುದರಿಂದ ಇಂತಹ ವಿದ್ಯಾರ್ಥಿಗಳು ವ್ಯವಸನಿಗಳಾಗುತ್ತಿದ್ದಾರೆ. ಅಲ್ಲದೆ ಸಹವಾಸದೋಷದಿಂದಲೂ ಸಹ ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಕುಟುಂಬದ ಒಬ್ಬ ವ್ಯಸನಿಯಿಂದ ಇಡೀ ಕುಟುಂಬ ಹಾಳಾಗುತ್ತದೆ ಎಂಬುದನ್ನು ವಿದ್ಯಾರ್ಥಿಗಳು ಅರಿಯಬೇಕಾಗಿದೆ ಎಂದರು.

ವಚನ ಚಾರಿಟೇಬಲ್ ಸೊಸೈಟಿಯ ನಿರ್ದೇಶಕಿಯಾದ ಲಿಂಗಾರತಿ ಅಲ್ಲಮಪ್ರಭು ನಾವದಗೇರೆ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಒತ್ತಡ ಹಾಗೂ ಸಂಸಾರಿಕ ಜೀವನವನ್ನು ಸರಿದುಗಿಸಿಕೊಂಡು ದಾರ್ಶನಿಕರ ತತ್ವ ಸಿದ್ಧಾಂತಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಒಳ್ಳೆಯ ಸಮಾಜ ನಿರ್ಮಾಣ ಮಾಡಲು ಸಹಕಾರಿಯಾಗಬೇಕೆಂದರು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ಜಿಲ್ಲಾ

ಆರೋಗ್ಯಶಿಕ್ಷಣಅಧಿಕಾರಿಗಳಾದ ಸಂಗಪ್ಪ ಕಾಂಬಳೆ ಮದ್ಯಪಾನ, ತಂಬಾಕು, ಇತರೆ ಮಾದಕ ವಸ್ತುಗಳಿಂದಾಗುವ ಅನೇಕ ರೋಗ ಬಗ್ಗೆ ಉಪನ್ಯಾಸ ನೀಡಿದರು.

ಸರ್ಕಾರಿ ಇಂಜಿನಿಯರಿಂಗ ಮಹಾವಿದ್ಯಾಲಯದ ಪ್ರಾಚಾರ್ಯರಾದಡಾ.ದೇವೇಂದ್ರ ಹಂಚೆ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಸುಂದರ ಸಮಾಜ ನಿರ್ಮಾಣಕ್ಕಾಗಿ ಅನೇಕ ಕಾರ್ಯಗಳನ್ನು ಮಾಡುತ್ತಿದ್ದು, ಮದ್ಯಪಾನ ಮತ್ತು ಮಾದಕ ವಸ್ತುಗಳಿಂದ ದುಷ್ಪರಿಣಾಮಗಳ ಕುರಿತು ಆಯೋಜಿಸಿರುವ ಕಾರ್ಯಕ್ರಮ ಅರ್ಥಪೂರ್ಣವಾಗಿದೆ ಎಂದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕೋಶಾಧ್ಯಕ್ಷರಾದ ಶಿವಶಮಕರ ಟೋಕರೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಮಂಜುನಾಥ ಸುಳ್ಳೊಳ್ಳಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ನಂದೀಶ್ವರ ನಾಟ್ಯ ಸಂಘ ಚಿಮಕೋಡದ ದೇವಿದಾಸ ಚಿಮಕೋಡ ಸಹ ಕಲಾವಿದರಿಂದ ಜಾಗೃತಿ ನಾಟಕ ಪ್ರದರ್ಶನ ನಡೆಯಿತು.

ಈ ಸಂದರ್ಭದಲ್ಲಿ ಅಬಕಾರಿ ಇಲಾಖೆಯ ವೃತ್ತ ನಿರೀಕ್ಷಕರಾದ ಅನಿಲಕುಮಾರ ಜಿ., ವಾರ್ತಾ ಇಲಾಖೆಯ ವಿಜಯಕೃಷ್ಣ, ಆಶಿಷ ಹಜಾರೆ, ಇಂಜಿನಿಯರಿಂಗ ಕಾಲೇಜಿನ ಬೋಧಕ ಸಿಬ್ಬಂದಿಗಳು, ವಿದ್ಯಾರ್ಥಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಬಾವಗಿ ಗ್ರಾಮದ ಗುರುಭದ್ರೇಶ್ವರ ದೇವಸ್ಥಾನದಲ್ಲಿ
## ರೇಣುಕಾಚಾರ್ಯರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 12 : ಬೀದರ್ ತಾಲೂಕಿನ ಬಾವಗಿ ಗ್ರಾಮದ ಗುರು ಭದ್ರೇಶ್ವರ ದೇವಸ್ಥಾನದಲ್ಲಿ ಆದಿ ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚರಿಸಲಾಯಿತು

ಮಾನವನನ್ನು ಮಹಾದೇವನನ್ನಾಗಿಸಿದ, ಗುರುವಿನಗುರು, ಮಹಾಗುರು, ಪರಮಗುರು, ಆದಿ ಜಗದ್ಗುರು ರೇವಣಸಿದ್ಧೇಶ್ವರವರು ಎಂದು ಸಂಸ್ಥಾನದ ಭದ್ರಯ್ಯ ಸ್ವಾಮಿ ನುಡಿದರು

ಶ್ರೀ ರೇಣುಕಾಚಾರ್ಯರು ತಮ್ಮ ದಿವ್ಯ ಉಪದೇಶಗಳ ಮೂಲಕ ವಿಶ್ವಬಂಧುತ್ವ, ಪ್ರೀತಿ, ಪರೋಪಕಾರ ಹಾಗೂ ಮಾನವೀಯತೆಯ ಮಹಾ ಮೌಲ್ಯಗಳನ್ನು ಸಾರಿದರು

ಶ್ರೀ ರೇಣುಕಾಚಾರ್ಯರು ಬೋಧಿಸಿದ ಧರ್ಮದ ಹಾದಿಯನ್ನು ಅನುಸರಿಸಿ, ನಾವು ಸಹಾನುಭೂತಿ, ಸಹಕಾರ ಹಾಗೂ ಸೇವಾ ಮನೋಭಾವದ ಮೂಲಕ ಮಾನವೀಯತೆಯನ್ನು

ಎತ್ತಿ ಹಿಡಿಯೋಣ ಎಂದು ಯುವ ಮುಖಂಡ ಲೋಕೇಶ ಕನಶಟ್ಟಿ ಹೇಳಿದರು

ಈ ಸಂದರ್ಭದಲ್ಲಿ ಗುರು ಭದ್ರೇಶ್ವರ ಸಂಸ್ಥಾನದ ಶಾಂತಕುಮಾರ್ ಸ್ವಾಮಿ, ಮುಖಂಡರಾದ ರೇವಣಪ್ಪ ಭದ್ರಣ, ಬಸವರಾಜ ಖೌದಿ, ಸಂಗಮೇಶ ಹಜ್ಜರಗಿ, ನಾಗಶೆಟ್ಟಿ ಅಳ್ಳಿ, ಕಾಶಿನಾಥ್ ಪಕ್ಕಾ, ನಾಗೇಶ್, ಶರಣಪ್ಪ, ಅವಿನಾಶ, ಬಾಬು, ಭೀಮಣ್ಣಾಮಂಜುನಾಥ, ಸೇರಿ ಅನೇಕರು ಹಾಜರಿದ್ದರು.

## ತೋರಣಾ-ಕಮಲನಗರ ರಸ್ತೆ ದುರುಸ್ತಿ,
## ಕ್ರಮಕ್ಕೆ ಹೈಕೋರ್ಟ್ ನಿರ್ದೇಶನ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.12: ತಾಲೂಕಿನ ತೋರಣಾ–ಕಮಲನಗರ ಮುಖ್ಯ ರಸ್ತೆ ಆರುವಾರಗಳಲ್ಲಿದುರುಸ್ತಿಗಾಗಿ ಸೂಕ್ತ ಕ್ರಮ ಕೈಗೊಳ್ಳಲು ದಿನಾಂಕ: 28–01–2025 ರಂದು ಕರ್ನಾಟಕರಾಜ್ಯ ಉಚ್ಚ ನ್ಯಾಯಾಲಯಬೆಂಗಳೂರಿನಿಂದ ನಿರ್ದೇಶನವಾಗಿರುತ್ತದೆ.

ಸಮಾಜ ಸೇವಕ ಗುರುನಾಥ ವಡ್ಡೆಯವರು ಕಮಲನಗರ ತಾಲೂಕಿನ ತೋರಣಾ ಗ್ರಾಮದಿಂದ ಕಮಲನಗರಕ್ಕೆ ಹೋಗುವ ಮುಖ್ಯ ರಸ್ತೆ ಹದಗೆಟ್ಟಿದ್ದು, ಸಾರ್ವಜನಿಕರಿಗೆ ಸಂಚಾರ–ಕ್ಕೆ ತೊಂದರೆಯಾಗುತ್ತಿದೆ. ರಸ್ತೆಗಳಲ್ಲಿ ಗುಂಡಿಗಳು ತುಂಬಿಕೊಂಡಿವೆ, ಇದ–ರಿಂದ ಸದರಿ ರಸ್ತೆಯನ್ನು ದುರುಸ್ತಿ ಮಾಡಿ, ಸಂಚಾರಕ್ಕೆ ಯೋಗ್ಯವನ್ನಾಗಿಮಾಡಬೇಕೆಂದು



ಕೋರಿ, ದಿನಾಂಕ: 12–10–2023 ಹಾಗೂ 23–10–2024 ರಂದು ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಸದರಿ ಮನವಿಗೆ ಸ್ಪಂದಿಸದಿದ್ದಾಗ ಗುರುನಾಥ ವಡ್ಡೆಯವರು

ದಿನಾಂಕ: 20–01–2025 ರಂದು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರಿನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸಲ್ಲಿಸಿದರು. ಈ ಬಗ್ಗೆ ವಿಚಾರಣೆ ನಡೆದು, ಹೈಕೋರ್ಟ್ನಿಂದ ದಿನಾಂಕ: 28–01–2025 ರಂದು ಆದೇಶವಾಗಿರುತ್ತದೆ.

ಸದರಿಪ್ರಕರಣದಲ್ಲಿಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಲೋಕೋಪಯೋಗಿ ಇಲಾಖೆ ಬೆಂಗಳೂರು, ಮುಖ್ಯ ಅಭಿಯಂತರರು ಲೋಕೋಪಯೋಗಿ ಇಲಾಖೆ ಕಲಬುರಗಿ, ಅಧೀಕ್ಷಕ ಅಭಿಯಂತರರು ಲೋಕೋಪಯೋಗಿ ಇಲಾಖೆ ಕಲಬುರಗಿ, ಕಾರ್ಯನಿರ್ವಾಹಕ ಅಭಿಯಂತರರು ಲೋಕೋಪಯೋಗಿ ಬೀದರ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಲೋಕೋಪಯೋಗಿ ಇಲಾಖೆ ಸಂತಪೂರ ಇವರು ಪ್ರತಿವಾದಿಯಾಗಿರುತ್ತಾರೆ. ಅರ್ಜಿದಾರರಾದ ಗುರುನಾಥ ವಡ್ಡೆಯವರ ಪರವಾಗಿ ನ್ಯಾಯವಾದಿ ಜೆ.ಆರ್. ಮೋಹನ ಅವರು ವಾದ ಮಂಡಿಸಿರುತ್ತಾರೆ.

# ಅನ್ಯಾಯದ ವಿರುದ್ಧ ಧ್ವನಿಯೆತ್ತಲು ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.12:ಸಂಘಟನೆಯ ಪದಾಧಿಕಾರಿಗಳು ಕೇವಲ ತೋರಿಕೆಗೆ ಸೀಮಿತ ಆಗಿರದೇ ಅನ್ಯಾಯದ ವಿರುದ್ಧ ಸದಾ ಧ್ವನಿಯೆತ್ತುವ ಕೆಲಸ ಮಾಡಬೇಕು ಎಂದು ಕರವೇ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಸಂತೋಷ ಶೇರಿಕಾರ ಹೇಳಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ನೂತನ ಪದಾಧಿಕಾರಿಗಳ ನೇಮಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಅನ್ಯಾಯ, ಭ್ರಷ್ಟಾಚಾರದ ವಿರುದ್ಧ ಮತ್ತು ನೊಂದವರ ಪರವಾಗಿ ನೂತನ



ಪದಾಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು. ಸಂಘಟನೆ ಜಿಲ್ಲಾ ಕಾರ್ಯಾಧ್ಯಕ್ಷ ಶಿವರಾಜ ಪಟ್ನೆ ಮಾತನಾಡಿ, ನೂತನ ಪದಾಧಿಕಾರಿಗಳು ಸಂಘಟನೆ ಬಲವರ್ಧನೆಗೆ ಶ್ರಮಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘಟನೆ ಜಿಲ್ಲಾ ಉಪಾಧ್ಯಕ್ಷ ಮಂಜುನಾಥ ಪರಣ್ಣ, ಜಿಲ್ಲಾ ಯುವ ಘಟಕದ ಅಧ್ಯಕ್ಷ ಕಿರಣ ಬಿರಾದಾರ್, ತಾಲೂಕು ಘಟಕದ ಅಧ್ಯಕ್ಷ ಪ್ರದೀಪ ಚವ್ಹಾಣ, ವಿದ್ಯಾರ್ಥಿ ಘಟಕದ ಅಧ್ಯಕ್ಷ ವಿನಯ, ಸಾಮಾಜಿಕ ಜಾಲತಾಣದ ಅಧ್ಯಕ್ಷ ಅಭಿಷೇಕ, ತಾಲೂಕು ಕಾರ್ಯಾಧ್ಯಕ್ಷ ರಾಜಕುಮಾರ ದುರ್ವೆ, ಕಾರ್ಮಿಕ ಘಟಕ ಉಪಾಧ್ಯಕ್ಷ ಸಂತೋಷ ಧುಲೆ, ಆಟೋ ಚಾಲಕರ ಘಟಕದ ಪದಾಧಿಕಾರಿಗಳಾದ ಶಾಂತಕುಮಾರ ಮಾದಪ್ಪ, ಆನಂದ ತಲವದೆ, ವಸಂತ ಭಟರೆ ಸೇರಿದಂತೆ ಹಲವರು ಇದ್ದರು.

**ಪದಾಧಿಕಾರಿಗಳ ನೇಮಕ:** ವಿನೋದ ಶೇರಿಕಾರ(ಜಿಲ್ಲಾ ಕಾರ್ಯದರ್ಶಿ), ಆಟೋಚಾಲಕರ ಘಟಕದ ಗೌರವ ಅಧ್ಯಕ್ಷರಾಗಿ ಚಂದ್ರಶೇಖರ, ಅಧ್ಯಕ್ಷರಾಗಿ ಡೇವಿಡ್ ಬಾಬುರಾವ ಮತ್ತು ಭಾತಂಬ್ರಾ ಗ್ರಾಮ ಕಾರ್ಮಿಕ ಘಟಕದ ಪದಾಧಿಕಾರಿಗಳಾಗಿ ರಾಜಕುಮಾರ ಕೊರಳೆ, ರಾಮ ಧೂಳೆ, ಶಿವಪ್ಪ ಸಾಗಾಂವೆ, ನಾಮದೇವ, ಮನೋಜ ದೂಳೆ ಅವರನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾಧ್ಯಕ್ಷ ಶೇರಿಕಾರ ತಿಳಿಸಿದ್ದಾರೆ.

# ಬಾಗಲಕೋಟೆಯ ಹೋಳಿ ವೈಭವ–3 ದಿನದ ರಂಗಿನಾಟ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.12–ಐತಿಹಾಸಿಕ, ಪೌರಾಣಿಕಅನೇಕಕತೆಗಳನ್ನುಒಡಲಲ್ಲಿ ಇಟ್ಟುಕೊಂಡಿರುವ ಭಾರತೀಯ ಸಂಸ್ಕೃತಿಯಲ್ಲಿಹೋಳಿಹಬ್ಬಕ್ಕೆವಿಶೇಷ ಸ್ಥಾನಮಾನ.ಪರಸ್ಪರರಂಗು ಎರಚಿ ಆಡುವ ಹೋಳಿಯಾಟ ಎಂದರೆ ದೇಶದಲ್ಲಿ ಅತ್ಯಂತ ಸಂಭ್ರಮದ ಆಟ. ಸಂಪ್ರದಾಯ ಆಧುನಿಕತೆ, ಆಕರ್ಷಣೆ, ಜನಪ್ರಿಯತೆಗಳಲ್ಲಿ ದೇಶದ ಯಾವ ಹಬ್ಬವೂ ಇದನ್ನುಸರಿಗಟ್ಟುವದಿಲ್ಲ.ಕೊಲ್ಕತ್ತಾ ಬಿಟ್ಟರೆ ಏಶಿಯಾ ಖಂಡದಲ್ಲಿಯೇ ಬಾಗಲಕೋಟೆ ರಂಗಿನಾಟಕ್ಕೆ ವಿಶೇಷತೆ ಇದೆ. ಜನಪದ ಸ್ಪರ್ಶವಿದೆ. ಸಂಪ್ರದಾಯವಿದೆ. ಇನ್ನೂ ಏನೇನೋ ಇದೆ.

ಇಂಥಹ ವೈವಿಧ್ಯಮಯ ಹೋಳಿಯನ್ನುಹರಿಯಾಣದಲ್ಲಿ ಧುಲಂದಿ ಉತ್ಸವ, ಪಶ್ಚಿಮ ಬಂಗಾಳದಲ್ಲಿ ಬಸಂತ ಉತ್ಸವ, ಮಹಾರಾಷ್ಟ್ರದಲ್ಲಿ ದೋಲ್ ಉತ್ಸವ, ಪಂಜಾಬದಲ್ಲಿಹೋರಾ ಮೊಹಲ್ಲಾ ಹೀಗೆ ವಿವಿಧೆಡೆ ಈ ಹೋಳಿ ಒಂದೇ ದಿನದ ಆಚರಣೆ ಆದರೆ, ಪೌರಾಣಿಕ ಹಾಗೂ ಐತಿಹಾಸಿಕ ಪರಂಪರೆಯಬಾಗಲಕೋಟೆಯಲ್ಲಿ 3 ದಿನಗಳ ವರೆಗೆ ಬಣ್ಣ ಆಚರಿಸುವ ವಾಡಿಕೆ. ಮತ್ತು 5 ದಿನಗಳವರೆಗೆ ಸೋಗುಗಳಪ್ರದರ್ಶನಜರಗುವದು.

ಇದೇ ದಿನಾಂಕ 13ರಿಂದ 17 ರವರೆಗೆ ಹೋಳಿ ಆಚರಣೆ ವೈಶಿಷ್ಟಪೂರ್ಣವಾಗಿಜರುಗುವದು. ನೂರಾರುವರ್ಷಗಳಹಿಂದಿನಿಂದಲೂ ಪಟ್ಟಣದಲ್ಲಿ ಹೋಳಿ ಹಬ್ಬವನ್ನು ಎಲ್ಲಸಮಾಜದವರುಕೂಡಿಕೊಂಡು ಭಾವೈಕ್ಯಸಂಕೇತವಾಗಿಆಚರಿಸುತ್ತಾ ಬಂದಿದ್ದಾರೆ. ಜಾತಿ, ಮತ, ಕುಲ ಹಾಗೂ ಸಮಾಜದ ಅಂತಸ್ತುಗಳು ಈ ಹೋಳಿ ಹಬ್ಬದಲ್ಲಿ ಇಲ್ಲವಾಗಿ, ಎಲ್ಲರೂ ಹಲವು ಬಣ್ಣಗಳಲ್ಲಿ ಲೀನವಾಗಿ ನಿಜವಾದ ಮನುಷ್ಯ ಸಂಬಂಧದ ಹಲವು ಪ್ರೀತಿಯ ಸೆಳೆತವನ್ನು ಇಲ್ಲಿ ಕಾಣಬಹುದು. ಬಾಗಲಕೋಟೆಯಲ್ಲಿಕಿಲ್ಲಾ,ಹಳಪೇಟ, ಜೈನಪೇಟ ಹಾಗೂ ವೆಂಕಟಪೇಟ ಎಂಬ ಪ್ರಸಿದ್ಧ ಐದು ಮನೆತನ ಬಡಾವಣೆಗಳಿವೆ.

ಈ ಐದು ಬಡಾವಣೆಗಳಲ್ಲಿ ಪ್ರತಿವರ್ಷ ಹೋಳಿ ಹಬ್ಬವನ್ನುಐದು ದಿನಗಳವರೆಗೆ ಆಚರಿಸುವ ವಾಡಿಕೆ ಇದೆ.ಹೋಳಿ ಪ್ರಾರಂಭವಾಗುವದು ಹಲಿಗೆ ವಾದನದಿಂದ. ಈ ಹಲಗೆ ಬಾರಿಸುವ ಗತ್ತು ಪಟ್ಟಣದಲ್ಲಿಯ ನಿವಾಸಿಗಳಿಗೆ ಮಾತ್ರ ಬರುತ್ತದೆ. ಇನ್ನುಳಿದವರಿಗೆ ಹಲಗೆ ಬಾರಿಸುವ ಗತ್ತುಬರಲುಸಾಧ್ಯವಿಲ್ಲಎನ್ನಬಹುದು. ಪ್ರತಿ ಬಡಾವಣೆಗಳಲ್ಲಿಯೂ ಕೆಲವು ಆಯ್ದ ಹಿರಿಯರ ಮನೆಗಳಲ್ಲಿ ಈ ನಿಶಾನೆ ಹಾಗೂ ತುರಾಯಿ ಹಲಗೆಗಳಿರುತ್ತವೆ. ಅವುಗಳನ್ನು ಹೋಳಿ ಹಬ್ಬದಲ್ಲಿ ಮಾತ್ರಹೊರಗೆ ತಗೆಯುತ್ತಾರೆ.ಪ್ರತಿ ವರ್ಷ ಹುಬ್ಬಾ ನಕ್ಷತ್ರದಂದು ಕಿಲ್ಲಾ ಬಡಾವಣೆಯಲ್ಲಿ ಸುಪ್ರಸಿದ್ಧ ಶ್ರೀಮಂತ ಬಸವಪ್ರಭು ಸರನಾಡಗೌಡ ಅವರ ಮನೆಯಿಂದ ಹಲಿಗೆ ಹಾಗೂ ನಿಶಾನೆ ತಗೆದು–ಕೊಂಡು ಅಂಬೇಡ್ಕರ್ ಗಲ್ಲಿಯಲ್ಲಿರುವ ಪ್ರವೀಣ ರಾಮಚಂದ್ರ ಖಾತೆ–ದಾರ ಮನೆಯಿಂದ ಬೆಂಕಿಯನ್ನು ತಂದು ತಮ್ಮ ಬಡಾವಣೆಯಲ್ಲಿ ಮೊದಲು ಕಾಮದಹನ ಮಾಡುವ ವಾಡಿಕೆ ಇದೆ. ನಂತರ ವಿವಿಧ ಬಡಾವಣೆಯಲ್ಲಿ ಕಾಮದಹನ ಮಾಡುತ್ತಾರೆ.

ಕಾಮದಹನವಾದ ನಂತರ ರಾತ್ರಿ ಒಂದು ಬಡಾವಣೆಯವರು ಮೊದಲು ಸೋಗಿನ ಗಾಡಿಯನ್ನು ಎಲ್ಲ ಪ್ರಮುಖ ಬೀದಿಗಳಲ್ಲಿ ಪ್ರದರ್ಶಿಸುತ್ತಾರೆ. ಸುಮಾರು 10 ರಿಂದ 20 ಚಕ್ಕಡಿಗಳಲ್ಲಿ ವಿವಿಧ ವೇಷಭೂಷಣ ಪ್ರದರ್ಶನ ನಡೆ–ಯುತ್ತದೆ. ರಾತ್ರಿಸೋಗಿನ ಗಾಡಿಗಳ ಪ್ರದರ್ಶನ ನಡೆದ ನಂತರ ಬೆಳಿಗ್ಗೆ ಅದೇ ಬಡಾವಣೆಯ 30–40 ಚಕ್ಕಡಿ ಹಾಗೂ ಟ್ರ್ಯಾಕ್ಟರ್‌ಗಳಲ್ಲಿ ಬಣ್ಣ ತುಂಬಿದ ಬ್ಯಾರಲ್‌ಗಳನ್ನು ಇಟ್ಟು ವಿವಿಧ ಬಡಾವಣೆಗಳಲ್ಲಿ ಬಣ್ಣದ ಆಟ ಆಡುತ್ತಾರೆ. ಬಣ್ಣದ ಗಾಡಿಗಳು ಬಡಾಣೆಗಳಲ್ಲಿ ಬರುತ್ತಿರುವ ಬಗ್ಗೆ ಅಲ್ಲಿಯ ನಾಗರಿಕರು ತಮ್ಮ ಮನೆಯ ಮಾಳಿಗೆಯಲ್ಲಿ ಮೊದಲೇ ಸಂಗ್ರಹಿಸಿದ ಬಣ್ಣವನ್ನು ಗಾಡಿಯವರ ಮೇಲೆ ಮುಖಾಮುಖಿ ಬಣ್ಣ ಎರಚುವದೃಶ್ಯ ಮನೋಹರವಾಗಿ ಕಾಣಿಸುತ್ತದೆ. ಕೆಲವೊಂದು ಬಡಾವಣೆಗಳಲ್ಲಿ ನೀರಿನ ಬಾವಿಗೇ ಬಣ್ಣ ಹಾಕಿ ಪೈಪುಗಳ ಮೂಲಕ ಬಣ್ಣ ಎರಚುತ್ತಾರೆ.

ಮಾರವಾಡಿ ಸಮಾಜದವರು ವಿಶೇಷವಾಗಿ ಮಹಿಳೆಯರು ಹೋಳಿ ಹಬ್ಬವನ್ನು ಒಂದು ದಿವಸ ಮಾತ್ರ ಆಚರಿಸುವ ವಾಡಿಕೆಯಿದೆ. ಬಾಗಲಕೋಟೆ ಹೋಳಿ ಹಬ್ಬವನ್ನು ನೋಡಲು ಪರಊರುಗಳಿಂದ ಜನ ಬರುತ್ತಾರೆ. ಅವರೂ ಸಹ ಬಣ್ಣ ಎರಚಿಕೊಂಡೆ ತಮ್ಮ ಊರಿಗೆ ಹೋಗುತ್ತಾರೆ. ಲಂಬಾಣಿ ಜನರು ಸಹಿತ ಹೋಳಿ ಹಬ್ಬವನ್ನು ವೈಶಿಷ್ಟ್ಯಪೂರ್ಣವಾಗಿ ಆಚರಿಸುವರು. ಕಾಮದಹನದ ನಂತರ ಲಂಬಾಣಿ ಹೆಣ್ಣುಮಕ್ಕಳು ನೃತ್ಯ ಮಾಡುವುದು. ಪರಸ್ಪರ ಬಣ್ಣ ಹಚ್ಚುವ ದೃಶ್ಯ ಅತ್ಯಂತ ಮನಮೋಹಕ.

ಮೂರು ದಿವಸಗಳವರೆಗೆ ಸತತವಾಗಿ ಹೋಳಿ ಹಬ್ಬದ ಸಂದರ್ಭದಲ್ಲಿ ಬಣ್ಣದ ಆಟ ಆಡುವುದು ಎಲ್ಲಿಯೂ ಕಂಡು ಬರುವುದಿಲ್ಲ ಎಂದು ಹೇಳಲಾಗುತ್ತದೆ. ಬಾಗಲಕೋಟ ನಗರ ಮುಳುಗಡೆಯಿಂದಾಗಿ, ಹಳೇ ಬಾಗಲಕೋಟ ವಿದ್ಯಾಗಿರಿ, ನವನಗರ ಹೀಗೆ ಮೂರು ಭಾಗಗಳಾಗಿ ಹರಿದು ಹಂಚಿಹೋಗಿದೆ. ಭಾವೈಕ್ಯದ ಸಂಕೇತವಾದ ಬಾಗಲಕೋಟೆಯ ಹೋಳಿ ಹಬ್ಬವು ನಮ್ಮ ಸಂಸ್ಕೃತಿ, ಪರಂಪರೆಯನ್ನು ಬಿಂಬಿಸುತ್ತಿದ್ದು, ಈ ಬಾರಿಯೂ ಹಬ್ಬದ ಆಚರಣೆಗೆ ಏನೆಲ್ಲಾ ತಯಾರಿ ನಡೆಯುತ್ತಿದೆ.



ಲೇಖನ:–
ಮಹಾಬಳೇಶ್ವರ ಗುಡಗುಂಟಿ
ಬಾಗಲಕೋಟ

# ಮಹಾತ್ಮರ ಚಿಂತನೆಯಿಂದ ಸುಂದರ ಸಮಾಜ ನಿರ್ಮಾಣ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.12– ಮಾನವೀಯ ಮೌಲ್ಯಗಳನ್ನು, ಆಚಾರ ವಿಚಾರಗಳನ್ನು ಜಗತ್ತಿಗೆ ಸಾರಿದ ಮಹಾತ್ಮರ ಚಿಂತನೆಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡಾಗ ಸುಂದರ ಸಮಾಜ ನಿರ್ಮಾಣವಾಗಲು ಸಾಧ್ಯವೆಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ರೇಣುಕಾಚಾರ್ಯರಂತ ಮಹಾತ್ಮರ ಧನಾತ್ಮಕ ಚಿಂತನೆಯಿಂದ ವೀರಶೈವ ಧರ್ಮ ಸಂಸ್ಥಾಪನೆಗೊಂಡಿದ್ದು, ಒಬ್ಬ ಮಹಾತ್ಮನಿಂದ ಸಮಾಜಕ್ಕೆ, ದೇಶಕ್ಕೆ ಹಾಗೂ ನಾಡಿಗೆ ಒಳ್ಳೆಯದಾಗಿದ್ದರೆ ಅಂತಹ ಮಹಾತ್ಮರ ಜಯಂತಿ ಆದರ್ಶಪ್ರಾಯವಾಗಿರುತ್ತದೆ ಎಂದರು.

ರೇಣುಕಾಚಾರ್ಯರು ತಮ್ಮ ಜೀವನವನ್ನೇ ಸಮಾಜ ಸುಧಾರಣೆಗಾಗಿ ಸವಿಸಿದ್ದು, ಇಂದು ಭೌತಿಕವಾಗಿ ನಮ್ಮ ಬಳಿ ಅವರು ಇರದಿದ್ದರೂ ಅವರು ಹಾಕಿದ ಮಾರ್ಗ ಇಂದು ನಾವೆಲ್ಲ ಅನುಸರಿಸುತ್ತಿದ್ದೇವೆ. ರೇಣುಕಾಚಾರ್ಯರಿಂದ ಐದು ಪೀಠಗಳು ಸ್ಥಾಪನೆಗೊಂಡಿದ್ದು, ಅವು ಇಂದು ಪಂಚಾಚಾರ್ಯರ ಪೀಠಗಳಾಗಿದ್ದು, ಪಂಚತತ್ವದಿಂದ ಕೂಡಿದ ಮಠಗಳು ಇಂದು ಅಲ್ಲಲ್ಲಿ ಧರ್ಮ ಸಂಸ್ಥಾಪನಾ ಕಾರ್ಯ ಮಾಡುತ್ತಿವೆ ಎಂದು ಜಿಲ್ಲಾಧಿಕಾರಿ ಹೇಳಿದರು.

ಅಖಿಲ ಭಾರತ ವೀರಶೈವ ಮಹಾಸಭೆ ಜಿಲ್ಲಾ ಅಧ್ಯಕ್ಷ ಜಿ.ಎನ್.ಪಾಟೀಲ ಮಾತನಾಡಿ, ತೆಲಂಗಾಣದ ಕೊಲ್ಲಿಪಾಕಿಯಲ್ಲಿ ಸ್ವಯಂಭೂ ಸೋಮೇಶ್ವರ ಮಹಾಲಿಂಗದಿಂದ ಉದ್ಭವಿಸಿದ ರೇಣುಕಾಚಾರ್ಯರು ಕೃತಾಯುಗದಲ್ಲಿ ಏಕಾಕ್ಷ–ರಿಯಾಗಿ, ತೇತ್ರಾಯುಗದಲ್ಲಿ ಏಕ ವಕ್ಕರಾಗಿ, ದ್ವಾಪರದಲ್ಲಿ ರೇಣುಕರಾಗಿ, ಕಲಿಯುಗದಲ್ಲಿ ರೇವಣಸಿದ್ದರಾಗಿ ಅವತರಿಸಿ ಅನಿಮಾದಿ ಅಷ್ಟಸಿದ್ದಿಗಳನ್ನು ಮಾಡಿಕೊಂಡ ಮಹಾತ್ಮರಾಗಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ, ನಮ್ಮ ಸನಾತನ ಹಿಂದು ಧರ್ಮದಲ್ಲಿ ಪ್ರತಿಯೊಂದಕ್ಕೂ ಅರ್ಥವಿದ್ದು, ಆಚರಣೆಯಲ್ಲಿ ವಿವಿಧತೆ ಇದೆ. ಪ್ರತಿಯೊಬ್ಬರ ಮನೆಯಲ್ಲಿ ಜಗುಲಿ ಇದ್ದು, ಜಂಗಮ, ಗುರು, ಲಿಂಗ ಎಂಬುದು ಅದರ ಅರ್ಥವಾಗಿದ್ದು, ಇಂತಹ ಸತ್ಯವನ್ನು ನಾಡಿಗೆ ತಿಳಿಸಿದವರು ರೇಣುಕಾಚಾರ್ಯರು ಎಂದರು. ಗುಳೇದಗುಡ್ಡ ಸರಕಾರಿ ಪ್ರೌಢಶಾಲೆಯ ಸಹ ಶಿಕ್ಷಕ ಸಂಗಯ್ಯ ಗಣಾಚಾರಿ ರೇಣುಕಾಚಾರ್ಯರ ಜೀವನ ಚರಿತ್ರೆ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ, ಸಮುದಾಯದ ಮುಖಂಡರಾದ ವೀರಯ್ಯ ಚೌಕಿಮಠ, ಕುಮಾರ ಹಿರೇಮಠ ಸೇರಿದಂತೆ ಇತರರು ಉಪಸ್ಥಿತರಿದ್ದರು. ಶಂಕರಲಿಂಗ ದೇಸಾಯಿ ನಿರೂಪಿಸಿದರು.

# ಮನುಕುಲಕ್ಕೆ ಜಂಗಮ ಸಮಾಜ ಕೊಡುಗೆ ಅಪಾರ





ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಮನುಕುಲವನ್ನು ಧರ್ಮದದಾರಿಯಲ್ಲಿನಡೆಸುವಂತಹ ಪ್ರಜ್ಞಾವಂತಿಕೆಯನ್ನು ಹೊಂದಿದ ಜಂಗಮ ಸಮಾಜ ಕೇವಲ ಬೇಡುವ ಸಮಾಜವಾಗದೆ ಜಗಕ್ಕೆ ಕೊಡುಗೆಯನ್ನು ಕೊಡುವಂತಹ ಸಮಾಜವಾಗಿದೆ ಎಂದು ಮಾಜಿ ಶಾಸಕ, ಬಾಗಲಕೋಟೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಜಿ. ನಂಜಯ್ಯನ ಮಠ ಹೇಳಿದರು. ಬುಧವಾರ ಪಟ್ಟಣದ ಜಂಗಮ ಸಮಾಜ ಬಾಂಧವರು ಎಪಿಎಂಸಿ ವರ್ತಕರ ಸಭಾ ಭವನದಲ್ಲಿ ಹಮ್ಮಿಕೊಂಡ ಜಗದ್ಗುರು ರೇಣುಕಾಚಾರ್ಯರ ಜಯಂತಿ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವೀರಶೈವ ಧರ್ಮ ಪ್ರಾಚೀನ ಧರ್ಮವಾಗಿದ್ದು ಶ್ರೇಷ್ಠ ಸಂಸ್ಕೃತಿ ಪರಂಪರೆ ಹಾಗೂ ಸಂಸ್ಕಾರಗಳನ್ನು ಹೊಂದಿರುವ ಧರ್ಮವಾಗಿದೆ ಈ ಶ್ರೇಷ್ಠ ಧರ್ಮದಲ್ಲಿ ಗುರುವಿನ ಸ್ಥಾನದಲ್ಲಿರುವ ನಾವು ಜಯಂತಿಯ ಈ ಸಂದರ್ಭದಲ್ಲಿ ನಮ್ಮ ಕುರಿತು ಆತ್ಮವತ್ಮಾವಲೋಕನ ಮಾಡಿಕೊಳ್ಳುವ ಅಗತ್ಯ ಇದೆ, ಗುರುವಿನ ಸ್ಥಾನದಲ್ಲಿದ್ದರೂ ನಾವು ಇತರ ಸಮುದಾಯಗಳಿಗಿಂತ ಆರ್ಥಿಕವಾಗಿ ಅತಿ ಹಿಂದುಳಿದ ಸಮಾಜವಾಗಿದ್ದೇವೆ ನಮ್ಮ ಆರ್ಥಿಕ ಸ್ಥಿತಿಯನ್ನು ಉತ್ತಮ ಪಡಿಸಿಕೊಳ್ಳಲು ನಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡುವ ಅಗತ್ಯವಿದೆ ಶಿಕ್ಷಣದಿಂದಲೇ ಸಮಾಜಗಳ ಸರ್ವಾಂಗೀಣ ಪ್ರಗತಿ ಸಾಧ್ಯ, ನಾವು ಜೋಳಿಗೆ ಹಿಡಿದು ನಮ್ಮ ಮಕ್ಕಳಿಗೂ ಜೋಳಿಗೆಯನ್ನೆ ಕೊಟ್ಟು ಹೋಗುವುದು ಬೇಡ, ಅವರ ಜೋಳಿಗೆಯಿಂದ ಇತರರಿಗೂ ಸಹಾಯ ಆಗುವಂತೆ ಮಾಡಿ ಹೋಗಲು ನಾವೆಲ್ಲರೂ ಪ್ರಯತ್ನಿಸಬೇಕಾಗಿದೆ ಎಂದರು. ಕೊಡೆಕಲ್ ದುರದುಂಡೇಶ್ವರ ಮಠದ ಪೂಜ್ಯಶ್ರೀ ಶಿವಕುಮಾರ ಮಹಾಸ್ವಾಮಿಗಳು ಮಾತನಾಡಿ ವೀರಶೈವ ಧರ್ಮ ಸೈದ್ಧಾಂತಿ–ಕ ತಳಹದಿ ಮೇಲೆ ನಿಂತ ಧರ್ಮವಾಗಿದೆ. ಇಡೀ ಮನುಕುಲದ ಲೇಸನ್ನು ಬಯಸುವ ಧರ್ಮ ಇದಾಗಿದ್ದು, ಈ ಧರ್ಮದ ಮೂಲ ಪ್ರಕೃತಿಯಾಗಿದೆ. ಇಂತಹ ಶ್ರೇಷ್ಠ ಧರ್ಮದ ಅನುಯಾಯಿಗಳಾದ ನಾವು ಆರ್ಥಿಕವಾಗಿ ದುರ್ಬಲರಾಗಿದ್ದರೂ ಗುರುವಿನ ಸ್ಥಾನದಲ್ಲಿದ್ದು ಎಲ್ಲ ಸಮಾಜಗಳಿಂದ ಗೌರವಿಸಲ್ಪಡುವವರಾಗಿದ್ದೇವೆ, ಸಮಾಜಕ್ಕೆ ಮಾರ್ಗದರ್ಶನ ಮಾಡುವ ಜವಾಬ್ದಾರಿ ನಮ್ಮ ಮೇಲಿದೆ ಆದ್ದರಿಂದ ನಾವು ಧರ್ಮ ಸಂಸ್ಕಾರಗಳನ್ನು ಬೆಳೆಸಿಕೊಂಡು ಬದುಕಲು ಪ್ರಯತ್ನಿಸಬೇಕಾಗಿದೆ ಎಂದರು. ಪಡೇಕನೂರ ದಾಸೋಹ ಮಠದ ಪೂಜ್ಯಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಹಾಗೂ ರಾಷ್ಟ್ರೀಯ ಬೇಡ ಜಂಗಮ ಸಮಾಜದ ಗೌರವ ಅಧ್ಯಕ್ಷರಾದ ಪೂಜ್ಯ ರಾಮಲಿಂಗಯ್ಯ ಶ್ರೀಗಳು ಸಮ್ಮುಖ ವಹಿಸಿ ಆಶೀರ್ವಚನ ನೀಡಿದರು. ವೇದಿಕೆ ಕಾರ್ಯಕ್ರಮ ಮುನ್ನ ಖಾಸ್ಗತೇಶ್ವರ ಮಠದಿಂದ ಆರಂಭಗೊಂಡ ಜಗದ್ಗುರು ರೇಣುಕಾಚಾರ್ಯರ ಮೂರ್ತಿಯ ಮೆರವಣಿಗೆ ಸಕಲ ವಾದ್ಯ ಮೇಳಗಳೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮುಖ್ಯ ವೇದಿಕೆಗೆ ತಲುಪಿತು. ಇದೇ ಸಂದರ್ಭದಲ್ಲಿ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಹಾಗೂ ಸಾಧಕರಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ಸಾಸನೂರ–ತುಂಬಗಿ ಹಿರೇಮಠದ ಪೂಜ್ಯ ಶ್ರೀ ಮಹಾಂತಲಿಂಗ ಶಿವಾಚಾರ್ಯರು ದಿವ್ಯ ಸಾನಿಧ್ಯ ವಹಿಸಿದ್ದರು. ನೇತೃತ್ವವನ್ನು ನಾವದಗಿಯ ಪೂಜ್ಯಶ್ರೀ ಷ.ಬ್ರ. 108 ಶ್ರೀ ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರು, ದೇವರ ಹಿಪ್ಪರಗಿಯ ಪೂಜ್ಯಶ್ರೀ ಜಡಿ ಸಿದ್ದೇಶ್ವರ ಶಿವಾಚಾರ್ಯರು, ಕಲಕೇರಿ ಸಿದ್ದರಾಮ ಶಿವಾಚಾರ್ಯರು, ಪರದೇಶಿ ಮಠದ ಶಿವಯೋಗಿ ಶಿವಾಚಾರ್ಯರು, ವಡವಡಗಿಯ ಪೂಜ್ಯ ಶ್ರೀ ವೀರಸಿದ್ಧ ಮಹಾಸ್ವಾಮಿಗಳು ವಹಿಸಿದ್ದರು. ಈ ವೇಳೆ ಕಾಶಿಬಾಯಿ ಅಮ್ಮನವರು, ಸರೋಜಿನಿ ಅಮ್ಮನವರು, ಶರಣಯ್ಯ ಹಿರೇಮಠ, ಶಿವಶಂಕರ ಹಿರೇಮಠ, ಮುತ್ತುರಾಜ್ ಜಾಗೀರದಾರ, ದಯಾನಂದ ಮೂಗಡ್ಲಿಮಠ, ಈರಯ್ಯ ಹಿರೇಮಠ, ಜ್ಯೋತಿ ಹಿರೇಮಠ, ಮಹಿಳಾ ಘಟಕದ ಅಧ್ಯಕ್ಷೆ ಸುಜಾತ ರಾಮಗಿರಿಮಠ ಹಾಗೂ ಬೇಡ ಜಂಗಮ ಸಮಾಜದ ಸರ್ವ ಬಾಂಧವರು ಇದ್ದರು. ಅಜಯ್ ಡೋಣೂರಮಠ ಪ್ರಾರ್ಥಿಸಿದರು. ಶಿವಶಂಕರ್ ಹಿರೇಮಠ ಸ್ವಾಗತಿಸಿದರು. ಆರ್.ಬಿ. ಧಮ್ಮೂರಮಠ ದಂಪತಿಗಳು ಹಾಗೂ ಶಿಕ್ಷಕ ಆರ್.ಎಫ್.ಹಿರೇಮಠ ನಿರೂಪಿಸಿ ವಂದಿಸಿದರು.

# 2025ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲು ಸೂಚನೆ





ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ:12: ಬರುವ ಮಾರ್ಚ್ 21 ರಿಂದ ಏಪ್ರಿಲ್ 4 ರವರೆಗೆ ನಡೆಯಲಿರುವ 2025 ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ –01 ನಕಲುಮುಕ್ತ ಹಾಗೂ ವ್ಯವಸ್ಥಿತವಾಗಿ ನಡೆಸಲು ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು 2025 ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ–01 ಗೆ ಸಂಬಂಧಿಸಿದಂತೆ ನಡೆದ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಬರುವ ಮಾರ್ಚ್ 21ರಿಂದ ಏಪ್ರಿಲ್ 4ರವರೆಗೆ ಸಡೆಸಲಾಗುವ ಈ ಪರೀಕ್ಷೆ ಸಂದರ್ಭದಲ್ಲಿ ಯಾವುದೇ ರೀತಿಯ ನಕಲುದಂತಹ ಅಕ್ರಮ ಚಟುವಟಿಕೆಗಳು ನಡೆಯದಂತೆ ಎಚ್ಚರಿಕೆವಹಿಸಬೇಕು. ಪರೀಕ್ಷೆಗಳ 'ನ್ನು ವ್ಯವಸ್ಥಿತವಾಗಿ ನಡೆಸಲು ಸಂಬಂಧಿಸಿದ ಅಧಿಕಾರಿಗಳು ಸಕಲ ಕ್ರಮಗಳನ್ನು ಅಚ್ಚುಕಟ್ಟಾಗಿ ಕೈಗೊಳ್ಳುವಂತೆ ಸೂಚನೆ ನೀಡಿದರು.

ಯಾದಗಿರಿ ಜಿಲ್ಲೆಯಲ್ಲಿ ಈ ಪರೀಕ್ಷೆಗಾಗಿ ಒಟ್ಟು 62 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದ್ದು, ಈ ಪರೀಕ್ಷೆ ಕೇಂದ್ರಗಳಲ್ಲಿ 31 ಗ್ರಾಮೀಣ ಹಾಗೂ 31 ನಗರ ಪರೀಕ್ಷೆ ಕೇಂದ್ರಗಳಾಗಿವೆ. 9 ಸೂಕ್ಷ್ಮ ಕೇಂದ್ರಗಳಾಗಿವೆ. ಶಹಾಪುರದಲ್ಲಿ 3 ಹಾಗೂ ಸುರಪುರದಲ್ಲಿ 6 ಸೂಕ್ಷ್ಮ ಪರೀಕ್ಷೆ ಕೇಂದ್ರಗಳಾಗಿವೆ.

ಜಿಲ್ಲೆಯಲ್ಲಿ ಒಟ್ಟು 18017 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. 9249 ಗಂಡು ಹಾಗೂ 8768 ಹೆಣ್ಣು ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಜಿಲ್ಲೆಯಲ್ಲಿ 62 ಪರೀಕ್ಷಾ ಕೇಂದ್ರಗಳಲ್ಲಿ ಮುಖ್ಯಸ್ಥರನ್ನಾಗಿ, 62 ಸ್ಥಳೀಯ ಜಾಗೃತ ದಳದ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಪರೀಕ್ಷೆ ಮಂಡಳಿಯ ಮಾರ್ಗಸೂಚಿಯಂತೆ ಪರೀಕ್ಷೆ ನಡೆಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲಾ ವೆಬ್‌ಕಾಸ್ಟಿಂಗ್ ತಂಡಗಳನ್ನು ರಚಿಸಲಾಗಿದೆ. ಈ ಕುರಿತು ಯಾರಾದರೂ ಅಡ್ಡಿಪಡಿಸಿದಲ್ಲಿ ನೇರವಾಗಿ ಪೊಲೀಸ್ ಇಲಾಖೆಗೆ ದೂರು ನೀಡಬೇಕು. ಜಾಗೃತದಳ ತಂಡಗಳನ್ನು ರಚಿಸಲಾಗಿದ್ದು, ಪರೀಕ್ಷಾ ಕೇಂದ್ರಗಳ ಸುತ್ತಲೂ 200ಮೀ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿಯಲ್ಲಿರಲಿದೆ ಎಂದು ತಿಳಿಸಿ ಸೂಕ್ತ ಪೊಲೀಸ್ ಬಂದೋಬಸ್ತ್ ಸಹ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.

ವಿದ್ಯಾರ್ಥಿಗಳ ಆರೋಗ್ಯ ಹಿತದೃಷ್ಟಿಯಿಂದ ಪರೀ–ಕ್ಷೆ ಕೇಂದ್ರ ಗಳಲ್ಲಿ ನುರಿತ ಆರೋಗ್ಯ ಸಿಬ್ಬಂದಿಗಳನ್ನು ನಿಯೋಜಿಸಬೇಕು. ಪ್ರಶ್ನೆಪತ್ರಿಕೆ ಹಾಗೂ ಗೌಪ್ಯ ಸಾಮಗ್ರಿಗಳನ್ನು ಭದ್ರತೆಯಲ್ಲಿ ನಿರ್ವಹಿಸಲು ಅವರು ಸೂಚಿಸಿದರು.

ಪರೀಕ್ಷೆ ಕಾರ್ಯಗಳಿಗೆ ನೇಮಕಗೊಂಡ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮಾತ್ರ ಕೇಂದ್ರದಲ್ಲಿ ಉಪಸ್ಥಿತರಿರಬೇಕು. ಕಡ್ಡಾಯವಾಗಿ ಗುರುತಿನ ಚೀಟಿ ಧರಿಸಬೇಕು. ಅನ್ಯ ವ್ಯಕ್ತಿಗಳು ಕೇಂದ್ರದಲ್ಲಿ ಕಂಡು ಬಂದಲ್ಲಿ ಮುಖ್ಯಸ್ಥರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಎಂದು ಅವರು ಹೇಳಿದರು.

ಈ ಪರೀಕ್ಷೆ ಸಂದರ್ಭದಲ್ಲಿ ಪರೀಕ್ಷಾರ್ಥಿಗಳು ಎಲೆಕ್ಟ್ರಾನಿಕ್ ವಸ್ತುಗಳು ಮೊಬೈಲ್, ಪೆನ್‌ಡ್ರೈವ್ ಗಳು, ಇಯರ್ ಫೋನ್ಗಳು, ಮೈಕ್ರೋಫೋನ್, ಬ್ಲೂಟೂಥ್ ಸಾಧನಗಳು, ಕೈಗಡಿಯಾರಗಳನ್ನು ಉಪಯೋಗಿಸುವುದನ್ನು ನಿಷೇಧಿಸಲಾಗಿದೆ.

ಪರೀಕ್ಷೆ ಕೇಂದ್ರಗಳ ಸುತ್ತಲೂ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಬೇಕು. ಕೊಠಡಿ ಮೇಲ್ವಿಚಾರಣೆ ನೋಡಿಕೊಳ್ಳಬೇಕು. ವೆಬ್ ಕಾಸ್ಟಿಂಗ್ ಅಳವಡಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಾಗಲಿ, ಸಿಬ್ಬಂದಿಗಳಾಗಲಿ ಮೊಬೈಲ್ ಫೋನುಗಳನ್ನು ಬಳಸುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೊಠಡಿಗಳ ಹೊರಗೆ ಅಲ್ಪ ದೂರದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರಬೇಕು. ಗೌಪ್ಯ ಸಾಮಗ್ರಿಗಳನ್ನು ನಿಯಮಾವಳಿಗಳಂತೆ ನಿರ್ವಹಣೆ ಮಾಡಬೇಕು.

ಪರೀಕ್ಷೆ ವೇಳಾಪಟ್ಟಿಯಂತೆ ಗೌಪ್ಯ ಸಾಮಗ್ರಿಗಳನ್ನು ಪರೀಕ್ಷಾ ಕೇಂದ್ರಗಳಲ್ಲಿ ತಲುಪಿಸಲು ವಿಶೇಷ ಪ್ರಶ್ನೆಪತ್ರಿಕೆ ಮಾರ್ಗಾಧಿಕಾರಿಗಳ ತಂಡವನ್ನು ರಚಿಸಲಾಗಿದೆ.

ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಚಂದ್ರಶೇಖರ ಮುಧೋಳ ಸ್ವಾಗತಿಸಿ ಪರೀ–ಕ್ಷೆ ಕುರಿತು ವಿವರಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಜಿಲ್ಲಾ ಖಜಾನೆ ಇಲಾಖೆ ಉಪನಿರ್ದೇಶಕ ಮಾಳಿಂಗರಾಯ, ಡಯಟ್ ಪ್ರಾಚಾರ್ಯ ಬಿ.ಎಂ.ಹೊಸಮನಿ, ಶಿಕ್ಷಣ ಇಲಾಖೆ ಅಧಿಕಾರಿಗಳು, ಉಪಸ್ಥಿತರಿದ್ದರು.

# ಹೋಳಿ ಹಬ್ಬವನ್ನು ಶಾಂತಿಯುತವಾಗಿ ಆಚರಿಸೋಣ – ಜಿಲ್ಲಾಧಿಕಾರಿ ನಲಿನ್ ಅತುಲ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಪ್ರತಿ ವರ್ಷದಂತೆ ಈ ವರ್ಷವು ಹೋಳಿ ಹಬ್ಬವನ್ನು ಕೊಪ್ಪಳ ಜಿಲ್ಲೆಯಲ್ಲಿ ಎಲ್ಲರೂ ಸೇರಿ ಶಾಂತಿಯುತವಾಗಿ ಆಚರಿಸೋಣ ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರು ಬುಧವಾರ ಕೊಪ್ಪಳ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲನಲ್ಲಿ ಹೋಳಿ ಹಬ್ಬದ ಪ್ರಯುಕ್ತ ಹಮ್ಮಿಕೊಂಡಿದ್ದ ಶಾಂತಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಹಬ್ಬಗಳನ್ನು ನಾವು ಸಂಭ್ರಮಿಸುವದಕ್ಕಾಗಿ ಮಾಡುತ್ತೆವೆ. ನಮ್ಮ ಸಂಭ್ರಮಾಚರಣೆ ಇನ್ನೊಬ್ಬರಿಗೆ ತೊಂದರೆಯಾಗುವಂತೆ ಇರಬಾರದು. ಹೋಳಿ ಹಬ್ಬದ ಇದೇ ಸಂದರ್ಭದಲ್ಲಿ ಮುಸ್ಲಿಂ ಭಾಂದವರು ರಂಜಾನ್ ಹಬ್ಬದ ಆಚರಣೆ ಮಾಡುತ್ತಿದ್ದಾರೆ ಹಾಗೂ ಪಿ.ಯು.ಸಿ ಪರೀಕ್ಷೆಗಳು ನಡೆಯುತ್ತಿರುವುದರಿಂದ ಡಿ.ಜೆ. ಹಚ್ಚಿ ಹೆಚ್ಚು ಶಬ್ದವನ್ನು ಉಂಟುಮಾಡಿ ಇತರರಿಗೆ ತೆ–ೂಂದರೆ ಮಾಡುವದಾಗಲಿ. ಸಾಮಾಜಿಕ ಮಾಧ್ಯಮಗಳಲ್ಲಿ ಕೋಮು ಸೌಹಾರ್ದತೆಗೆ ಧ–ಕ್ಕೆ ತರುವಂತಹ ಯಾವುದೇ ಪೋಸ್ಟಗಳನ್ನು ಹಾಕುವದಾಗಲಿ ಮಾಡಬಾರದು ಎಂದರು.

ನಮ್ಮ ಸಂಪ್ರದಾಯ ಪರಂಪರೆ ಈ ಹಿಂದೆ ಹೇಗೆ ನಡೆಯುತ್ತಾ ಬರುತ್ತಿದೆ ಅದನ್ನೆ ನಾವೆಲ್ಲರೂ ಪಾಲನೆ ಮಾಡಬೇಕು. ಜಿಲ್ಲೆಯಲ್ಲಿ ಮಾರ್ಚ್ 13 ಹಾಗೂ 15 ರವರೆಗೆ ಹೋಳಿ ಹಬ್ಬ ಆಚರಣೆ ಜಿಲ್ಲೆಯ ವಿವಿಧ ಕಡೆ ಮಾಡುತ್ತಿರುವುದರಿಂದ ಶಾಂತಿಯುತವಾಗಿ ಆಚರಿಸಬೇಕು. ಆಯಾ ಸಮಾಜದ ಹಿರಿಯರು ತಮ್ಮ ಯುವಕರಿಗೆ ಈ ಕುರಿತು ತಿಳಿಹೇಳಬೇಕು. ತಮಗೆಲ್ಲರಿಗೂ ಮುಂಚಿತವಾಗಿ ಹೋಳಿ ಹಬ್ಬದ ಶುಭಾಶಯಗಳು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್. ಅರಸಿದ್ದಿ ಅವರು ಮಾತನಾಡಿ, ಹೋಳಿ ಹಬ್ಬ ಶುಕ್ರವಾರ ಬಂದಿರುವುದರಿಂದ ರಂಜಾನ್ ಪ್ರಾರ್ಥನೆ ಇರುತ್ತದೆ. ಹಾಗಾಗಿ ಎಲ್ಲರೂ ಸೌಹಾರ್ದತೆಯಿಂದ ಹೋಳಿ ಹಬ್ಬದ ಆಚರಣೆ ಮಾಡಬೇಕು. ಇತರರ ಭಾವನೆಗಳಿಗೆ ಧಕ್ಕೆ ತರದಂತೆ ಹಬ್ಬದ ಆಚರಣೆ ಯಾಗಬೇಕು. ಡಿ.ಜೆ ಗಳಿಗೆ ಅನುಮತಿ ಇಲ್ಲ. ತಾವು ಹಾಗೇನಾದರೂ ಬೇಕಾದರೆ ಅನುಮತಿ ಪಡೆದುಕೊಳ್ಳಬೇಕು. ಅನುಮತಿ ಇಲ್ಲದವುಗಳನ್ನು ಸೀಜ್ ಮಾಡಲಾಗುತ್ತದೆ ಎಂದರು. ಕಾಮದಹನ ರಸ್ತೆಯ ಮಧ್ಯದಲ್ಲಿ ಮಾಡಿದರೆ ಟ್ರಾಫಿಕ್ ಸಮಸ್ಯೆಗಳಾಗುತ್ತದೆ. ಹಾಗಾಗಿ ಒಂದು ಕಡೆ ಪಕ್ಕದಲ್ಲಿ ಕಾಮದಹನಕ್ಕೆ ವ್ಯವಸ್ಥೆ ಮಾಡಿ. ಎಲ್ಲಾ ಕಡೆ ನಮ್ಮ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗುತ್ತದೆ. ನೈಸರ್ಗಿಕ ಬಣ್ಣಗಳನ್ನು ಉಪಯೋಗಿಸಿ ಹೋಳಿ ಹಬ್ಬವನ್ನು ಆಚರಿಸಿ. ಕೆಮಿಕಲ್ ಮಿಶ್ರಿತ ಬಣ್ಣವನ್ನು ಉಪಯೋಗಿಸಿದಲ್ಲಿ ಅದು ನಮ್ಮ ದೇಹದ ಮೇಲೆ ಚರ್ಮ ಸಮಸ್ಯೆ ಸೇರಿದಂತೆ ಇತರೆ ಪರಿಣಾಮಗಳಾಗುತ್ತವೆ ಎಂದು ಹೇಳಿದರು. ಜಿಲ್ಲಾ ವಕ್ಫ್ ಸಲಹಾ ಸಮಿತಿ ಅಧ್ಯಕ್ಷರಾದ ಪೀರಾಹುಸೇನ ಹೊಸಳ್ಳಿ ಅವರು ಮಾತನಾಡಿ, ಹೋಳಿ ಹಾಗೂ ರಂಜಾನ್ ಹಬ್ಬಗಳನ್ನು ಹಿಂದು ಹಾಗೂ ಮುಸ್ಲಿಮರು ಸೌಹಾರ್ದಯುತವಾಗಿ ಜಿಲ್ಲೆಯಲ್ಲಿ ಆಚರಿಸುತ್ತಾ ಬರುತ್ತಿದ್ದೆವೆ. ಇವುಗಳು ಎಲ್ಲಾ ಜನರ ಅಭಿವೃದ್ಧಿಗಾಗಿ ಮಾಡುವ ಹಬ್ಬಗಳು. ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಲ್ಲಿ ಶಾಂತಿ ಸಭೆಯನ್ನು ಮಾಡುತ್ತಿದ್ದಾರೆ. ಈ ಹಬ್ಬಗಳ ಸಂದರ್ಭದಲ್ಲಿ ಎಲ್ಲರೂ ಪರಸ್ಪರ ಸ್ನೇಹ ಭಾಂದವ್ಯದಿಂದ ಹಬ್ಬಗಳ ಆಚರಣೆ ಮಾಡುತ್ತೆವೆ ಎಂದು ಹೇಳಿದರು. ವಿವಿಧ ಸಮುದಾಯಗಳ ಮುಖಂಡರು ಈ ಹಬ್ಬಗಳ ಆಚರಣೆ ಕುರಿತು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್ ಕುಮಾರ್, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್, ಕೊಪ್ಪಳ ಡಿವೈಎಸ್ಪಿ ಮುತ್ತಣ್ಣ ಸರವಗೋಳ, ಗಂಗಾವತಿ ಡಿವೈಎಸ್ಪಿ ಸಿದ್ದಲಿಂಗಪ್ಪಗೌಡ ಪಾಟೀಲ, ವಿವಿಧ ಸಮಾಜದ ಮುಖಂಡರಾದ ಮುತ್ತೂರ ಸ್ವಾಮಿ ನರೇಗಲ್, ಉಮೇಶ ಕುರುಡೇಕರ್, ಮಾನ್ವಿ ಪಾಷಾ, ಎಸ್ಬಿ ಖಾದ್ರಿಸಾಬ ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

# ಹಿರಿಯ ನಾಗರಿಕರನ್ನು ಗೌರವಿಸೋಣ: ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.12–ಹಿರಿಯ ನಾಗರಿಕರನ್ನು ಪ್ರತಿಯೊಬ್ಬರು ಗೌರವಿಸಬೇಕು. ಸರ್ಕಾರವು ಹಿರಿಯರ ರಕ್ಷಣೆ ಹಾಗೂ ಅವರ ಸಬಲೀಕರಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದು, ಹಿರಿಯರ ನಾಗರಿಕರಿಗೆ ದೊರಕಿಸಿಕೊಡೋಣ ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಮಂಗಳವಾರ ಏರ್ಪಡಿಸಿದ್ದ ಕೇಂದ್ರ ಸರ್ಕಾರದ ರಾಷ್ಟ್ರೀಯ ವಯೋಶ್ರೀ ಯೋಜನೆಯಡಿ ಹಿರಿಯ ನಾಗರಿಕರಿಗೆ ಉಚಿತ ಸಾಧನ ಸಲಕರಣೆಗಳ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ವಯೋಶ್ರೀ ಯೋಜನೆಯಡಿ ಹಿರಿಯ ನಾಗರಿಕರಿಗೆ ಉಚಿತವಾಗಿ ಸಾಧನ ಸಲಕರಣೆಗಳನ್ನು ವಿತರಣೆ ಮಾಡಲಾಗುತ್ತಿದೆ. ವಯೋಸಹಜ ಅಂಗವಿಕಲತೆಯಿಂದಾಗುವ ಸಮಸ್ಯೆಗಳನ್ನು ನಿವಾರಿಸಲು ಈ ಸಲಕರಣೆಗಳು ಸಹಕಾರಿಯಾಗಲಿವೆ. ಹಿರಿಯರು ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಆಗ ಮಾತ್ರ ಯೋಜನೆ ಸಫಲವಾಗಲಿದೆ ಎಂದರು.

ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಅಂಗವೈಕಲ್ಯ ಶಾಪವಲ್ಲ. ಅದನ್ನು ಮೆಟ್ಟಿ ನಿಲ್ಲಬೇಕು, ಕುಗ್ಗಬಾರದು ಎಂದು ಹೇಳಿದರು.

ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ಸರ್ಕಾರವು ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದೆ. ಸರ್ಕಾರದಿಂದ ದೊರೆಯುವ ಸೌಲಭ್ಯಗಳ ಸದುಪಯೋಗ ಪಡೆದು ಉತ್ತಮ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ವಯೋಶ್ರೀ ಯೋಜನೆಯಡಿ ನೋಂದಣಿಯಾದ ಜಿಲ್ಲೆಯ 582 ಹಿರಿಯ ನಾಗರಿಕರಿಗೆ 1,754 ವಿವಿಧ ರೀತಿಯ ಸಾಧನ–ಸಲಕರಣೆಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಜಲಾಲಪ್ಪ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರಕುಮಾರ, ಶಿಕ್ಷಣ ಇಲಾಖೆ ಇಸಿಓ ಅಧಿಕಾರಿ ಮಂಜುನಾಥ, ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ, ಬೆಂಗಳೂರಿನ ಅಲೀಂಕೋ ಸಂಸ್ಥೆಯ ಶಿಲ್ಪಾ, ಸ್ಮೈಲ್ ಸಂಸ್ಥೆಯ ಅಧ್ಯಕ್ಷ ಉಮಾಪತಿ ಗೌಡ ಸೇರಿದಂತೆ ಜಿಲ್ಲಾ ವಿಕಲಚೇತನರ ಪುರ್ನವಸತಿ ಕೇಂದ್ರ, ವಿಕಲಚೇತನರು ಮತ್ತು ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಹಿರಿಯ ನಾಗಕರಿಕರು, ಮತ್ತೀತರರು ಉಪಸ್ಥಿತರಿದ್ದರು.

# ಕುರುಗೋಡು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಗ್ಯಾರಂಟಿ ಯೋಜನೆಗಳಿಂದ ಸ್ವಾವಲಂಬಿ ಜೀವನ: ಕೆ.ಇ.ಚಿದಾನಂದಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.12– ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ರಾಜ್ಯದ ಬಡವರು, ಮಹಿಳೆಯರು ಸ್ವಾವಲಂಬಿ ಜೀವನ ಸಾಗಿಸಲು ಸಾಧ್ಯವಾಗುತ್ತಿದೆ ಮತ್ತು ರಾಜ್ಯದ ಜನರ ಆದಾಯವು ಬೆಳವಣಿಗೆಯಾಗುತ್ತಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು.

ಅವರು, ಮಂಗಳವಾರ ಕುರುಗೋಡು ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಕುರುಗೋಡು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದ ಪ್ರತಿ ವಿಧಾನಸಭಾ ವ್ಯಾಪ್ತಿಯಲ್ಲಿ ವರ್ಷಕ್ಕೆ 233 ಕೋಟಿ ಹಣ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಖರ್ಚು ಮಾಡಲಾಗುತ್ತಿದೆ. ಇದು ಸಾರ್ಥಕವಾಗಬೇಕೆಂದರೆ ಗ್ಯಾರಂಟಿ ಯೋಜನೆಗಳ ಕುರಿತು ಜನರಿಗೆ ಮಾಹಿತಿ ಮತ್ತು ಮಾರ್ಗದರ್ಶನ ಕೊಡುವನಿಟ್ಟಿನಲ್ಲಿ ನಾವೆಲ್ಲರೂ ಶ್ರಮಿಸಬೇಕಿದೆ ಎಂದು ಹೇಳಿದರು.

2025 –26 ಬಜೆಟ್ ನಲ್ಲಿ 51,275 ಕೋಟಿ ಗ್ಯಾರಂಟಿ ಯೋಜನೆಗಳಿಗೆ ಮೀಸಲಿಡುವ ಮೂಲಕ ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳು ನಿಲ್ಲಿಸುವುದಿಲ್ಲ ಎಂಬ ಸಂದೇಶ ರಾಜ್ಯದ ಮುಖ್ಯಮಂತ್ರಿಗಳು ನೀಡಿದ್ದಾರೆ. ಮಹಿಳಾ ಸಬಲೀಕರಣ ಮೂಲಕ ಇಡೀ ರಾಜ್ಯವನ್ನು ಪ್ರಗತಿ ಪಥದಲ್ಲಿ ನಡೆಸುವ ಸಂಕಲ್ಪ ರಾಜ್ಯ ಸರ್ಕಾರ ಹೊಂದಿದೆ ಎಂದರು.

ಗೃಹಲಕ್ಷ್ಮೀ ಫಲಾನುಭವಿಗಳಿಗಳನ್ನು ಸ್ವಸಹಾಯ ಗುಂಪುಗಳ ಸದಸ್ಯರನ್ನಾಗಿ ಮಾಡಿ ಉಳಿತಾಯ ಮತ್ತು ಉದ್ಯಮಶೀಲತೆ ಹೆಚ್ಚಿಸಲು ಅಕ್ಕಿ ಕೋ–ಆಪರೇಟಿವ್ ಸೊಸೈಟಿ ಸ್ಥಾಪಿಸಿ ಅವರಿಗೆ ಇಂದಿರಾ ಕ್ಯಾಂಟೀನ್, ಅಕ್ಕ ಕೆಫೆ, ಶಿಶುಪಾಲನೆ ವಾತ್ಸಲ್ಯ ಕೇಂದ್ರಗಳ ನಿರ್ವಹಣೆ ಹೊಣೆಗಾರಿಕೆ ವಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಇದೇ ತಿಂಗಳಿನಿಂದ ಪಡಿತರ ವ್ಯವಸ್ಥೆ ಮೂಲಕ ಪ್ರತಿಯೊಬ್ಬರಿಗೂ 10 ಕೆಜಿ ಅಕ್ಕಿ ವಿತರಿಸಲಾಗುತ್ತಿದೆ. ಇದರಿಂದ ಆಹಾರ ಇಲಾಖೆ ಜವಾಬ್ದಾರಿ ಇನ್ನೂ ಹೆಚ್ಚಾಗಲಿದೆ. ಕಾಳ ಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟ ಆಗದಂತೆ ನೋಡಿಕೊಳ್ಳಬೇಕು. ನ್ಯಾಯ ಬೆಲೆ ಅಂಗಡಿ ಮಾಲೀಕರು ಅಥವಾ ಅಧಿಕಾರಿಗಳು ಯಾವುದೇ ಅಕ್ರಮಗಳಿಗೆ ಆಸ್ಪದ ನೀಡಬಾರದು. ಅಂತಹವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳು ಅಭಿವೃದ್ಧಿಗೆ ಪೂರಕವೇ ಹೊರತು, ಮಾರಕ ಅಲ್ಲ ಎನ್ನುವುದನ್ನು ಎಲ್ಲರಿಗೂ ಮನವರಿಕೆ ಮಾಡಿಕೊಡಬೇಕು. ಶೇಕಡಾ ನೂರರಷ್ಟು ಯೋಜನೆಗಳ ಜಾರಿಗೆ ಪ್ರಯತ್ನ ಮಾಡಬೇಕು. ಐದು ಇಲಾಖೆ ಅಧಿಕಾರಿಗಳು, ಸಮಿತಿ ಅಧ್ಯಕ್ಷರು ಸದಸ್ಯರಿಗೆ ಸಹಕರಿಸಬೇಕು ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಗ್ರಾಮ, ಹೋಬಳಿ, ತಾಲ್ಲೂಕು ಮಟ್ಟದಲ್ಲಿ ಮಹಿಳೆಯರ ಶಿಬಿರ ಏರ್ಪಡಿಸಿ ಜಾಗೃತಿ ಮೂಡಿಸುವ ಕೆಲಸವಾಗಬೇಕು. ಅದಕ್ಕಾಗಿ ಅಧಿಕಾರಿಗಳು ಯೋಜನೆ ರೂಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕುರುಗೋಡು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಬಸವನಗೌಡ ಅವರು ಮಾತನಾಡಿ, ಎಲ್ಲಾರು ಸೇರಿ ಕುರುಗೋಡು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಶೇಕಡಾ ನೂರಕ್ಕೆ ನೂರರಷ್ಟು ಪ್ರಗತಿ ಸಾಧಿಸಲು ಪ್ರಯತ್ನಿಸೋಣ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸದಸ್ಯರಾದ ಆನಂದ್, ರವಿಕುಮಾರ್ ರೆಡ್ಡಿ, ಶಿವರಾಜ್ ಹಾಗೂ ತಾಲ್ಲೂಕು ಸಮಿತಿ ಸದಸ್ಯರಾದ ಜಡೆಪ್ಪ, ಗೋಪಾಲ, ಕಾಶಿನಾಥ್ ಸ್ವಾಮಿ, ಯು.ಗಂಗಾಧರ, ಈರಣ್ಣ, ರಾಮಲಿಂಗ, ಬಿ.ಬಾಬು, ಹನುಮಂತ, ಸಾಳೆರು ಕೃಷ್ಣ, ಗಂಗಾಧರ, ಶೇಕ್ಷಾವಲಿ, ಲಿಂಗಪ್ಪ, ಹುಲಿಗೇಶ್ ಮತ್ತು ಕುರುಗೋಡು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆ.ವಿ.ನಿರ್ಮಲ, ಎಸಿಡಿಪಿಓ, ಆಹಾರ ಇಲಾಖೆಯ ಮಲ್ಲಿಕಾರ್ಜುನ, ಜೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರಾಜೇಂದ್ರ ಪ್ರಸಾದ್, ಕೆಕೆಆರ್‌ಟಿಸಿ ಕುರುಗೋಡು ಬಸ್ ಘಟಕದ ಸಹಾಯಕ ವ್ಯವಸ್ಥಾಪಕ ಮಂಜುನಾಥ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಚಿಟಗುಪ್ಪ ತಾಲ್ಲೂಕಿನ ಕಸಾಪ ಅಧ್ಯಕ್ಷರಾಗಿ ಅನೀಲಕುಮಾರ ಶಿಂಧೆ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ನಾಡು–ನುಡಿ, ನೆಲ–ಜಲ ಕಲೆ, ಸಾಹಿತ್ಯ, ಸಂಸ್ಕೃತಿ ಸೇರಿದಂತೆ ಕನ್ನಡಿಗರ ಸಾಂಸ್ಕೃತಿಕ ಬದುಕಿನ ಸಂವರ್ಧನೆಗಾಗಿ ಜನ್ಮ ತಳೆದ ಸಮಸ್ತ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯ ಚಟುವಟಿಕೆಗಳನ್ನು ಇನ್ನಷ್ಟು ಕ್ರಿಯಾಶೀಲಗೊಳಿಸಲು ಚಿಟಗುಪ್ಪ ತಾಲ್ಲೂಕಿನ ಕಸಾಪದ ನೂತನ ಅಧ್ಯಕ್ಷರನ್ನಾಗಿ ಅನೀಲಕುಮಾರ ಶಿಂಧೆ ಅವರನ್ನು ನೇಮಿಸಲಾಗಿದೆ ಎಂದು ಕಸಾಪ ಜಿಲ್ಲಾ ಅಧ್ಯಕ್ಷ ಸುರೇಶ ಚನ್ನಶೆಟ್ಟಿ ತಿಳಿಸಿದ್ದಾರೆ. ಈ ಹಿಂದೆ ತಾಲ್ಲುಕು ಘಟಕದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಶ್ರೀ ರಮೇಶ ಸಲಗರ ಅವರು ತಮ್ಮ ವೈಯಕ್ತಿಕ ಕಾರಣದಿಂದ ಕಸಾಪ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿರುತ್ತಾರೆ. ಶ್ರೀ ರಮೇಶ ಸಲಗರ ಅವರು ತಮ್ಮ ಅವಧಿಯಲ್ಲಿ ಕ್ರಿಯಾಶೀಲರಾಗಿ ತಾಲ್ಲೂಕು ಸಮ್ಮೇಳನ ಶಾಲಾ ಕಾಲೇಜುಗಳಲ್ಲಿ ಕನ್ನಡ ಕಾರ್ಯಕ್ರಮ, ಕವಿ ಸಾಹಿತಿಗಳ ಸ್ಮರಣೆ, ಪ್ರತಿಭಾ ಪುರಸ್ಕಾರ, ಮನೆಗಳಲ್ಲಿ ಸಾಹಿತ್ಯ ಜ್ಯೋತಿ ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಸಂಘಟಿಸಿರುತ್ತಾರೆ. ಹೀಗಾಗಿ ಅವರಿಂದ ತೆರವಾದ ಸ್ಥಾನಕ್ಕೆ ಉಳಿದ ಅವಧಿಗೆ ಅನೀಲಕುಮಾರ ಶಿಂಧೆ ಅವರನ್ನು ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ. ಉಪನ್ಯಾಸಕರಾಗಿರುವ ಶಿಂಧೆ ಅವರು ಎರಡು ದಶಕಗಳಿಂದ ಸಾಹಿತ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತ ಬಂದಿದ್ದು ಈ ಹಿಂದೆ ವಲಯ ಮತ್ತು ತಾಲ್ಲೂಕು ಘಟಕದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.

# ಭಗೀರಥ ಮೂರ್ತಿ ಭೂಮಿ ಪೂಜೆ: ಸ್ವಾಮೀಜಿಗೆ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 12 :– ಭಾಲ್ಕಿ ತಾಲ್ಲೂಕಿನ ಖೋಟೆಗಾಂವ್ ಗ್ರಾಮದಲ್ಲಿ ಏಪ್ರಿಲ್ ನಲ್ಲಿ ನಡೆಯಲಿರುವ ಮಹರ್ಷಿ ಭಗೀರಥ ಮೂರ್ತಿ ಸ್ಥಾಪನೆ ಭೂಮಿ ಪೂಜೆ ಕಾರ್ಯಕ್ರಮಕ್ಕೆ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗದ ಭಗೀರಥ ಪೀಠದ ಡಾ. ಪುರುಷೋತ್ತಮಾನಂದ ಸ್ವಾಮೀಜಿ ಅವರನ್ನು ಆಹ್ವಾನಿಸಲಾಯಿತು.

ಜಿಲ್ಲಾ ಉಪ್ಪಾರ ಸಮಾಜ ಸಂಘದ ನೇತೃತ್ವದಲ್ಲಿ ಹೊಸದುರ್ಗದ ಮಠದಲ್ಲಿ ಅವರಿಗೆ ಆಮಂತ್ರಣ ನೀಡಲಾಯಿತು.

ಖೋಟೆಗಾಂವ್ ಗ್ರಾಮದ ನರಸಿಂಗ್ ಮಹಾರಾಜ್, ಜಿಲ್ಲಾ ಉಪ್ಪಾರ ಸಮಾಜ ಸಂಘದ ಅಧ್ಯಕ್ಷ ತಾನಾಜಿ ಸಗರ್, ಕಾರ್ಯಕಾರಿಣಿ ಸದಸ್ಯ ಪ್ರಶಾಂತ್ ಸಗರ್, ಪ್ರಮುಖರಾದ ಉಮಾಕಾಂತ್ ಸಗರ್, ಅಮೂಲ್ ಸಗರ್, ರಾಜಕುಮಾರ ಪಾಟೀಲ ಮತ್ತಿತರರು ಇದ್ದರು.

# ಮರಣ ಹೊಂದಿದ ಕೋಳಿ, ಪಕ್ಷಿಗಳು ಕಂಡುಬಂದಲ್ಲಿ ಮುಟ್ಟದಂತೆ ಜಾಗೃತಿ ವಹಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.12–ಸಾರ್ವಜನಿಕರು ಕೋಳಿಶೀತಜ್ವರಕ್ಕೆ ಸಂಬಂಧಿಸಿದಂತೆ ಭಯಬೇಡ. ತಮ್ಮ ಸುತ್ತ–ಮುತ್ತ ತಾವಾಗಿಯೇ ಮರಣ ಹೊಂದಿದ ಕೋಳಿ, ಪಕ್ಷಿಗಳು ಕಂಡುಬಂದಲ್ಲಿ ಮುಟ್ಟದಂತೆ ಜಾಗೃತಿ ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದರು.

ಇತ್ತೀಚೇಗೆ ಬಳ್ಳಾರಿ ತಾಲ್ಲೂಕಿನ ಕಪ್ಪಗಲ್ಲು ಗ್ರಾಮದಲ್ಲಿ ಕೋಳಿಶೀತ ಜ್ವರಕ್ಕೆ ಸಂಬಂಧಿಸಿದಂತೆ ವೈದ್ಯಕೀಯ ತಂಡವು ಮನೆ ಭೇಟಿಯ ಮೂಲಕ ಆರೋಗ್ಯ ಜಾಗೃತಿ ನೀಡುತ್ತಿರುವುದರ ಕುರಿತು ಪರಿಶೀಲಿಸಿ ಅಲ್ಲಿನ ಜನತೆಯೊಂದಿಗೆ ಮಾತನಾಡಿದರು.

ಕೋಳಿಶೀತಜ್ವರವು (ಹಕ್ಕಿಗಳಿಗೆ ಸಂಬಂಧಿಸಿದ) ವೈರಾಣುಗಳಿಂದ ಉಂಟಾಗಿದ್ದು, ಸೋಂಕು ತಗುಲಿದ ಹಕ್ಕಿಗಳಿಂದಾಗುವ ವಿಸರ್ಜನೆ, ಶ್ವಾಸೋಚ್ಛಾಸ ಕ್ರಿಯೆ ಮತ್ತು ರಕ್ತದಿಂದ ಹರಡುತ್ತದೆ. ಹಾಗಾಗಿ ಸಾರ್ವಜನಿಕರು ಆತಂಕಪಡುವ ಅಗತ್ಯ ಇಲ್ಲ ಎಂದರು.

ಕೋಳಿಶೀತ ಜ್ವರ (ಬರ್ಡ್ ಫ್ಲೂ) ಪ್ರಕರಣ ವರದಿಯಾದ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕ್ಷೇತ್ರ ಸಿಬ್ಬಂದಿಯವರಿಂದ ಮನೆ ಭೇಟಿ ಮೂಲಕ ಜನತೆಗೆ ಜಾಗೃತಿ ನೀಡಲಾಗುತ್ತಿದ್ದು, ತಮ್ಮ ವ್ಯಾಪ್ತಿಯ ಆಕಸ್ಮಿಕವಾಗಿ ಕೋಳಿ ಹಾಗೂ ಇತರೆ ಪಕ್ಷಿಗಳು ಮೃತಪಟ್ಟಿರುವ ಮಾಹಿತಿ ಬಂದರೆ ಅವುಗಳನ್ನು ಮುಟ್ಟಬಾರದು ಎಂದು ಅವರು ಹೇಳಿದರು.

ಗ್ರಾಮಸ್ಥರಲ್ಲಿ ಅಥವಾ ಸೋಂಕು ವರದಿಯಾದ ಬೇರೆ ಊರಿನಿಂದ ಆಗಮಿಸಿದ ಯಾರಿಗಾದರೂ ಕೆಮ್ಮು, ತೀವ್ರಜ್ವರ, ಉಸಿರಾಟದಲ್ಲಿ ತೊಂದರೆ, ಮೂಗು ಸೋರುವಿಕೆ, ತಲೆನೋವು, ಸ್ನಾಯುಗಳ ನೋವು, ಗಂಟಲಿನ ಊತ ಕಂಡುಬಂದಲ್ಲಿ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಸೂಕ್ತ ಔಷಧೋಪಾರ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಸೋಂಕು ತಗುಲಿದ ಕೋಳಿ ಮರಿಗಳ ಪುಕ್ಕಗಳನ್ನು ತರಿಯುವ ಮತ್ತು ಹತ್ಯೆಮಾಡುವ ಕಾರ್ಯಗಳಲ್ಲಿ ನಿರತರಾದ ವಯಸ್ಕರಲ್ಲಿ ಹೆಚ್ಚಾಗಿ ಈ ಸೋಂಕು ಬರಬಹುದು. ಕಾರಣ ಸೋಂಕು ತಗಲಿದ, ಸಾಯುವ ಹಂತದಲ್ಲಿರುವ ಕೋಳಿಗಳಿರುವ ವಾತಾವರಣದಲ್ಲಿ ನಿರತರಾದ ಮಕ್ಕಳಿಗೂ ಈ ಸೋಂಕು ಹರಡುತ್ತದೆ. ಹಾಗಾಗಿ ವ್ಯಾದಿಗೊಳಗಾದ ಅಥವಾ ಆಕಸ್ಮಿಕವಾಗಿ ಮರಣ ಹೊಂದಿದ ಹಕ್ಕಿಗಳನ್ನು ಕೈಯಿಂದ ಮುಟ್ಟಬಾರದು. ಒಂದು ವೇಳೆ ಮನೆಯಲ್ಲಿ ಸಾಕಿದ ಇಲ್ಲವೇ, ಸೋಂಕು ಕಂಡುಬಂದ ಕೋಳಿ, ಹಕ್ಕಿಗಳ ಪುಕ್ಕಗಳನ್ನು ತೆಗೆಯಬಾರದು ಅಥವಾ ಕೈಯಿಂದ ಮುಟ್ಟಬಾರದು ಎಂದು ತಿಳಿಸಿದರು.

ಹಕ್ಕಿಗಳು ವೈರಾಣು ಸೋಂಕನ್ನು ಹೊಂದಿರಬಹುದಾಗಿದ್ದು, ಮಕ್ಕಳು ಸ್ಪರ್ಶ ಮಾಡುವುದಕ್ಕಾಗಲಿ ಅಥವಾ ಅವುಗಳೊಂದಿಗೆ ಆಟ ಆಡುವುದಾಗಲೀ ಅಥವಾ ಸಾಗಿಸುವುದಾಗಲಿ ಬಿಡಬಾರದು. ಸಾರ್ವಜನಿಕರು ಭಯಪಡದೆ ಆಕಸ್ಮಿಕವಾಗಿ ಕೋಳಿ, ಹಕ್ಕಿಗಳನ್ನು ಮುಟ್ಟಿದರೆ ಕೈಗಳಿಂದ ಕಣ್ಣು, ಮೂಗು ಅಥವಾ ಬಾಯಿಯನ್ನು ಉಜ್ಜಿಕೊಳ್ಳದಂತೆ ಎಚ್ಚರವಹಿಸಬೇಕು. ಈಗಾಗಲೇ ಜಿಲ್ಲಾಡಳಿತದಿಂದ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಜಿಲ್ಲಾಡಳಿತದ ಸೂಚನೆಯಂತೆ ಅಗತ್ಯ ಔಷಧಿಗಳ ಲಭ್ಯತೆ ಮಾಡಲಾಗಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ಕೋಳಿಶೀತ ಜ್ವರ ಕಂಡುಬಂದ ಕೋಳಿ ಸಾಕಾಣಿಕೆ ಕೇಂದ್ರಕ್ಕೆ ಭೇಟಿ ನೀಡಿದರು.

ಈ ವೇಳೆ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್.ದಾಸಪ್ಪನವರ, ಆರೋಗ್ಯ ನೀರಿಕ್ಷಣಾಧಿಕಾರಿ ಮಹೀಂದ್ರ ಸಿಂಗ್, ಆಶಾ ಕಾರ್ಯಕರ್ತೆಯರಾದ ಪದ್ಮಾವತಿ, ಈರಮ್ಮ, ಲತಾ, ಯಶೋಧಾ, ಸೇರಿದಂತೆ ಗ್ರಾಮಸ್ಥರು ಇದ್ದರು.

ಪತಂಜಲಿ ಶಾಲೆಯಲ್ಲಿ ಮಹಿಳಾ ದಿನಾಚರಣೆ: ಎಎಸ್‌ಐ ಅನಿತಾ ಹೇಳಿಕೆ

# ಸಮಸ್ಯೆ ಧೈರ್ಯದಿಂದ ಎದುರಿಸಿ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 12 :– ಜೀವನದಲ್ಲಿ ಎದುರಾಗುವ ಸಮಸ್ಯೆಗಳನ್ನು ಮಹಿಳೆಯರು ಧೈರ್ಯದಿಂದ ಎದುರಿಸಬೇಕು ಎಂದು ಮಾರ್ಕೆಟ್ ಠಾಣೆ ಎಎಸ್‌ಐ ಅನಿತಾ ಪೋಲ್‌ದಾಸ್ ಹೇಳಿದರು. ಗಣೇಶ್ವರ ಚಾರಿಟಬಲ್ ಟ್ರಸ್ಟ್ ಸಂಚಾಲಿತ ನಗರದ ಕೆಇಬಿ ಕಾಲೊನಿಯ ಪತಂಜಲಿ ಪಬ್ಲಿಕ್ ಶಾಲೆಯಲ್ಲಿ ಬುಧವಾರ ನಡೆದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ರೀತಿಯ ಅನ್ಯಾಯವಾದಲ್ಲಿ ಕಾನೂನು ನೆರವು ಪಡೆಯಬೇಕು ಎಂದು ತಿಳಿಸಿದರು.

ವಿನೋತಾ ಹಿರೇಮಠ ಮಾತನಾಡಿ, ಬಾಲ್ಯ ವಿವಾಹ ಹಾಗೂ ಹೆಣ್ಣು ಭ್ರೂಣ ಹತ್ಯೆ ಸಂಪೂರ್ಣ ನಿಲ್ಲಬೇಕು ಎಂದು ಹೇಳಿದರು. ಎಂಜಿನಿಯರ್ ವಿನಯ್ ಗರುಡ್, ಈಶ್ವರಿ ಬೇಲೂರೆ ಮಾತನಾಡಿದರು. ಟ್ರಸ್ಟ್ ಅಧ್ಯಕ್ಷೆ ಉಷಾ ಮಾರುತಿ ಮೇತ್ರೆ ಅಧ್ಯಕ್ಷತೆ ವಹಿಸಿದ್ದರು.

ಶಾಲೆಯ ಆಡಳಿತಾಧಿಕಾರಿ ಬಸವರಾಜ ಮುಗಟಾಪುರೆ, ಮುಖ್ಯ ಶಿಕ್ಷಕಿ ಸುಪ್ರಿಯಾ ಕುಲಕರ್ಣಿ, ಶಿಕ್ಷಕಿಯರಾದ ಶಾರದಾ ಜ್ಯಾಂತಿಕರ್, ಅನಿತಾ ಕಾಂಬಳೆ, ಪವಿತ್ರಾ ಸ್ವಾಮಿ, ಶ್ರುತಿ ತಲಾರಿ ಉಪಸ್ಥಿತರಿದ್ದರು. ಶಿವಮಂಗಲಾ ಸ್ವಾಗತಿಸಿದರು. ವನಿತಾ ಕುಲಕರ್ಣಿ ನಿರೂಪಿಸಿದರು. ಪೂಜಾ ಕೋಳಿ ವಂದಿಸಿದರು.

# ಪ್ರಯಾಣಿಕರ ಸೋಗಿನಲ್ಲಿ ಗಾಂಜಾ ಸಾಗಿಸುತ್ತಿದ್ದ ಆರೋಪಿ ಅರೆಸ್ಟ್ – 14 ಕೆಜಿ ಮಾಲು ವಶ!



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 12 :– ರಾಜ್ಯದಲ್ಲೂ ಗಾಂಜಾ ಘಾಟು ಜೋರಾಗಿಯೇ ಹಬ್ಬಿದೆ. ಎಲ್ಲೆಂದರಲ್ಲಿ ಗಾಂಜಾ ಮಾರಾಟ ಎಗ್ಗಿಲ್ಲದೆ ಸಾಗಿದ್ದು, ಕರ್ನಾಟಕದ ಮುಕುಟ ಮಣಿ ಬೀದರ್ ನಲ್ಲಿ ಖಾಕಿ ತಲಾಶ್ ಮಾಡಿ ಆರೋಪಿಯನ್ನು ಬಂಧಿಸಿದ್ದಾರೆ.

ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಅಕ್ರಮವಾಗಿ ಗಾಂಜಾ ಸಾಗಿಸುತ್ತಿದ್ದ ಆರೋಪಿಯನ್ನು ಬಂಧಿಸಿ, 14 ಲಕ್ಷ ರೂ. ಮೌಲ್ಯದ ಗಾಂಜಾ ವಶಕ್ಕೆ ಪಡೆದಿದ್ದಾರೆ.

ಪೆಡ್ಲರ್ ನನ್ನು ಹೈದರಾಬಾದ್ ಮೂಲದ ಪವನ್ ಎಂದು ಗುರುತಿಸಲಾಗಿದ್ದು, ಪ್ರಯಾಣಿಕರ ಸೋಗಿನಲ್ಲಿ ಅಕ್ರಮವಾಗಿ ಗಾಂಜಾ ಸಾಗಿಸುತ್ತಿದ್ದ ಎಂದು ಗೊತ್ತಾಗಿದೆ.

ಮಹಾರಾಷ್ಟ್ರದಿಂದ ತೆಲಂಗಾಣಕ್ಕೆ ರೈಲಿನಲ್ಲಿ ತೆರಳಿ ಅಲ್ಲಿಂದ ಹೈದರಾಬಾದ್‌ಗೆ ಅಕ್ರಮವಾಗಿ ಗಾಂಜಾ ಸಾಗಿಸುತ್ತಿದ್ದ. ಈ ಕುರಿತು ಖಚಿತ ಮಾಹಿತಿ ಮೇರೆಗೆ ಎಸ್ಪಿ ಪ್ರದೀಪ್ ಗುಂಟಿ ಮಾರ್ಗದರ್ಶನದಲ್ಲಿ ಭಾಲ್ಕಿ ಪೊಲೀಸರು, ತಹಶೀಲ್ದಾರ್ ಹಾಗೂ ಅಧಿಕಾರಿಗಳು ಸೇರಿ ದಾಳಿ ನಡೆಸಿದ್ದಾರೆ. ದಾಳಿ ವೇಳೆ ಬ್ಯಾಗಿನಲ್ಲಿ ಬರೋಬ್ಬರಿ 14 ಲಕ್ಷ ರೂ. ಮೌಲ್ಯದ ಅಕ್ರಮ ಗಾಂಜಾ ಪತ್ತೆಯಾಗಿದೆ.

ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರಿಸಿದ್ದಾರೆ. ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ನೀಡಿದ್ದು, ಭಾಲ್ಕಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜೆಸ್ಕಾಂ ಗ್ರಾಮೀಣ; ಮಾ.14ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.12– ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಯ 110/11ಕೆವಿ ಮಟಮಾರಿ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡ ಪ್ರಯುಕ್ತ ಮಾ.14ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 4ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ. ಅಂದು ಬೆಳಿಗ್ಗೆ 10ಗಂಟೆಯಿಂದ ಮಟಮಾರಿ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುರನಾಳ ಮಳೆರಾಜೇಂದ್ರಸ್ವಾಮಿ ಮಠದ ವಾಣಿ

# ಈ ವರ್ಷ ರೋಹಿಣಿ ಉತ್ತಮ, ಸ್ವಾತಿ ಮಳೆ ಸಂಪೂರ್ಣ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.12– ಪ್ರಸಕ್ತ ವರ್ಷ ಮುಂಗಾರು ಮಳೆಗಳಾದ ರೋಹಿಣಿ. ಆರಿದ್ರಾ, ಪುಷ್ಯಾ, ಹಿಂಗಾರು ಮಳೆಗಳಲ್ಲಿ ಮಗಿ, ಉತ್ತರಿ, ಸ್ವಾತಿ ಮಳೆಗಳು ಸಂಪೂರ್ಣ ಸುರಿಯಲಿವೆ. ಇದು ಮುರನಾಳ ಶ್ರೀ ಮಳೆರಾಜೇಂದ್ರಸ್ವಾಮಿ ಮಠದ ವಾಣಿ.

ಕೃಷಿಕರ ಮಠವೆಂದು ಖ್ಯಾತಿ ಪಡೆದಿರುವ ಮುರನಾಳದ ಶ್ರೀ ಮಳೆರಾಜೇಂದ್ರಸ್ವಾಮಿ ಮಠದ ಜಾತ್ರಾಮಹೋತ್ಸವದ ಅಂಗವಾಗಿ ನಡೆದ ಕಡುಬಿನ ಕಾಳಗ(ಮಳೆ ಬೆಳೆ ಸೂಚನೆ) ದಲ್ಲಿ ಈ ಸೂಚನೆ ದೊರೆತಿದೆ.

ಮುಂಗಾರಿನಲ್ಲಿ ರೋಹಣಿ, ಆರಿದ್ರಾ, ಪುಷ್ಯಾ ಸಂಪೂರ್ಣ, ಮೃಗಶಿರಾ ಉತ್ತಮ, ಪುನರ್ವಸು ಸಾಧಾರಣ. ಹಿಂಗಾರಿನಲ್ಲಿ ಮಗಿ, ಉತ್ತರಿ, ಸ್ವಾತಿ ಸಂಪೂರ್ಣ, ಹುಬ್ಬಿ ಉತ್ತಮ, ಚಿತ್ತಿ ಸಾಧಾರಣ ಮಳೆ ಸುರಿಯಲಿವೆ ಎಂಬುದಾಗಿ ಶ್ರೀ ಮಠದ ಸೂಚನೆ ದೊರೆತಿದೆ ಎಂದು ಮಠದ ಪೂಜ್ಯರಾದ ಮೌನೇಶ್ವರ ಸ್ವಾಮಿಗಳು ಮಹಾಪುರುಷ ಅವರು ನೆರೆದ ಭಕ್ತರಿಗೆ ತಿಳಿಸಿದರು.

ಕಡುಬಿನ ಕಾಳಗದ ಮುಂಚೆ ನಡೆದ ಮಳೆರಾಜೇಂದ್ರಸ್ವಾಮಿಗಳ ಮೂರ್ತಿಯ ಪಲ್ಲಕ್ಕಿ ಮೆರವಣಿಗೆಯಲ್ಲಿ ಗ್ರಾಮದ ಸಾವಿರಾರು ಮಹಿಳೆಯರು ಆರತಿ ಹಾಗೂ ಪಂಚಬಿಂದಿಗೆಯೊಂದಿಗೆ ಪಾಲ್ಗೊಂಡಿದ್ದರು.

ಸಂಭ್ರಮದಿಂದ ನಡೆದ ಕಡುಬಿನ ಕಾಳಗದಲ್ಲಿ ಮಠಾಧೀಶರಾದ ಮೌನೇಶ್ವರಸ್ವಾಮಿಗಳು ಮಹಾಪುರುಷ, ಅಡವೇಶ ಶಾಸ್ತ್ರಿಗಳು, ಗ್ರಾಮದ ಮುಖಂಡರಾದ ಹುಚ್ಚಪ್ಪ ಶಿರೂರ, ಶ್ರೀಶೈಲ ಬಾಳಿಕಾಯಿ, ಸಿದ್ದಪ್ಪ ಮುಚಖಂಡಿ, ಸಿದ್ದಪ್ಪ ಬಂಗಿ, ಅಶೋಕ ಪತ್ತಾರ, ಶೇಖಪ್ಪ ಗಣಿ, ವಿವೇಕಾನಂದ ಗೂಗಿಹಾಳ, ಮುರಗೇಶ ದೊಡಮನಿ, ರಾಚಪ್ಪ ದೊಡಮನಿ, ಪ್ರಕಾಶ ದೊಡಮನಿ, ಗಂಗಪ್ಪ ಓಬಳಿ, ರಂಗಪ್ಪ ರೊಳ್ಳಿ, ಈರಪ್ಪ ಶಿರೂರ, ಮಳಿಯಪ್ಪ ಕುಂಬಾರ, ರುಕ್ಮಣ್ಣ ಪತ್ತಾರ, ಹಾಗೂ ಅರ್ಚಕರಾದ ಸಂಜು ಪತ್ತಾರ, ಮಂಜು ಪತ್ತಾರ, ರಾಘು ಪತ್ತಾರ, ಕಲ್ಲಪ್ಪ ಕಂಬಾರ, ಸಕರಪ್ಪ ಕಂಬಾರ, ಈರಪ್ಪ ಬಡಿಗೇರ, ಬೀಮಪ್ಪ ಗಲಗಲಿ, ಹನಮಂತ ಪತ್ತಾರ, ಮೌನೇಶ ಬಡಿಗೇರ, ಸಿದ್ದಪ್ಪ ತೆಗ್ಗಿ, ಅಪ್ಪಣ್ಣ ತೆಗ್ಗಿ, ಪ್ರಕಾಶ ಬಿಸಾಳಿ, ಮಳಿಯಪ್ಪ ಬಿಸಾಳಿ, ಬಸು ಜೈನಾಪುರ, ಮಲ್ಲಪ್ಪ ಗೊರವರ, ಮಳಿಯಪ್ಪ ದಾಸರ ಭಾಗವಹಿಸಿದ್ದರು.

## ಯಲ್ಲಮ್ಮ ದೇವಿಗೆ ಉಡಿ: ಶ್ರೀಮಳೆರಾಜೇಂದ್ರಸಾಮಿ ಜಾತ್ರೆ ಸಂಪನ್ನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.12– ಸತತ 11ದಿನಗಳ ಕಾಲ ವಿಜೃಂಭಣೆಯಿಂದ ಜರುಗಿದ ಮುರನಾಳ ಮಳೆರಾಜೇಂದ್ರಸ್ವಾಮಿ ಜಾತ್ರಾ ಮಹೋತ್ಸವ ಪಿರಂಗಿ ಯಲ್ಲಮ್ಮ (ಬಗಲಾಮುಖಿ) ದೇವಿಗೆ ಉಡಿ ತುಂಬವ ಮೂಲಕ ಸಂಪನ್ನಗೊಂಡಿತು.

ಮಂಗಳವಾರ ರಾತ್ರಿ ಮುರನಾಳ ಶ್ರೀಮಠದಿಂದ ಪೂಜ್ಯರಾದ ಮೌನೇಶ್ವರಸ್ವಾಮಿಗಳು ಕುದರೆಯನ್ನೇರಿ ಸಕಲ ವಾದ್ಯ ವೈಭವಗಳೊಂದಿಗೆ ಮೆರವಣಿಗೆ ಮೂಲಕ ಭಕ್ತರೊಡಗೂಡಿ ವೀರಾಪುರದಲ್ಲಿರುವ ಪಿರಂಗಿ ಯಲ್ಲಮ್ಮ(ಬಗಲಾಮುಖಿ)ದೇವಿ ದೇವಸ್ಥಾನಕ್ಕೆ ಆಗಮಿಸಿ, ದೇವಿಗೆ ಶ್ರೀ ಮಠದ ಸೀರೆಯನ್ನು ಉಡಿಸಿ, ಉಡಿ ತುಂಬಿ ವಿಶೇಷ ಪೂಜೆ ಮಹಾಮಂಗಳಾರುತಿ, ನೈವೇದ್ಯ ಸಲ್ಲಿಸಲಾಯಿತು.

ನಂತರ ಶ್ರೀ ಮಠದ ಪೂಜ್ಯರಾದ ವಿಸ್ವನಾಥಸ್ವಾಮಿಗಳು, ಗುರುಲಿಂಗಸ್ವಾಮಿಗಳು, ನಿತ್ಯಾನಂದ ಸ್ವಾಮಿಗಳು, ಗುರುನಾಥಸ್ವಾಮಿಗಳು, ಜಗನ್ನಾಥಸ್ವಾಮಿಗಳು, ಮೌನೇಶ್ವರ ಸ್ವಾಮಿಗಳು, ಮೇಘರಾಜ ಸ್ವಾಮಿಗಳು, ಪುರುಷೋತ್ತಮ ಸ್ವಾಮಿಗಳವರ ಸಾನಿಧ್ಯದಲ್ಲಿ ನಡೆದ ಅನ್ನಸಂತರ್ಪಣೆಯೊಂದಿಗೆ ಜಾತ್ರಾ ಮಹೋತ್ಸವ ಪೂರ್ಣಗೊಂಡಿತು.

ಗ್ರಾಮದ ಮುಖಂಡರಾದ ಹುಚ್ಚಪ್ಪ ಶಿರೂರ, ಸಿದ್ದಪ್ಪ ಮುಚಖಂಡಿ, ಮಂಜುನಾಥ ಬಾರಕೇರ, ಅಶೋಕ ಪತ್ತಾರ, ವಿವೇಕಾನಂದ ಗೂಗಿಹಾಳ, ಸಿದ್ದಪ್ಪ ಮುಚಖಂಡಿ, ಶ್ರೀಶೈಲ ಬಾಳಿಕಾಯಿ, ರಂಗಪ್ಪ ರೊಳ್ಳಿ, ಮಲ್ಲಪ್ಪ ಗೊರವರ, ಮುತ್ತಪ್ಪ ಕರಮುದಿ, ಅಶೋಕ ಕುಡ್ಲೆಪ್ಪನವರ, ದೇವಸ್ಥಾನದ ಪೂಜಾರಿಗಳಾದ ಸಂಗಪ್ಪ ಪೂಜಾರ, ಈರಪ್ಪ ನಾಯ್ಕರ, ವೀರಾಪುರ ಗ್ರಾಮದ ಮುಖಂಡರಾದ ಹುಲಿಗೆಪ್ಪ ಯಲಗನ್ನವರ, ಪರಸಪ್ಪ ಚವಡಿ, ವೀರಪ್ಪ ಕೆಂಚನ್ನವರ, ಕೂಡ್ಲೆಪ್ಪ ಹಡಪದ, ಪರಸು ಖ್ಯಾದಿಗೇರಿ, ನಾಗಪ್ಪ ಕದಾಂಪುರ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ರೇಣುಕರು ವಿಶ್ವ ಬಂಧುತ್ವ ಸಾರಿದವರು ಡಾ.ವೀರಣ್ಣ ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೊಟೆ,ಮಾ.12–ಎಲ್ಲರನ್ನೂ ಸಮಾನತೆಯಿಂದ ಕಾಣುವ ಸಮನ್ವಯ ತತ್ವದ ಮೂಲಕ ಆದಿ ರೇಣುಕಾಚಾರ್ಯರು ಜಗತ್ತಿಗೆ ವಿಶ್ವ ಬಂಧುತ್ವ ಸಾರಿದರು ಆದಿ ಎಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದರು. ನಗರದ ಬಿ.ವಿ.ವಿ.ಸಂಘದ ಬೀಳೂರು ಅಜ್ಜನ ದೇವಸ್ಥಾನದ ಆವರಣದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾ ಘಟಕ, ತಾಲೂಕಾ ಜಂಗಮರ ಕ್ಷೇಮಾಭಿವೃದ್ಧಿ ಸಂಘ ಹಾಗೂ ಅಕ್ಕನ ಬಳಗದ ಸಹಯೋಗದಲ್ಲಿ ಬುಧವಾರ ನಡೆದ ವೀರಶೈವ ಧರ್ಮ ಸಂಸ್ಥಾಪಕರಾದ ಆದಿ ಜಗದ್ಗುರು ರೇಣುಕಾಚಾರ್ಯರ ಜಯಂತಿ ನಿಮಿತ್ಯ ಹಮ್ಮಿಕೊಂಡಿದ್ದ ರೇಣುಕಾಚಾರ್ಯರ ಭಾವಚಿತ್ರದ ಮೆರವಣಿಗೆಯಲ್ಲಿ ಭಾಗವಹಿಸಿ ಅವರು ಮತನಾಡಿದರು. ಮಾನವ ಅವಗುಣಗಳನ್ನು ದಹಿಸಿ ಆತನನ್ನು ಮಹಾದೇವನನ್ನಾಗಿಸುವ, ಜೀವಿ ಶಿವನಾಗುವ, ಮಾನವ ಮಹಾದೇವನಾಗುವ, ಅಂಗ ಲಿಂಗವಾಗುವ ಅಧ್ಭುತ ಸಿದ್ದಾಂತವನ್ನು ಜಗತ್ತಿಗೆ ಬೋಧಿಸಿದವರು ಜಗದ್ದುರು ರೇಣುಕಾಚಾರ್ಯರು ಎಂದು ಹೇಳಿದ ಚರಂತಿಮಠ, ವಿಶ್ವ ಬಂಧುತ್ವ, ಮಾನವಿಯ ಮೌಲ್ಯಗಳು, ಜೀವನ ಸಿದ್ದಾಂತಗಳು, ಸುಖ ಶಾಂತಿಯ ಬದುಕಿಗೆ ಮೂಲ ಸೆಲೆಯಾಗಿವೆ ಎಂದರು. ಮೆರವಣಿಗೆಗೆ ಚಾಲನೆ ನೀಡಿದ ಬಿಲ್‌ಕೆರೂರಿನ ಬಿಲ್ವಾಶ್ರಮದ ಪೂಜ್ಯ ಸಿದ್ದಲಿಂಗ ಶಿವಾಚಾರ್ಯರು ಮಾತನಾಡಿ, ಸಮಾಜದಲ್ಲಿ ಎಲ್ಲರನ್ನು ಸಮನಾಗಿ ಕಾಣುವ ವೀರಶೈವ ಧರ್ಮದಿಂದಲೇ ವಿಶ್ವಕ್ಕೆ ಶಾಂತಿ, ಜನರ ಶಾಂತ ಬದುಕಿಗೆ ರೇಣುಕಾಚಾರ್ಯರ ಚಿಂತನೆಗಳೆ ದಾರಿದೀಪಗಳಾಗಿವೆ ಎಂದರು. ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಜಿ.ಎನ್.ಪಾಟೀಲ, ತಾಲೂಕಾ ಜಂಗಮರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ವೀರೇಶ ಚೌಕಿಮಠ, ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ರಾಜು ಕೆಂಗಾಪುರ, ಬಾಬು ನಿಡಗುಂದಿ, ರಾಮಣ್ಣ ಜುಮನಾಳ, ಚಂದ್ರಶೇಖರ ಶೆಟ್ಟರ, ಬಸವರಾಜ ಹಿರೇಗೌಡರ, ಪ್ರಕಾಶ ರೇವಡಿಗಾರ, ಎ.ಎಸ್.ಪಾವಟೆ, ಶರಣಪ್ಪ ಗುಳೇದ, ಸಂಗಣ್ಣ ಕಲಾದಗಿ, ಬಸವರಾಜ ಹಿರೇಮಠ, ಎಮ್.ಎನ್.ಪುರಾಣಿಕಮಠ, ಮುರಗಯ್ಯ ನಿಂಬಲಗುಂದಿ, ಪ್ರಭಯ್ಯ ಸರಗಣಾಚಾರಿ, ಕುಮಾರ ಹಿರೇಮಠ, ಎಸ್.ಎನ್ ಬೂಸನೂರಮಠ, ಸಂಗಯ್ಯ ಸರಗಣಾಚಾರಿ, ವಿ.ಆರ್.ಹಿರೇಮಠ, ಬಸವರಾಜ ಪರ್ವತಿಮಠ, ಮುತ್ತಣ್ಣ ಬೆಣ್ಣೂರ, ಯಲ್ಲಪ್ಪ ಬೆಂಡಿಗೇರಿ, ಯಲ್ಲಪ್ಪ ನಾರಾಯಣಿ, ಬಸವರಾಜ ಮುಕ್ಕುಪ್ಪಿ ಮೆರವಣಿಗೆಯಲ್ಲಿ ಭಾಗವಹಿಸಿದ್ದರು. ಸಕಲ ವಾದ್ಯ ವೈಭವದೊಂದಿಗೆ ಬೀಳೂರು ಅಜ್ಜನಗುಡಿಯಿಂದ ಪ್ರಾರಂಭವಾದ ರೇಣುಕಾಚಾರ್ಯರ ಭಾವಚಿತ್ರದ ಮೆರವಣಿಗೆ ಕಾಲೇಜು ರಸ್ತೆ, ಬಸವೇಶ್ವರ ವೃತ್ತ, ಮಹಾತ್ಮ ಗಾಂಧಿ ರಸ್ತೆ, ವಲ್ಲಭಬಾಯಿ ಚೌಕ, ಅಡತ ಬಜಾರದಿಂದ ಟೀಕಿನಮಠ ಮುಖಾಂತರ ಮರಳಿ ಬೀಳೂರ ಅಜ್ಜನ ಗುಡಿ ತಲುಪಿತು.

# ಸ್ವಾವಲಂಬಿ ಬದುಕಿಗೆ ಸ್ವಯಂ ಉದ್ಯೋಗ ಕೈಗೊಳ್ಳಿ–ದ್ರಾಕ್ಷಾಯಿಣಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ವಾ.12– ಮಹಿಳೆಯರು ಸ್ವಯಂ ಉದ್ಯೋಗ ಕೈಗೊಂಡು ಸ್ವಾವಲಂಬಿಗಳಾಗಿ ಬದುಕಬೇಕಿರುವುದು ಅಗತ್ಯವಿದೆ ಎಂದು ಉದ್ಯಮಿ ದ್ರಾಕ್ಷಾಯಿಣಿ ಲೋಕಾಪೂರ ಹೇಳಿದ್ದಾರೆ.

ನಗರದ ಬಿ.ವಿ.ವಿ.ಸಂಘದ ಅಕ್ಕಮಹಾದೇವಿ ಮಹಿಳಾ ಕಲಾ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಮಹಿಳಾ ಸಶಕ್ತಿಕರಣ ಘಟಕ ಹಾಗೂ ಉದ್ಯಮಶೀಲ ಘಟಕಗಳ ಅಡಿಯಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ–ಯ ಅಂಗವಾಗಿ ನಡೆದ ಮಹಿಳೆ ಮತ್ತು ವಾಣಿಜ್ಯೋದ್ಯಮ ಎಂಬ ವಿಷಯದ ಮೇಲಿನ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ಮಹಿಳೆಯರು ಸಾಕಷ್ಟು ಪ್ರಗತಿ ಸಾಧಿಸಿದ್ದರೂ ನಿರೀಕ್ಷಿತ ಮಟ್ಟದಲ್ಲಿ ಅದು ಸಾಧ್ಯವಾಗಿಲ್ಲ. ಭಾರತೀಯ ಸನಾತನ ಸಂಸ್ಕೃತಿಯಲ್ಲಿ ಮಹಿಳೆಗೆ ತುಂಬಾ ಗೌರವವಿದೆ. ಅದೇ ರೀತಿ ಸ್ವಯಂ ಉದ್ಯೋಗ ಕೈಗೊಂಡು ತಾನೂ ಸ್ವಾವಲಂಬಿಯಾಗಿ ಬದುಕಬೇಕು ಎನ್ನುವುದನ್ನು ಮನದಟ್ಟು ಮಾಡಿಕೊಳ್ಳಬೇಕಿದೆ ಎಂದು ದ್ರಾಕ್ಷಾಯಿಣಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯೆ ಎಸ್.ಜೆ.ಒಡೆಯರ ಮಾತನಾಡಿ, ಪ್ರತಿ ಕ್ಷೇತ್ರದಲ್ಲಿ ಏಕಾಗ್ರತೆ, ಧೃಡ ನಿಶ್ಚಯದೊಂದಿಗೆ ಕಾರ್ಯನಿರ್ವಹಿಸಿದರೆ ಯಶಸ್ಸು ಸಾಧ್ಯ, ಮಹಿಳೆಯರು ಒಗ್ಗೂಡಿ ಕೆಲಸ ಮಾಡಿದರೆ ಅದರಲ್ಲಿ ಯಶಸ್ಸನ್ನು ಕಾಣುತ್ತೇವೆ. ಉತ್ತಮವಾದ ಕೌಶಲ್ಯಗಳನ್ನು ಬೆಳೆಸಿಕೊಂಡು ಮಹಿಳಾ ಉದ್ಯಮಿಗಳಾಗಿ ಹೊರಹೊಮ್ಮಬೇಕು ಎಂದರು.

ವಿವಿಧ ಸ್ಪರ್ಧೆಗಳಲ್ಲಿ ಜಯಗಳಿಸಿದ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಯವರಿಗೆ ಬಹುಮಾನ ವಿತರಿಸಲಾಯಿತು. ಜ್ಯೋತಿ ಬಿತ್ತಲ್ ಮತ್ತು ಸಂಗಡಿಗರು ಪ್ರಾರ್ಥಿಸಿದರು. ಸ್ಫೂರ್ತಿ ಹಾಗೂ ಸಂಗಡಿಗರು ಮಹಿಳಾ ಗೀತೆ ಹಾಡಿದರು. ಪಿ.ಕೆ.ಚೌಗಲಾ ಸ್ವಾಗತಿಸಿದರು. ವ್ಹಿ.ಸಿ.ತಾಳಿಕೋಟಿ ಪರಿಚಯಿಸಿದರು. ಎಸ್.ಎಸ್. ಮುರಗೋಡ ವಂದಿಸಿದರು.

ಜೆ.ಎಸ್. ಲಾಗಲೋಟಿ ನಿರೂಪಿಸಿದರು.

ಕುರಿಗಾಹಿ ಹತ್ಯೆ ಖಂಡಿಸಿ ಪ್ರತಿಭಟನೆ:

## ಕುರಿಗಾಹಿಗಳ ಹಿತರಕ್ಷಣಾ ಕಾನೂನು ಜಾರಿಗೆ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.12–ಜಿಲ್ಲೆಯ ಬಾದಾಮಿ ತಾಲೂಕಿನ ಉಗಲವಾಟ ಗ್ರಾಮದಲ್ಲಿ ನಡೆದ ಕುರಿಗಾಹಿ ಶರಣಪ್ಪ ಜಮ್ಮನಕಟ್ಟಿ ಹತ್ಯೆ ಖಂಡಿಸಿ ಬಾಗಲಕೋಟೆಯಲ್ಲಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ರಾಜ್ಯ ಕುರಿಗಾರರು ಮತ್ತು ಪಶುಪಾಲಕರ ಹಿತರಕ್ಷಣಾ ಸಮಿತಿಯ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಶರಣಪ್ಪನನ್ನು ಹತ್ಯೆ ಮಾಡಿರುವ ಕುರಿಗಳ್ಳ ಕೊಲೆಗಾರರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದರಲ್ಲದೇ, ಕುರಿಗಾಹಿಗಳ ಮೇಲಾಗುವ ದೌರ್ಜನ್ಯ ತಡೆಗಟ್ಟುವ ಸಲುವಾಗಿ ಕುರಿಗಾಹಿಗಳ ಹಿತರಕ್ಷಣಾ ಕಾಯ್ದೆ ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2023–24 ರ ಬಜೆಟ್‌ನಲ್ಲಿ ಕುರಿಗಾಹಿಗಳ ರಕ್ಷಣೆಗೆ ಕಾಯ್ದೆ ಜಾರಿಗೆ ತರುವುದಾಗಿ ಹೇಳಿದ್ದರೂ ಈತನಕ ಅದು ಸಾಧ್ಯವಾಗಿಲ್ಲ. ಈಗಲಾದರೂ ಸಿದ್ದರಾಮಯ್ಯನವರು ಕಾಯ್ದೆ ಜಾರಿಗೊಳಿಸಲು ಮುಂದಾಗಬೇಕು ಎಂದು ಒತ್ತಾಯಿಸಿದ ಪ್ರತಿಭಟನಾಕಾರರು, ಕೊಲೆಗೀಡಾದ ಶರಣಪ್ಪ ಜಮ್ಮನಕಟ್ಟಿ ಕುಟುಂಬಕ್ಕೆ ಸರಕಾರ ಆರ್ಥಿಕ ನೆರವು ನೀಡಬೇಕು ಎಂದರು.

ನಂತರ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬರೆದ ಮನವಿ ಪತ್ರವನ್ನು ನೀಡಿದರು. ಪ್ರತಿಭಟನೆಯಲ್ಲಿ ಸಿದ್ದಪ್ಪ ಬಳಗಾನೂರ, ಪರಶುರಾಮ ಮಂಟೂರ, ಡಿ.ಬಿ.ಸಿದ್ದಾಪೂರ, ಮುತ್ತಪ್ಪ ಕೋಮಾರ, ವೀರಣ್ಣ ಹಳೇಗೌಡರ, ಮಲ್ಲು ವಡವಡಗಿ, ಶ್ರೀನಿವಾಸ ಬಳ್ಳಾರಿ, ರಾಮು ರಾಕುಂಪಿ, ಯಲ್ಲಪ್ಪ ಹೆಗಡೆ, ರಾಘು ಯಾದಗಿರಿ ಸೇರಿ ಅನೇಕ ಮುಖಂಡರು ಪಾಲ್ಗೊಂಡಿದ್ದರು.

## ಎಲ್ಲ ಕ್ಷೇತ್ರಗಳಲ್ಲೂ ಮಹಿಳೆಯರಿಗೆ ಅವಕಾಶ ಸಿಗಲಿ: ನಾರಾಯಣಸಾ ಭಾಂಡಗೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೊಟೆ,ಮಾ.12–ಎಲ್ಲ ಕ್ಷೇತ್ರಗಳಲ್ಲೂ ಇಂದು ಮಹಿಳೆ ಮುಂಚೂಣಿಯಲ್ಲಿದ್ದು ಇನ್ನೂ ಹೆಚ್ಚಿನ ಅವಕಾಶ ಸಿಕ್ಕು ಮಹಿಳೆಯರನ್ನು ಗೌರವಿಸುವ ಕಾರ್ಯವಾಗಬೇಕು ಎಂದು ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಹೇಳಿದರು.

ನಗರದ ಬಿ.ವಿ.ವಿ.ಸಂಘದ ಮಿನಿ ಸಭಾಭವನದಲ್ಲಿ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದಿಂದ ಹಮ್ಮಿಕೊಂಡ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಭಾರತದಲ್ಲಿ ಮಹಿಳೆಯರೇ ಅಗ್ರಗಣ್ಯ, ದೇಶವನ್ನು ತಾಯಿಯೆಂದು ಕರೆದ ಭೂಮಿ ನಮ್ಮದು. ಎಲ್ಲಿ ನಾರಿಯರಿಗೆ ಗೌರವ ಸಿಗುತ್ತದೆ ಅಲ್ಲಿ ದೇವತೆಗಳು ಇರುತ್ತಾರೆ ಎಂದು ನಂಬಿದವರು ನಾವು. ದೇಶದಲ್ಲಿ ಇಂದು ಎಲ್ಲಕ್ಷೇತ್ರಗಳಲ್ಲಿ ಮಹಿಳೆಯರು ಮೂಂಚೂಣಿಯಲ್ಲಿದ್ದಾರೆ, ಅವರಿಗೆ ಎಲ್ಲ ಕ್ಷೇತ್ರಗಳಲ್ಲೂ ಇನ್ನು ಹೆಚ್ಚಿನ ಅವಕಾಶಗಳು ದೊರೆಯಬೇಕು ಎಂದು ಭಾಂಡಗೆ ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಮಾತನಾಡಿ, ಪ್ರಧಾನ ಮಂತ್ರಿ ನರೇಂದ್ರ ಮೋದಿಜಿಯವರು ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗೆ ಅನೇಕ ಯೋಜನೆಗಳ ಜೊತೆ ಅವರಿಗೆ ಶೇ.33 ಮಹಿಳಾ ರಿಜರ್ವೇಶನ ತರುವ ಮೂಲಕ ಗೌರವ ನೀಡಿದ್ದಾರೆ. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಭಾಗ್ಯಲಕ್ಷ್ಮೀ ಯೋಜನೆ ಮೂಲಕ ಹುಟ್ಟುವ ಹೆಣ್ಣು ಮಗುವಿಗೆ ಭದ್ರತೆ ಒದಗಿಸಿದ್ದರು ಎಂದರು.

ಅಧ್ಯಕ್ಷತೆಯನ್ನು ಬಿಜೆಪಿ ನಗರ ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷೆ ಶಶಿಕಲಾ ಮಜ್ಜಗಿ ವಹಿಸಿದ್ದರು. ಗ್ರಾಮೀಣ ಮಂಡಲ ಮಹಿಳಾ ಮೋರ್ಚಾ ಆದ್ಯಕ್ಷೆ ಸವಿತಾ ಪಾತ್ರೋಟಿ ಅತಿಥಿಗಳಾಗಿದ್ದರು. ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಗೌರಮ್ಮ ಸಂಕೀನಮಠ, ನಗರಸಭೆ ಮಹಿಳಾ ಪೌರಕಾರ್ಮಿಕರನ್ನು ಹಾಗೂ ಭಾಗ್ಯಲಕ್ಷ್ಮೀ ಯೋಜನೆ ಫಲಾನುಭವಿಗಳಿಗೆ ಸನ್ಮಾನಿಸಲಾಯಿತು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ್, ಜಿಲ್ಲಾ ಉಪಾಧ್ಯಕ್ಷೆ ಭಾಗೀರತಿ ಪಾಟೀಲ, ಸುಜಾತಾ ಶಿಂಧೆ, ಶಿವಲೀಲಾ ಪಟ್ಟಣಶೆಟ್ಟಿ, ಪಾರ್ವತಿ ಹುಗ್ಗಿ, ಡಾ.ರೇಖಾ ಕಲಬುರಗಿ, ಜಯಶ್ರೀ ಏಕಭೋಟೆ, ಲಕ್ಷ್ಮೀ ಸಿಂತ್ರೆ, ಜ್ಯೋತಿ ಭಜಂತ್ರಿ, ಸ್ಮಿತಾ ಪವಾರ, ಭುವನೇಶ್ವರಿ ಕುಪ್ಪಸ್ತ, ಭಾಗ್ಯಶ್ರೀ ಹಂಡಿ, ಅನಿತಾ ಸರೋದೆ, ಲಕ್ಷ್ಮೀ ಮಡಿವಾಳರ, ನಾಗರತ್ನಾ ಒಣಕಲಕುಂಟಿ, ಸುಶಿಲಾ ಅಣ್ಣಿಗೇರಿ, ಸವಿತಾ ಏಳೆಮ್ಮಿ, ಶಿವಲೀಲಾ ಸಂಬಣ್ಣವರ, ಜ್ಯೋತಿ ಚವ್ಹಾಣ ಭಾಗವಹಿಸಿದ್ದರು.

# ಸಹಕಾರ ಭಾರತಿ ಜಿಲ್ಲಾಧ್ಯಕ್ಷರಾಗಿ ಡಾ.ದಡ್ಡೇನವರ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ವಾ.12– ಸಂಘ ಪರಿವಾರದ ಅಂಗ ಸಂಸ್ಥೆ ಸಹಕಾರ ಭಾರತಿ ಸಂಘಟನೆಯ ಜಿಲ್ಲಾಧ್ಯಕ್ಷರಾಗಿ ನೇಕಾರ ಮುಖಂಡ, ಹಿರಿಯ ವೈದ್ಯ ಡಾ.ಎಂ.ಎಸ್.ದಡ್ಡೇನವರ ಅವರನ್ನು ಆಯ್ಕೆ ಮಾಡಲಾಗಿದೆ.

ಡಾ.ದಡ್ಡೇನವರ ಸಹಕಾರಿ ಕ್ಷೇತ್ರದಲ್ಲಿ ಅನುಭವಿಗಳಾಗಿದ್ದು, ಕ್ಷೇತ್ರದ ಬೆಳವಣಿಗೆ ದೃಷ್ಟಿಯಿಂದ ಅವರನ್ನು ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ.

ನೂತನವಾಗಿ ಆಯ್ಕೆಯಾದ ಡಾ.ಎಂ.ಎಸ್.ದಡ್ಡೇನವರ ಅವರನ್ನು ಸಹಕಾರ ಭಾರತಿ ರಾಜ್ಯ ಉಪಾಧ್ಯಕ್ಷ ಜಿ.ಎನ್.ಪಾಟೀಲ, ಮುಖಂಡರಾದ ರಂಗನಗೌಡ ದಂಡನ್ನವರ, ಜಯಂತ ಕುರಂದವಾಡ, ರಾಜು ಶಿಂತ್ರೆ, ವೆಂಕಣ್ಣ ಹಲಗಲಿ, ಅಶೋಕ ಜಿಗಳೂರ, ಶೈಲಜಾ ಸಂಗಳದ ಹಾಗೂ ಇತರರು ಸನ್ಮಾನಿಸಿದರು.

ಸಹಕಾರ ಭಾರತಿ ಸಂಘಟನೆಯ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿರುವ ದಡ್ಡೇನವರ ಅವರನ್ನು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ, ಬಿಜೆಪಿ ಜಿಲ್ಲಾಧ್ಯಕ್ಷ ಎಸ್.ಟಿ.ಪಾಟೀಲ ಅಭಿನಂದಿಸಿದ್ದಾರೆ.

## ಮಕ್ಕಳ ಆಶಯದಂತೆ ಶಿಕ್ಷಕರು ಕೆಲಸ ನಿರ್ವಹಿಸಿ ಕ್ಷೇತ್ರ ಶಿಕ್ಷಣಾಧಿಕಾರಿ ಸಿದ್ಧವೀರಯ್ಯಾ ರುದ್ನೂರ್.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :–ಹುಲಸೂರು :– ಮಾ 12 ನಮ್ಮ ಸಮಯದಲ್ಲಿ ಶಿಕ್ಷಕರು ಹೇಗೆ ಬೋಧಿಸುತ್ತಿದ್ದರು ಹಾಗೆ ಮಕ್ಕಳು ಕಲಿಯುತ್ತಿದ್ದರು, ಆದರೆ ಇಂದು ಮಕ್ಕಳ ಹೇಗೆ ಕಲಿಯಬೇಕು ಎಂದು ಆಶಿಸುತ್ತಾರೋ ಹಾಗೆ ಬೋಧಿಸುವುದು ಇಂದಿನ ಶಿಕ್ಷಕರ ಆದ್ಯ ಕರ್ತವ್ಯವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಿದ್ದವೀರಯ್ಯ ರುದ್ನೂರ್ ಹೇಳಿದರು. ತಾಲೂಕಿನ ಬೇಲೂರು ಗ್ರಾಮದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ

ಶಿಕ್ಷಕರು ವೈಯಕ್ತಿಕವಾಗಿ ಮಕ್ಕಳ ಬುದ್ಧಿ ಮಟ್ಟ ಪರಿಶೀಲನೆ ನಡೆಸಿ, ಯಾವ ಮಕ್ಕಳಿಗೆ ಯಾವ ಚಟುವಟಿಕೆಯನ್ನು ಅಳವಡಿಸಿಕೊಂಡು ಬೋಧನೆ ಮಾಡಿದಾಗ ಅವರ ಕಲಿಕಾ ಮಟ್ಟ ಸುಧಾರಣೆ ಆಗುತ್ತದೆ ಎಂಬುದು ಮೊದಲು ಶಿಕ್ಷಕರಾದ ನಾವುಗಳು ತಿಳಿದುಕೊಂಡು ಮಕ್ಕಳಿಗೆ ಕಲಿಸುವುದು ಒಳ್ಳೆಯದು ಎಂದು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ಅಧ್ಯಕ್ಷರಾದ ನಾಗರಾಜ ಹಾವಣ್ಣಾ ಪ್ರಾಸ್ತಾವಿಕವಾಗಿ ಮಾತನಾಡಿ, ಶಾಲೆಗೆ ದಾಖಲಾದ ಮಗು ಪ್ರತಿನಿತ್ಯ ಹಾಜರಾಗುವಂತೆ ನೋಡಿಕೊಂಡು ಆ ಮಕ್ಕಳಿಗೆ ಕಲಿಕಾ ಕನಿಷ್ಠ ಮಟ್ಟ ಬರುವಂತೆ ಮಾಡಲು ಶೈಕ್ಷಣಿಕ ಆರಂಭದ ದಿನದಿಂದಲೇ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರಯತ್ನಿಸುತ್ತಿದ್ದಾರೆ. ಎಫ್.ಎಲ್.ಎನ್. ಆಧಾರಿತವಾಗಿ ಮಕ್ಕಳನ್ನು ವಿಂಗಡಿಸಿ, ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಮುಂದುವರಿಯುವಂತೆ ಮಾಡಲು ಶಿಕ್ಷಕರಾದ ನಾವು ಪ್ರಯತ್ನಿಸೋಣ. ಅಂತಹ ಮಕ್ಕಳಿಗಾಗೆ ಇಂದು ಕಲಿಕಾ ಹಬ್ಬವನ್ನು ಆಯೋಜಿಸಿ ಆ ಮಕ್ಕಳ ನಡುವೆ ಸ್ಪರ್ಧೆಯನ್ನು ನಡೆಸಿ ಆ ಮಕ್ಕಳ ಕಲಿಕೆಗೆ ಸಹಕಾರ ನೀಡುವುದೇ ಈ ಕಲಿಕಾ ಹಬ್ಬದ ಉದ್ದೇಶವಾಗಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ರಾಜಪ್ಪ ನೊಂದಡೆ ಮಾತನಾಡಿ, ಶಿಕ್ಷಕರಾದ ನಾವಿಂದು ಸರ್ಕಾರಿ ಶಾಲೆಗೆ ಆಗಮಿಸುವ ಮಕ್ಕಳ ಕಲಿಕೆಗೆ ಶ್ರಮವಹಿಸೋಣ ಎಂದು ಹೇಳಿದರು.

ಗ್ರಾಮ ಪಂಚಾಯತ ಅಧ್ಯಕ್ಷರಾದ ಕರುಣಾಬಾಯಿ ಪರೆಪ್ಪಾ, ಎಸ್ಡಿಎಂಸಿ ಅಧ್ಯಕ್ಷರಾದ ಉದಯಕುಮಾರ ರಾಜೋಳೆ, ಸದಸ್ಯರಾದ ಬಾಲಾಜಿ ಸಂಕಣ್ಣಾ, ಸಂಗಪ್ಪಾ ಸಂಕಣ್ಣಾ, ಸುನೀಲ ಪರೆಪ್ಪಾ, ಅನೀಲ ಪರೆಪ್ಪಾ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಬಸವಕಲ್ಯಾಣ ಅಧ್ಯಕ್ಷರಾದ ಸಂತೋಷ ಅಕ್ಕಣ್ಣಾ, ಜಿಲ್ಲಾ ಉಪಾಧ್ಯಕ್ಷರಾದ ರೋಹಿದಾಸ ಮಾಲೆ, ಕರ್ನಾಟಕ ರಾಜ್ಯ ಎಸ್ಸಿ ಎಸ್ಟಿ ಪ್ರಾಥಮಿಕ ಶಾಲಾ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಡಾ.ಧರ್ಮೇಂದ್ರ ಬೋಸ್ಲೆ, ಶಿಕ್ಷಣ ಸಂಯೋಜಕರಾದ ಶಿವರಾಜ ಕನಕಟ್ಟೆ, ಸಿಆರ್‌ಪಿಗಳಾದ ವೆಂಕಟ್ ಕುಮಾರ ಕುಂಬಾರ, ಮಾರುತಿ ಬೆಂದ್ರೆ, ಶೆಂಕ್ರಯ್ಯಾ ಸ್ವಾಮಿ, ಮುಖ್ಯ ಗುರುಗಳಾದ ದಿಗರಾಜ ವಕಾರೆ, ಶಿಕ್ಷಕರಾದ ಈಶ್ವರ ಕಣಜೆ, ಕೃಷ್ಣ ಶಿಂಧೆ ಸಾವಿತ್ರಿಬಾಯಿ ಫುಲೆ ಶಿಕ್ಷಕಿಯರ ಸಂಘದ ಅಧ್ಯಕ್ಷರಾದ ವರ್ಷಾ ಪಂಚಾಳ ಬೇಲೂರು ಕ್ಲಸ್ಟರ್ ನ ಎಲ್ಲಾ ಮುಖ್ಯ ಗುರುಗಳು, ಶಿಕ್ಷಕರು ಮಕ್ಕಳು ಉಪಸ್ಥಿತರಿದ್ದರು.

ರಾಜ್ಯ ಪರಿಷತ್ ಸದಸ್ಯರಾದ ಭೀಮಶಂಕರ ಆದೇಪ್ಪಾ ನಿರೂಪಿಸಿ ವಂದಿಸಿದರು.

# ಕಲಾ ತಂಡಗಳ ಮೆರುಗು, ಹೆಜ್ಜೆ ಹಾಕಿದ ಗಣ್ಯರು ರೇಣುಕಾಚಾರ್ಯರ ಭಾವಚಿತ್ರದ ಭವ್ಯ ಮೆರವಣಿಗೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 12 :ಜಗದ್ಗುರು ರೇಣುಕಾಚಾರ್ಯರ ಜಯಂತಿಯುಗಮಾನೋತ್ಸವ ಅಂಗವಾಗಿ ನಗರದಲ್ಲಿ ಬುಧವಾರ ಪುಷ್ಪಾಲಂಕೃತ ರಥದಲ್ಲಿ ರೇಣುಕಾಚಾರ್ಯರ ಭಾವಚಿತ್ರ ಹಾಗೂ ಸಿದ್ಧಾಂತ ಶಿಖಾಮಣಿ ಗ್ರಂಥದ ಭವ್ಯ ಮೆರವಣಿಗೆ ನಡೆಯಿತು.

ಡೊಳ್ಳು ಕುಣಿತ, ವೀರಗಾಸೆ, ನಗಾರಿ, ಪುರವಂತಿಕೆ, ಕೋಲಾಟ ಮತ್ತಿತರ ಕಲಾ ತಂಡಗಳು ಮೆರವಣಿಗೆಯ ವೈಭವ ಹೆಚ್ಚಿಸಿದವು.

ಮೆರವಣಿಗೆಯಲ್ಲಿ ಪಾಲ್ಗೊಂಡವರು ತಲೆ ಮೇಲೆ ಪೇಟ, ಭಗವಾ ಟೊಪ್ಪಿಗೆ, ಕೊರಳಲ್ಲಿ ಶಲ್ಯ ಧರಿಸಿ ಗಮನ ಸೆಳೆದರು. ಧರ್ಮ ಧ್ವಜಗಳು ರಾರಾಜಿಸಿದವು. ಯುವಕರು ಕುಣಿದು ಕುಪ್ಪಳಿಸಿದರು. ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹಾಗೂ ಇತರ ಗಣ್ಯರು ಕೂಡ ಹೆಜ್ಜೆ ಹಾಕಿ ಪುಳಕಿತಗೊಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಿಂದ ಆರಂಭಗೊಂಡ ಮೆರವಣಿಗೆ ತಹಶೀಲ್ದಾರ್ ಕಚೇರಿ, ಮಹಾವೀರ ವೃತ್ತ, ಬಸವೇಶ್ವರ ವೃತ್ತ, ಭಗತ್ ಸಿಂಗ್ ವೃತ್ತ, ಅಂಬೇಡ್ಕರ್ ವೃತ್ತ, ಜನರಲ್ ಕಾರ್ಯಪ್ಪ ವೃತ್ತ, ರೋಟರಿ ಕನ್ನಡಾಂಬೆ ವೃತ್ತದ ಮೂಲಕ ಹಾಯ್ದು ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರಕ್ಕೆ ತಲುಪಿ ಸಮಾರೋಪಗೊಂಡಿತು.

ಜೈ ಭಾರತ ಮಾತಾ ಸೇವಾ ಸಮಿತಿಯ ರಾಷ್ಟ್ರೀಯ



ಅಧ್ಯಕ್ಷ ಹವಾ ಮಲ್ಲಿನಾಥ ಮಹಾರಾಜ ಮೆರವಣಿಗೆಗೆ ಚಾಲನೆ ನೀಡಿದರು. ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಡಾ. ರಾಜಶೇಖರ ಶಿವಾಚಾರ್ಯ, ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ, ರೇಣುಕಾಚಾರ್ಯ ಜಯಂತಿ ಆಚರಣೆ ಸ್ವಾಗತ ಸಮಿತಿಯ ಕಾರ್ಯಾಧ್ಯಕ್ಷ ಸಿದ್ರಾಮಯ್ಯ ಸ್ವಾಮಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ವೈಜಿನಾಥ ಕಮಠಾಣೆ, ಭಾರತೀಯ ಬಸವ ಬಳಗದ



ರಾಜ್ಯ ಅಧ್ಯಕ್ಷ ಬಾಬುವಾಲಿ, ರಾಷ್ಟ್ರೀಯ ಬಸವ ದಳದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಪಾಟೀಲ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಬಾಬುರಾವ್ ಕಾರಬಾರಿ, ಮಾಜಿ ಉಪಾಧ್ಯಕ್ಷ ಕುಶಾಲ್ ಯಾಬಾ, ಮುಖಂಡರಾದ ಶಿವಶರಣಪ್ಪ ವಾಲಿ, ರವೀಂದ್ರ ಸ್ವಾಮಿ, ರಾಮಕೃಷ್ಣ ಸಾಳೆ, ಈಶ್ವರಸಿಂಗ್ ಠಾಕೂರ್, ಶಕುಂತಲಾ ಬೆಲ್ದಾಳೆ, ತರುಣ್ ಎಸ್. ನಾಗಮಾರಪಳ್ಳಿ, ಓಂಪ್ರಕಾಶ್ ರೊಟ್ಟೆ, ವರದಯ್ಯ ಸ್ವಾಮಿ, ಶಿವಕುಮಾರ ಸ್ವಾಮಿ ಬಂಬಳಗಿ, ಗುರುನಾಥ ಜ್ಯಾಂತಿಕರ್, ಬಾಬುರಾವ್ ಮಲ್ಕಾಪುರೆ, ಶಶಿಧರ ಹೊಸಳ್ಳಿ, ದಿಗಂಬರ್ ಮಡಿವಾಳ, ಚಂದ್ರಶೇಖರ ಗಾದಾ, ಮಹೇಶ್ವರ ಸ್ವಾಮಿ, ಅಯ್ಯಪ್ಪ ರೆಡ್ಡಿ, ಶ್ರೀಕಾಂತ ಸ್ವಾಮಿ, ರೂಪಾ ಸ್ವಾಮಿ, ರೇವಣಸಿದ್ದಯ್ಯ ಸ್ವಾಮಿ, ಕಾರ್ತಿಕ ಮಠಪತಿ, ಮಹಾಂತಯ್ಯ ಸ್ವಾಮಿ, ಮಲ್ಲಿಕಾರ್ಜುನ ಸ್ವಾಮಿ, ದಯಾನಂದ ಸ್ವಾಮಿ, ಪಪ್ಪು ಪಾಟೀಲ ಖಾನಾಪುರ, ಅಂಬರೀಷ್ ಸ್ವಾಮಿ ಪ್ರತಾಪನಗರ, ಚಾಮುಂಡೇಶ್ವರಿ ಸ್ವಾಮಿ, ಸಂಜುಕುಮಾರ ಸ್ವಾಮಿ ಕಮಠಾಣ, ಸಮಾಜದ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಅಧಿಕಾರಿಗಳು ಪಾಲ್ಗೊಂಡಿದ್ದರು.

# ತಾ.ಪಂ. ವತಿಯಿಂದ ಸಾಮಾಜಿಕ ಭದ್ರತಾ ವಿಮೆ ಕುರಿತು ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.12:ತಾಲೂಕಿನ ಕಮಲನಗರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ ರವರ ಆದೇಶದ ಮೇರೆಗೆ ಸಾಮಾಜಿಕ ಭದ್ರತಾ ಯೋಜನೆಯ ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ ಪ್ರಧಾನ್ ಮಂತ್ರಿ ಸುರಕ್ಷಾ ಭೀಮಾ ಯೋಜನೆ ಮತ್ತು ಅಟಲ್ ಪೆನ್ಷನ್ ಯೋಜನೆ ವಿಮೆ ಕುರಿತು ಅಭಿಯಾನ ಕಾರ್ಯಕ್ರಮ ನಡೆಯಿತು. ಸಹಾಯಕ ನಿರ್ದೇಶಕರಾದ ಹಣಮಂತರಾಯ ಕೌಟಗೆ ಮಾತನಾಡಿ ಗ್ರಾಮದ ಜನರೆಲ್ಲರು ಈ ಮೂರು ವಿಮೆಗಳ ಉಪಯೋಗವನ್ನು ಪಡೆದುಕೊಳ್ಳಿ ಕಷ್ಟದ ಸಮಯದಲ್ಲಿ ಯಾರು ಸಹಾಯಕ್ಕೆ ಬರುವುದಿಲ್ಲ. ನಿಮ್ಮ ಮನೆ ಬಾಗಿಲಿಗೆ ಸರ್ಕಾರದ ಯೋಜನೆಗಳನ್ನು ಬರುತ್ತಿವೆ ಇದರಿಂದ ನಿಮ್ಮ ಕುಟುಂಬದ ಒಳಿತಿಗಾಗಿ ಅನುಕೂಲವಾಗಿದೆ.



ಹಾಗೂ ನರೇಗಾ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುವ ಕೂಲಿಕಾರರಿಗೆ ಈ ವಿಮೆಗಳನ್ನು ಮಾಡಿಸಿದ್ದೇವೆ. ಇನ್ನು ಉಳಿದವರು ಕೂಡ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಿ ಜೊತೆಗೆ ನಿಮ್ಮ ಅಕ್ಕ ಪಕ್ಕದ ಮನೆಯವರಿಗೂ ಈ ವಿಮೆಯ ಸದ್ಬಳಕೆ ಮಾಡಿಕೊಳ್ಳುವಂತೆ ಮನವೊಲಿಸಿ ಎಂದರು. ಸರ್ಕಾರಿ ನೌಕರರಿಗೆ ಪೆನ್ಷನ್ ಬರುತ್ತಿಲ್ಲ. ಈ ಅಟಲ್ ಪೆನ್ಷನ್ ಮಾಡಿಕೊಳ್ಳುವುದರಿಂದ ಕಷ್ಟದ ಸಮಯಕ್ಕೆ ಕೆಲಸಕ್ಕೆ ಬರುತ್ತದೆ. 60 ವರ್ಷ ಆದ ಮೇಲೆ ಕೆಲಸ ಮಾಡಲು ಶಕ್ತಿ ಇರುವುದಿಲ್ಲ ಆ ಸಮಯದಲ್ಲಿ ನಿಮ್ಮ ಸಹಾಯಕ್ಕೆ ಬರುವುದೇ ಇದು ಎಂದರು. ಜೊತೆಗೆ ಆರೋಗ್ಯ ವಿಮೆಗಳನ್ನು ಕೂಡ ಮಾಡಿಕೊಳ್ಳಲು ತಿಳಿಸಿದರು. ಆಶಾ ಅಂಗನವಾಡಿ ಕಾರ್ಯಕರ್ತೆಯರಿಗೆ ಮನೆ ಮನೆಗೆ ಭೇಟಿ ನೀಡಿದಾಗ ಈ ಎಲ್ಲಾ ಯೋಜನೆಗಳ ಬಗ್ಗೆ ಜನರಿಗೆ ಮಾಹಿತಿ ತಲುಪಿಸಿ, ಅವರ ಕುಟುಂಬಕ್ಕೆ ಅನುಕೂಲವಾಗುವಂತೆ ಮಾಡಿರಿ ಎಂದರು. ಇಂದು ಒಟ್ಟು 263 ವಿಮೆಗಳನ್ನು ಮಾಡಲಾಗಿದೆ. ಇನ್ನು ಯಾರು ಮಾಡಿಕೊಂಡಿಲ್ಲ ಅವರು ವಿಮೆ ಮಾಡಿಸಿಕೊಳ್ಳುವಂತೆ ಸಲಹೆ ನೀಡಿದರು. ಎಸ್ ಬಿ ಐ ಬ್ಯಾಂಕ್ ನ ವ್ಯವಸ್ಥಾಪಕರಾದ ಪ್ರೇಮ ಕುಮಾರ ಅವರು ಮಾತನಾಡಿ ಕೇಂದ್ರ ಸರ್ಕಾರದ ಯೋಜನೆಯಾದ ಸಾಮಾಜಿಕ ಭದ್ರತೆ ಯೋಜನೆಗಳಾದ ಪ್ರಧಾನಮಂತ್ರಿ ಜೀವನ ಜ್ಯೋತಿ ಭಿಮಾ ಯೋಜನೆ ಮತ್ತು ಪ್ರಧಾನ ಮಂತ್ರಿ ಸುರಕ್ಷಾ ಭಿಮಾ ಯೋಜನೆ ಹಾಗೂ ಅಟಲ್ ಪೆನ್ಷನ್ ಯೋಜನೆಗಳನ್ನು ಇದೆ. 18 ವರ್ಷದಿಂದ 50 ವರ್ಷದವರೆಗೆ ಕಒ-ಎಎಃಜ ಯೋಜನೆಯನ್ನು ಮಾಡಿಕೊಳ್ಳಲು ಅರ್ಹರಿರುತ್ತಾರೆ. ಇವರು ವರ್ಷಕ್ಕೆ 436 ರೂ. ಮತ್ತು 18 ವರ್ಷದಿಂದ 70 ವಯಸ್ಸಿನವರು PMSBY ಯೋಜನೆ ಮಾಡಿಕೊಳ್ಳಲು ಅರ್ಹರಿರುತ್ತಾರೆ ಇದಕ್ಕೆ ವರ್ಷಕ್ಕೆ 20 ರೂ. ಕಟ್ಟಬೇಕು. ಹಾಗೂ ಅಟಲ್ ಪಿಂಚಣಿ ಯೋಜನೆಗೆ 18 ವರ್ಷದಿಂದ 40 ವರ್ಷ ವಯಸ್ಸಿನ ಎಲ್ಲಾ ಭಾರತೀಯರು ಈ ಯೋಜನೆಯ ಸೌಲಭ್ಯ ಪಡೆಯಬಹುದು. ಯೋಜನೆಯ ಅನ್ವಯ ಪ್ರತಿ ತಿಂಗಳು 1000 ದಿಂದ 5000 ರವರೆಗೆ ಪಿಂಚಣಿ ಪಡೆದುಕೊಳ್ಳಲು ಸಾಧ್ಯವಿದೆ ಎಂದರು. ಸದರಿ ಅಭಿಯಾನ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ರಾಜಕುಮಾರ ತಂಬಾಕೆ, ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಕವಿತಾ ಬಿರಾದಾರ, ಐಇಸಿ ಸಂಯೋಜಕರಾದ ಸವಿತಾ ನಾಗೇಶ, ಗ್ರಾಮದ ಹಿರಿಯರು ಮತ್ತು ಒಕ್ಕೂಟದ ಸ್ವಸಹಾಯ ಸಂಘದ ಸದಸ್ಯರಾದ ಸ್ವಪ್ನಾ, ಪ್ರಣಿತಾ, ರೇಣುಕಾ, ಎಂಬಿಕೆ, ಪಶು ಸಖಿ, ಕೃಷಿ ಸಖಿ, ಆಶಾ ಕಾರ್ಯಕರ್ತರು, ಬ್ಯಾಂಕ್ ಅಧಿಕಾರಗಳು ಇದ್ದರು.

# ಇ-ಜಮಾಬಂದಿ ತಂತ್ರಾಂಶ ವರ್ಷದೊಳಗೆ ಪೂರ್ಣ: ಕೃಷ್ಣ ಬೈರೇಗೌಡ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ. 12 :ಗ್ರಾಮ ಹಾಗೂ ತಾಲ್ಲೂಕು ಮಟ್ಟದ ಭೂದಾಖಲೆಗಳನ್ನು ತಾಳೆಮಾಡಿ ಕ್ರಮಬದ್ಧಗೊಳಿಸುವ ವಿಧಾನವಾದ ಜಮಾಬಂದಿ ಪ್ರಕ್ರಿಯೆಯನ್ನು ವೇಗವಾಗಿ ನಿರ್ವಹಿಸಲು ಇ-ಜಮಾಬಂದಿ ತಂತ್ರಾಂಶವನ್ನು ಒಂದು ವರ್ಷದೊಳಗೆ ಪೂರ್ಣಗೊಳಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ತಿಳಿಸಿದರು.



ಇಂದು ವಿಧಾನಪರಿಷತನಲ್ಲಿ ಸದಸ್ಯ ಜವರಾಯಿಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇತ್ತೀಚೆಗೆ ಮಂಡಿಸಿದ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದಾರೆ. ಇದರಿಂದ ಗ್ರಾಮ ಲೆಕ್ಕಿಗರ ಮೇಲಿನ ಕಾರ್ಯದ ಒತ್ತಡ ಕಡಿಮೆ ಆಗಲಿದ್ದು, ಜಮಾಬಂದಿ ಪ್ರಕ್ರಿಯೆಗೆ ವೇಗ ದೊರೆಯಲಿದೆ. ಸದ್ಯಕ್ಕೆ ಇದು ಅರ್ಧ ಪೂರ್ಣಗೊಂಡಿದ್ದು, ಒಂದು ವರ್ಷದೊಳಗೆ ಸಂಪೂರ್ಣವಾಗಲಿದೆ ಎಂದು ತಿಳಿಸಿದರು.

ಜಮಾಬಂದಿ ಒಂದು ಸರಕಾರಿ ಪ್ರಕ್ರಿಯೆಯಾಗಿದ್ದು, ಇದನ್ನು ಪ್ರತಿ ವರ್ಷ ಭೂಮಿಯ ದಾಖಲೆಗಳ ಪರಿಶೀಲನೆಗಾಗಿ ಹಮ್ಮಿಕೊಳ್ಳಲಾಗುತ್ತದೆ. ಇದನ್ನು ಸಾಮಾನ್ಯವಾಗಿ ತಹಶೀಲ್ದಾರ್ ಮೇಲ್ವಿಚಾರಣೆಯಡಿ ಗ್ರಾಮ ಲೆಕ್ಕಿಗರು ಮತ್ತು ಇತರ ಅಧಿಕಾರಿಗಳು ನಡೆಸುತ್ತಾರೆ. ಇದು ಜನರಿಂದ ನಡೆಯುವ ಗ್ರಾಮ ಪಂಚಾಯತಿಯ ವಾರ್ಷಿಕ ಆದಾಯ ಮತ್ತು ವೆಚ್ಚಗಳ ಭೌತಿಕ ಮತ್ತು ಆರ್ಥಿಕ ಲೆಕ್ಕ ಪರಿಶೀಲನೆಯಾಗಿದೆ. ಗ್ರಾಮ ಪಂಚಾಯತಿಯು ನಿರ್ವಹಿಸುವ ಲೆಕ್ಕಗಳು, ರಿಜಿಸ್ಟರ್‌ಗಳು, ರಿಜಿಸ್ಟರ್‌ಗಳ ದಾಖಲೆಗಳು ಹಾಗೂ ಅನುಷ್ಠಾನಿಸಿದ ಕಾಮಗಾರಿಗಳ ವಾರ್ಷಿಕ ಲೆಕ್ಕಪರಿಶೋಧನೆ ಮಾಡಲಾಗುತ್ತದೆ ಎಂದರು.

ಇ-ಜಮಾಬಂದಿ ಎಂದರೆ ಜಮಾಬಂದಿಯ ಆನ್‌ಲೈನ್ ಆವೃತ್ತಿ ಆಗಿದ್ದು, ಇದು ಹಕ್ಕುಗಳ ದಾಖಲೆ ಅಥವಾ ಭೂ ಮಾಲೀಕತ್ವದ ದಾಖಲೆಗಳಿಗೆ ಅಧಿಕೃತ ದೃಢೀಕರಣವನ್ನು ನೀಡುತ್ತದೆ. ಹರಿಯಾಣ ಸೇರಿದಂತೆ ಇತರ ರಾಜ್ಯಗಳು ಈಗಾಗಲೇ ಜಮಾಬಂದಿಯ ವಿದ್ಯುನ್ಮಾನ ಆವೃತ್ತಿಯನ್ನು ಅಭಿವೃದ್ಧಿಪಡಿಸಿ ಯಶಸ್ವಿಯಾಗಿದ್ದು, ಇದೇ ಮಾದರಿಯಲ್ಲಿ ಕರ್ನಾಟಕದಲ್ಲೂ ಇ-ಜಮಾಬಂದಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಹೇಳಿದರು.

ನಾಗರಿಕರಿಗೆ ಯೋಜನೆಗಳ ನಿಖರ ಮಾಹಿತಿ ಒದಗಿಸುವುದು. ಸಾರ್ವಜನಿಕ ಕುಂದುಕೊರತೆ, ಪರಿಹಾರ ಹಾಗೂ ಗ್ರಾಮ ಪಂಚಾಯತಿಗಳ ಸ್ಪಂದನಶೀಲ ಆಡಳಿತಕ್ಕೆ ಅಗತ್ಯ ಕ್ರಮ ಕೈಗೊಳ್ಳುವುದು ಜಮಾಬಂದಿ ಪ್ರಕ್ರಿಯೆಯ ಉದ್ದೇಶವಾಗಿದೆ ಎಂದರು.

ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳಾದ ಕುಡಿಯುವ ನೀರು, ವಸತಿ, ಮಹಾತ್ಮಗಾಂಧಿ ನರೇಗಾ ಯೋಜನೆ, 15ನೇ ಹಣಕಾಸು ಇತ್ಯಾದಿ ಕಾರ್ಯಕ್ರಮ /ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಖಾತರಿಪಡಿಸುವುದು ಹಾಗೂ ಗ್ರಾಮ ಪಂಚಾಯತಿ ಆಡಳಿತದಲ್ಲಿ ಪಾರದರ್ಶಕತೆ ತರುವುದು ಜಮಾಬಂದಿ ಆಯೋಜನೆಯ ಉದ್ದೇಶವಾಗಿದೆ. ನ್ಯೂಲೈನ್ ಭೌತಿಕವಾಗಿ ನಡೆಯುವ ಈ ಪ್ರಕ್ರಿಯೆಯನ್ನು ಆನ್‌ಲೈನ್ ಮೂಲಕ ನಿರ್ವಹಿಸಲು ಈ ತಂತ್ರಾಂಶವನ್ನು ಸರ್ಕಾರ ಮುಂಬರುವ ದಿನಗಳಲ್ಲಿ ಅಭಿವೃದ್ಧಿಪಡಿಸಲಿದೆ ಎಂದು ತಿಳಿಸಿದರು.

ಜಮಾಬಂದಿ ಪ್ರಕ್ರಿಯೆಯಲ್ಲಿ ಸರ್ಕಾರ ಮತ್ತು ಸ್ಥಳೀಯ ಆಡಳಿತ ಜಮಾಬಂದಿಯ ವೇಳಾಪಟ್ಟಿ ಪ್ರಕಟಿಸುತ್ತದೆ. ಲೆಕ್ಕಿಗರು ಗ್ರಾಮಸ್ಥರ ಸಹಯೋಗದೊಂದಿಗೆ ಭೂ ದಾಖಲೆಗಳನ್ನು ಪರಿಶೀಲಿಸುತ್ತಾರೆ. ಯಾವುದೇ ಭೂ ಸ್ವಾಮ್ಯ, ವಾರಸು ಹಕ್ಕು ಅಥವಾ ದಾಖಲೆಗಳ ತಿದ್ದುಪಡಿ ಈ ಹಂತದಲ್ಲಿ ಮಾಡಬಹುದು, ತಹಶೀಲ್ದಾರ್ ಮತ್ತು ಇತರ ಅಧಿಕಾರಿಗಳು ದಾಖಲೆಗಳನ್ನು ದೃಢೀಕರಿಸುತ್ತಾರೆ. ಪರಿಶೀಲನೆಯ ನಂತರ ಜಮಾಬಂದಿಯ ಅಂತಿಮ ದಾಖಲೆಗಳನ್ನು ಸಾರ್ವಜನಿಕರಿಗೆ ಲಭ್ಯವಿರಿಸಲಾಗುತ್ತದೆ ಎಂದು ತಿಳಿಸಿದರು.

ಭೂ-ಕಂದಾಯ ಕಾಯ್ದೆಯಲ್ಲಿ ಸಮಗ್ರ ಬದಲಾವಣೆ ಪ್ರಸ್ತುತ ಕರ್ನಾಟಕ ಸರ್ಕಾರದ ಭೂಮಿ ಪೋರ್ಟಲ್ ನಲ್ಲಿ ಭೂದಾಖಲೆಗಳನ್ನು ಪರಿಶೀಲಿಸುವ ಹಾಗೂ ಅಗತ್ಯ ದಾಖಲೆಗಳನ್ನು ಡೌನ್‌ಲೋಡ್ ಮಾಡುವ ಆಯ್ಕೆಯನ್ನು ನೀಡಲಾಗಿದೆ. ಭೂಮಿ ಹಕ್ಕುಪತ್ರ, ಖಾತಾ ವಿವರಗಳು, ಭೂ ನಕ್ಷೆ ಮತ್ತು ಇತರ ದಾಖಲೆಗಳನ್ನು ಆನ್‌ಲೈನ್‌ನಲ್ಲಿ ಪಡೆಯಲು ಅವಕಾಶ ನೀಡಲಾಗಿದೆ ಎಂದರು.

ಪ್ರಸ್ತುತ ಚಾಲ್ತಿಯಲ್ಲಿರುವ ಕರ್ನಾಟಕ ಭೂ-ಕಂದಾಯ ಕಾಯ್ದೆಯು ತುಂಬಾ ಹಳೆಯದಾಗಿದ್ದು, ಕ್ಷೇತ್ರ ಮಟ್ಟದಲ್ಲಿ ಅನುಷ್ಠಾನಗೊಳಿಸಲು ಹಾಗೂ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಹೆಚ್ಚಿನ ಸ್ಪಷ್ಟತೆ ನೀಡುವ ಹಿನ್ನೆಲೆಯಲ್ಲಿ ಸಮಗ್ರವಾಗಿ ಅಧ್ಯಯನ ನಡೆಸಿ, ಹೊಸ ಭೂಕಂದಾಯ ಕಾಯ್ದೆ ತರಲಾಗುವುದು ಎಂದು ಹೇಳಿದರು

# ಮುಖ್ಯಮಂತ್ರಿಗಳಿಗೆ ಅಮೃತ ಬೀಜ ಪುಸ್ತಕ ಹಿರಿಯರ ಸೇವೆ ಶ್ಲಾಘನೀಯ ಎಂದ ಸಿಎಂ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.12:ಅಮೃತ ಸ್ವಾತಂತ್ರ್ಯೋತ್ಸವ ಸಂದರ್ಭದಲ್ಲಿ ಮಾಧ್ಯಮದ ಹಿರಿಯ ಪತ್ರಕರ್ತರ ಮನೆಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವೇ ಭೇಟಿ ನೀಡಿ ಕುಟುಂಬಸ್ಥರ ಸಮ್ಮುಖದಲ್ಲಿ ಹಿರಿಯರನ್ನು ಗೌರವಿಸಿರುವುದು ಅಭಿನಂದನಾರ್ಹವಾದದ್ದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಕ್ರಿಯಿಸಿದರು.

ಹಿರಿಯ ಪತ್ರಕರ್ತರುಗಳ ಮನೆಗೆ ಭೇಟಿ ನೀಡಿ ಕೆಯುಡಬ್ಲ್ಯೂಜೆ ಗೌರವ ನೀಡಿದ್ದಲ್ಲದೆ, ಅವರ ಅನುಭವ ಮತ್ತು ಅಭಿಪ್ರಾಯಗಳನ್ನು ದಾಖಲೀಕರಣ ಮಾಡಿರುವ ವಿಷಯವನ್ನು ವಿಧಾನಸೌಧದಲ್ಲಿ ಮುಖ್ಯಮಂತ್ರಿಗಳ ಗಮನಕ್ಕೆ ತಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು, ಈ ಬಗ್ಗೆ ಪುಸ್ತಕವನ್ನು ಹೊರ ತಂದಿರುವುದಾಗಿ ಅವರಿಗೆ ಅಮೃತ ಬೀಜ ಪುಸ್ತಕ ಪ್ರತಿಯನ್ನು ನೀಡಿದರು.

ಪುಸ್ತಕದಲ್ಲಿದ್ದ ಮೊದಲ ಹೆಸರುಗಳು ಕಲ್ಲೇಶಿವೋತ್ತಮರಾವ್ ಮತ್ತು ಟಿಜೆಎಸ್ ಜಾರ್ಜ್ ಅವರದು. ಇದನ್ನು ನೋಡಿದ ಸಿಎಂ, ಇವರಿಗೆಲ್ಲ ತೊಂಬತ್ತು ವರ್ಷ ದಾಟಿರಬೇಕಲ್ವಾ? ಈಗ ಹೇಗಿದ್ದಾರೆ? ಎಂದು ಕುತೂಹಲದಿಂದ ಕೇಳಿ ತಿಳಿದುಕೊಂಡರು. ಆ ಕಾಲಘಟ್ಟದ ಹಿರಿಯರುಗಳ ಅನುಭವ ದೊಡ್ಡದು. ಅದನ್ನು ದಾಖಲೆ ಮಾಡಿರುವುದು ಒಳ್ಳೆಯ ಕೆಲಸ ಎಂದು ಹೇಳಿದರು.

ತೊಂಬತ್ತು ವಸಂತ ದಾಟಿರುವ ಪಿ.ರಾಮಯ್ಯ ಅವರು ಇತ್ತೀಚೆಗೆ ಆಸ್ಪತ್ರೆಗೆ ದಾಖಲಾಗಿದ್ದರು. ಈಗ ಸುಧಾರಿಸಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದಾಗ, ಅವರು ಬೇಗ ಗುಣಮುಖರಾಗಲಿ ಎಂದರು.

ಹಿರಿಯರನ್ನು ಅವರ ಮನೆಯಲ್ಲಿಯೇ ಗೌರವಿಸಿರುವುದು ನಿಮಗೂ, ಪತ್ರಕರ್ತರ ಸಂಘಕ್ಕೂ ಗೌರವ ತರುವ ಸಂಗತಿ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಮತ್ತಿತರರು ಇದ್ದರು.

# ದೇವಸ್ಥಾನಗಳ ಆದಾಯ ಅನ್ಯ ಕಾರ್ಯಗಳಿಗೆ ಬಳಸಲ್ಲ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮಾ.12: ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಗೊಳಪಡುವ ದೇವಸ್ಥಾನಗಳ ಆದಾಯವನ್ನು ಸರ್ಕಾರ ಅನ್ಯ ಕಾರ್ಯಗಳಿಗೆ ಬಳಸಿಕೊಳ್ಳುವುದಿಲ್ಲ ಎಂದು ಧಾರ್ಮಿಕ ದತ್ತಿ ಸಚಿವ ರಾಮಲಿಂಗಾ ರೆಡ್ಡಿ ಸ್ಪಷ್ಟಪಡಿಸಿದ್ದಾರೆ.

ವಿಧಾನ ಪರಿಷತ್‌ನಲ್ಲಿ ಸದಸ್ಯೆ ಭಾರತಿ ಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಎ ಗ್ರೇಡ್‌ನಿಂದ 8 ಕೋಟಿ ಆದಾಯ ಬರುತ್ತದೆ. ಈ ಹಣವನ್ನು ದೇವಸ್ಥಾನದ ಅಭಿವೃದ್ಧಿ ಕಾರ್ಯಗಳಿಗೆ ಬಳಸಲಾಗುತ್ತದೆಯೇ ವಿನಃ ಅನ್ಯ ಕಾರ್ಯಗಳಿಗೆ ಬಳಕೆ ಮಾಡುವುದಿಲ್ಲ ಎಂದು ಪುನರುಚ್ಚರಿಸಿದರು.

ರಾಜ್ಯ ಧಾರ್ಮಿಕ ಪರಿಷತ್‌ನಲ್ಲಿ ಅಧ್ಯಕ್ಷರು, 8 ಜನ ಸಮಿತಿ ಸದಸ್ಯರು ಹಾಗೂ ಅರ್ಚಕರು ಇರುತ್ತಾರೆ. ದೇವಸ್ಥಾನಗಳಿಂದ ಬರುವ ಆದಾಯವನ್ನು ಅವರೇ ಹೇಗೆ ವ್ಯಯಿಸಬೇಕು ಎಂಬುದನ್ನು ಚರ್ಚೆ ಮಾಡುತ್ತಾರೆ. ಇದರಲ್ಲಿ ಸರ್ಕಾರ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಹೇಳಿದರು.

ಮುಜರಾಯಿ ಇಲಾಖೆ ವ್ಯಾಪ್ತಿಯಲ್ಲಿ ಎ, ಬಿ ಮತ್ತು ಸಿ ಗ್ರೇಡ್‌ಗಳಾಗಿ ವಿಂಗಡಿಸಲಾಗಿದೆ. ರಾಜ್ಯದಲ್ಲಿ ಒಟ್ಟು 1,86,000 ದೇವಸ್ಥಾನಗಳಿವೆ. ಇದರಲ್ಲಿ ಎ ವರ್ಗದ 205, ಬಿ ವರ್ಗದ 193 ಹಾಗೂ ಸಿ ವರ್ಗದ 34,166 ದೇವಸ್ಥಾನಗಳಿವೆ ಎಂದು ವಿವರಿಸಿದರು.

5 ಕೋಟಿಗಿಂತ ಹೆಚ್ಚು ಆದಾಯವಿದ್ದರೆ ಎ ಗ್ರ?ಡ್, 2 ಕೋಟಿಯೊಳಗಿದ್ದರೆ ಬಿ ಗ್ರೇಡ್ ಹಾಗೂ 5 ಲಕ್ಷಕ್ಕಿಂತ ಕಡಿಮೆ ಇದ್ದರೆ ಸಿ ಗ್ರೇಡ್ ಎಂದು ವರ್ಗಾಯಿಸಲಾಗುತ್ತದೆ. ದೇವಸ್ಥಾನಗಳಿಗೆ ಭಕ್ತರಿಂದ ಬರುವ ಆದಾಯವನ್ನು ಆಡಳಿತ ಮಂಡಳಿಯವರೇ ನಿರ್ವಹಣೆ ಮಾಡುವುದರಿಂದ ಸರ್ಕಾರ ಇದರಲ್ಲಿ ಹಸ್ತಕ್ಷೇಪ ಮಾಡುತ್ತದೆ ಎಂಬುದು ಸತ್ಯಕ್ಕೆ ದೂರವಾದ ಮಾತು ಎಂದು ರಾಮಲಿಂಗಾರೆಡ್ಡಿ ಸ್ಪಷ್ಟಪಡಿಸಿದರು.

# ಕುಸುಬೆ ಖರೀದಿಗೆ ಶೀಘ್ರ ನೋಂದಣಿ ಆರಂಭ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ:12:ಬೆಂಬಲ ಬೆಲೆ ಯೋಜನೆಯಲ್ಲಿ ಕುಸುಬೆ ಖರೀದಿ ಪ್ರಕ್ರಿಯೆ ಶೀಘ್ರದಲ್ಲಿ ಆರಂಭವಾಗಲಿದ್ದು, ರೈತರು ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಮನವಿ ಮಾಡಿದ್ದಾರೆ.

ಬೀದರ್, ಧಾರವಾಡ, ದಾವಣಗೆರೆ, ಗದಗ, ವಿಜಯಪುರ, ಕಲಬುರಗಿ, ಚಿತ್ರದುರ್ಗ, ಕೊಪ್ಪಳ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಖರೀದಿ ಕೇಂದ್ರಗಳನ್ನು ಆರಂಭಿಸಲಿದ್ದು, ಪ್ರತಿ ಕ್ವಿಂಟಲ್ಗೆ ರೂ 5,940 ಗಳನ್ನು ನಿಗದಿಪಡಿಸಲಾಗಿದೆ. ಪ್ರತಿ ಎಕರೆಗೆ ಐದು ಕ್ವಿಂಟಲ್ನಂತೆ ಒಬ್ಬ ರೈತರಿಂದ ಗರಿಷ್ಠ 20 ಕ್ವಿಂಟಲ್ ಖರೀದಿ ಮಾಡಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

ಖರೀದಿ ಪ್ರಕ್ರಿಯೆ ನಂತರ ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಹಣ ಜಮಾ ಮಾಡಲಾಗುವುದು.

# ಹೋಳಿ ಕಲಬುರಗಿ ನಗರ ಹಾಗೂ ಜಿಲ್ಲೆಯಾದ್ಯಂತ ಮದ್ಯ ಮಾರಾಟ ನಿಷೇಧಿಸಿ ಡಿ.ಸಿ. ಆದೇಶ

ಕಲಬುರಗಿ,ಮಾ.12:ಹೋಳಿ ಹಬ್ಬದ ಆಚರಣೆ ಹಿನ್ನೆಲೆಯಲ್ಲಿ ಕಲಬುರಗಿ ನಗರ ಹಾಗೂ ಜಿಲ್ಲೆಯಾದ್ಯಂತ ಇದೇ ಮಾರ್ಚ್ 13ರ ಬೆಳಗಿನ 6 ರಿಂದ ಮಾರ್ಚ್ 15 ರ ಸಂಜೆ 6 ಗಂಟೆಯವರೆಗೆ ಎಲ್ಲಾ ತರಹದ ಮದ್ಯ ಮಾರಾಟ ಮಾಡುವುದನ್ನು ನಿಷೇಧಿಸಿ, ಬಾರ್ ಮತ್ತು ರೆಸ್ಟೋರೆಂಟ್‌ಗಳನ್ನು ಮುಚ್ಚುವಂತೆ ಕಲಬುರಗಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ಬಿ. ಫೌಜಿಯಾ ತರನ್ನುಮ್ ಅವರು ಬುಧವಾರ ಆದೇಶ ಹೊರಡಿಸಿದ್ದಾರೆ. ಈ ಹೋಳಿ ಹಬ್ಬದ ಸಂದರ್ಭದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಅನ್ವಯ ಈ ಆದೇಶ ಹೊರಡಿಸಲಾಗಿದೆ

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.